ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 46
30–7–2025 ಬುಧವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 46

## ಶ್ರೀ ಮಹರ್ಷಿ ವಾಲ್ಮೀಕಿ ಕಂಚಿನ ಪ್ರತಿಮೆ ನಿರ್ಮಾಣ : ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

ದಾವಣಗೆರೆ : ಜಿಲ್ಲೆಯ ಹರಿಹರ ತಾಲ್ಲೂಕಿನ ಜಿಗಳಿ ಗ್ರಾಮದ ಅಗಸಿಬಾಗಿಲ ಬಳಿ ಪೂರ್ವ–ಪಶ್ಚಿಮ 12.50 ಹಾಗೂ ಉತ್ತರ–ದಕ್ಷಿಣವಾಗಿ 14 ಅಡಿ ಶ್ರೀ ಮಹರ್ಷಿ ವಾಲ್ಮೀಕಿ ಕಂಚಿನ ಪ್ರತಿಮೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗುತ್ತಿದೆ. ಈ ಕುರಿತು ಸ್ಥಳೀಯವಾಗಿ ಯಾವುದೇ ದೂರು ಮತ್ತು ಆಕ್ಷೇಪಣೆಗಳು ಇದ್ದಲ್ಲಿ ಆಗಸ್ಟ್ 20ರೊಳಗಾಗಿ ಲಿಖಿತವಾಗಿ ಜಿಗಳಿ ಗ್ರಾಮ ಪಂಚಾಯಿತಿ ಕಾರ್ಯಾಲಯಕ್ಕೆ ಸಲ್ಲಿಸಬಹುದು ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ಕಾರ್ಯಾಗಾರ

ದಾವಣಗೆರೆ : ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಜುಲೈ 30 ರಂದು ಬೆಳಿಗ್ಗೆ 11 ಗಂಟೆಗೆ ಮಾನವ ಕಳ್ಳ ಸಾಗಾಣಿಕೆ ತಡೆ ಕುರಿತು ಕಾರ್ಯಾಗಾರವನ್ನು ಉಪನಿರ್ದೇಶಕರ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ.ಮ.ಕರೆಣ್ಣವರ ಉದ್ಘಾಟಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಜಾನಾಯ್ಕ್.ಕೆ.ಎಸ್ ಅಧ್ಯಕ್ಷತೆ ವಹಿಸುವರು.

ಮಕ್ಕಳ ರಕ್ಷಣಾ ಆಯೋಗದ ಮಾಜಿ ಸದಸ್ಯರು ಹಾಗೂ ಜಿಲ್ಲಾ ಮಾನವ ಕಳ್ಳ ಸಾಗಾಣಿಕೆ ತಡೆ ಸಮಿತಿ ಸದಸ್ಯರಾದ ರೂಪಾನಾಯ್ಕ್ ಉಪಸ್ಥಿತರಾಗಿರುವರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕವಿತಾ.ಟಿ.ಎನ್, ವಕೀಲರಾದ ಅನಿತಾ ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸುವರು. ಜಿಲ್ಲಾ ನಿರೂಪಣಾಧಿಕಾರಿ ಗುರುಪ್ರಸಾದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಪೂರ್ಣಿಮಾ, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಲಿಂಗತಜ್ಞರಾದ ರಾಧಾ ಪಾಲ್ಗೊಳ್ಳುವರು.

## ಎತ್ತಿನ ಬಂಡಿ ಓಟ ಮತ್ತು ಮಲ್ಲಕಂಬ ಕ್ರೀಡೆಗೆ ಅರ್ಜಿ ಆಹ್ವಾನ

ದಾವಣಗೆರೆ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಸಂಬಂಧಿಸಿದಂತೆ ಪ್ರಸಕ್ತ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ 397 ರಲ್ಲಿ ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಬ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು

ಎತ್ತಿನಬಂಡೆ ಕ್ರೀಡೆಯನ್ನು ಪ್ರೋತ್ಸಾಹಿಸಲು ಮತ್ತು ಉತ್ತೇಜಿಸಲು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಆಯೋಜಿಸುವ 15 ಸಂಘ–ಸಂಸ್ಥೆಗಳಿಗೆ ತಲಾ ರೂ.2 ಲಕ್ಷಗಳಂತೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು ಆಯ್ಕೆ ಮಾಡುವ ಸಂಘ–ಸಂಸ್ಥೆಗಳಿಗೆ ಅನುದಾನ ನೀಡಲಾಗುವುದು.

ದಾವಣಗೆರೆ ಜಿಲ್ಲೆಯಲ್ಲಿ ಎತ್ತಿನಬಂಡಿ ಓಟ ಕ್ರೀಡೆಯನ್ನು ಆಯೋಜಿಸಲು ಇಚ್ಛಿಸುವ ಸಂಘ–ಸಂಸ್ಥೆಗಳು ಆಗಸ್ಟ್ 2 ರ ಒಳಗಾಗಿ ಸಂಘ–ಸಂಸ್ಥೆಗಳ ಪೂರ್ಣ ವಿವರಗಳನ್ನು ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಚೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ದಾವಣಗೆರೆ ದೂ.ಸಂ 08192–237490 ಸಂಪರ್ಕಿಸಲು ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಮಡಿವಾಳ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಆ.10 ಕೊನೆ ದಿನ



ದಾವಣಗೆರೆ: ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದಿಂದ ವಿನೋಬ ನಗರದ 1ನೇ ಮುಖ್ಯರಸ್ತೆ, 17ನೇ ತಿರುವಿನಲ್ಲಿರುವ ಶ್ರೀಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ಮುಂಬರುವ ಆಗಸ್ಟ್ 17ರಂದು ಮಡಿವಾಳ ಸಮುದಾಯದ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಮುದಾಯದ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಆಗಸ್ಟ್ 10 ಕೊನೆಯ ದಿನ ಆಗಿರುತ್ತದೆ ಎಂದು ದಾವಣಗೆರೆ ಜಿಲ್ಲಾ ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ತಿಳಿಸಿದ್ದಾರೆ.

ಆಗಸ್ಟ್ 17ರಂದು ಭಾನುವಾರ ವಿನೋಬಾ ನಗರದ ಶ್ರೀ ಮಡಿವಾಳ ಮಾಚಿದೇವ ಸಮುದಾಯ ಭವನದಲ್ಲಿ ನಡೆಯುಲಿರುವ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರ ಸಮಕ್ಷಮದಲ್ಲಿಮಡಿವಾಳ ಸಮುದಾಯದ ಪ್ರತಿಭಾನ್ವಿತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು.

ಆದ್ದರಿಂದ 2024–25ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಶೇ.70ಕ್ಕಿಂತ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಆಗಸ್ಟ್ 10ರೊಳಗೆ ತಮ್ಮ ಕೈ ಬರಹದ ಅರ್ಜಿಗಳನ್ನು ಶ್ರೀ ಮಡಿವಾಳ ಮಾಚಿದೇವ ಸಮುದಾಯ ಭವನ, 1ನೇ ಮುಖ್ಯ ರಸ್ತೆ, 17ನೇ ತಿರುವು ವಿನೋಬಾ ನಗರ, ದಾವಣಗೆರೆ ಇಲ್ಲಿಗೆ ಖುದ್ದಾಗಿ ಇಲ್ಲಿಗೆ ತಲುಪಿಸಬೇಕು.

ಅರ್ಜಿಯೊಂದಿಗೆ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪಾಸಾದ ಅಂಕಪಟ್ಟಿ, ಟಿಸಿ, ಜಾತಿ ಪ್ರಮಾಣ ಪತ್ರ ಹಾಗೂ 2 ಪಾಸ್‌ಪೋರ್ಟ್ ಸೈಜಿನ ಭಾವಚಿತ್ರಗಳನ್ನು ಕಡ್ಡಾಯವಾಗಿ ಲಗತ್ತಿಸಬೇಕೆಂದು ಮಡಿವಾಳ ಸಮಾಜದ ಪದಾಧಿಕಾರಿಗಳು ತಿಳಿಸಿದ್ದಾರೆ.

## ಡಾ. ಇಂಚರಾ ಡಿ.ಆರ್. ಅವರಿಗೆ ಪಿಎಚ್‌ಡಿ ಪದವಿ




ಮಣಿಪಾಲ: ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಶನ್ (ಒಂಉಇ), ಮಣಿಪಾಲನ ಮಣಿಪಾಲ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ ಭೌತಶಾಸ್ತ್ರ ವಿಭಾಗದಲ್ಲಿ ಸಂಶೋಧನೆ ನಡೆಸಿದ ಇಂಚರಾ ಡಿ.ಆರ್. ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ಅವರ ಸಂಶೋಧನಾ ಪ್ರಬಂಧದ ಶೀರ್ಷಿಕೆ = Study of Structural, Optical, Multiferroic and Photo response properties of Hexagonal Manganites. ಈ ಸಂಶೋಧನೆ, ಪ್ರಾಧ್ಯಾಪಕಿ ಡಾ. ಮಮತಾ ಡಿ. ದೈವಜ್ಞ ಅವರ ಮಾರ್ಗದರ್ಶನದಲ್ಲಿ ನಡೆದಿದೆ. ಡಾ. ಇಂಚರಾ ಡಿ.ಆರ್. ಅವರು ಶಿವಮೊಗ್ಗದ ಎಟಿಎನ್ಸಿ ಕಾಲೇಜಿನ ಮಾಜಿ ಪ್ರಾಂಶುಪಾಲರಾದ ಡಾ. ಡಿ.ಜಿ. ರಾಮೇಶ್ ಹಾಗೂ ಗೃಹಿಣಿಯಾದ ಅಂಬಿಕಾ ರಾಮೇಶ್ ಅವರ ಮಗಳು. ತಂದೆಯೆಂಬ ಬೆನ್ನೆಲುಬು ಶಕ್ತಿಯಾಗಿ, ತಾಯಿಯ ತ್ಯಾಗದ ನೆರಳಲ್ಲಿ ಈ ಸಾಧನೆ ಸಾಧ್ಯವಾಗಿದೆ ಎಂದು ಅವರು ಹೃದಯಂಗಮವಾಗಿ ತಿಳಿಸಿದ್ದಾರೆ.
ನನ್ನ ತಂದೆ ನನಗೆ ಈ ದಾರಿಗೆ ದಿಕ್ಕು ತೋರಿಸಿದರು. ಆದರೆ ಅಂತಿಮ ಗುರಿ ನೋಡಿ ಹೆಮ್ಮೆಪಡುವ ಮೊದಲು ನಮ್ಮನ್ನೆಲ್ಲಾ ಬಿಟ್ಟುಹೋದರು. ಈ ಸಾಧನೆ ಅವರಿಗೆ ಅರ್ಪಣೆ ಎಂದು ಡಾ. ಇಂಚರಾ ತಮ್ಮ ಭಾವನೆಯನ್ನು ಹಂಚಿಕೊಂಡರು.

# ಶಾಸಕರ ಬೇಗುದಿಗೆ ಸಿಎಂ ಮದ್ದು



ಬೆಂಗಳೂರು :ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 2 ವರ್ಷಗಳ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ಶಾಸಕರ ದೂರು ದುಮ್ಮಾನಗಳಿಗೆ ಕಿವಿಗೊಟ್ಟು ಅವರ ಸಮಸ್ಯೆಗಳಿಗೆ ಪರಿಹಾರ ದೊರಕಿಸುವ ಪ್ರಯತ್ನ ಆರಂಭಿಸಿದ್ದು, ಇಂದಿನಿಂದ 4 ದಿನಗಳ ಕಾಲ ಕಾಂಗ್ರೆಸ್ನ ಎಲ್ಲ ಶಾಸಕರ ಜತೆ ಸಭೆ ನಡೆಸುವರು.

ನಾಡಿನ ಶಕ್ತಿ ಕೇಂದ್ರ ವಿಧಾನಸೌಧದಲ್ಲೇ ಕುಳಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾವಾರು ಕಾಂಗ್ರೆಸ್ ಶಾಸಕರ ಜತೆ ಸಭೆ ನಡೆಸಿ ಅವರ ಅಹವಾಲನ್ನು ಆಲಿಸಿ ಅವುಗಳಿಗೆ ಪರಿಹಾರ ದೊರಕಿಸುವ ಪ್ರಯತ್ನ ನಡೆಸುವರು.

ತಮ್ಮ ತವರು ಜಿಲ್ಲೆ ಮೈಸೂರಿನಿಂದಲೇ ಶಾಸಕರ ಅಹವಾಲು ಆಲಿಕೆಯ ಸಭೆ ಆರಂಭಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಇಂದು ಸಂಜೆ 4 ಗಂಟೆಯಿಂದ ರಾತ್ರಿ 8ರ ವರೆಗೂ ಮೈಸೂರು, ಚಾಮರಾಜನಗರ, ತುಮಕೂರು, ಕೊಡಗು ಮತ್ತು ಹಾಸನ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳ ಕೈ ಶಾಸಕರ ಜತೆ ಸಭೆ ನಡೆಸಲಿದ್ದು, ಈ ಸಭೆಯಲ್ಲಿ ಆಯಾ ಜಿಲ್ಲೆಗಳ ಉಸ್ತುವಾರಿ ಸಚಿವರುಗಳು ಪಾಲ್ಗೊಳ್ಳುವರು.

ಈ ಶಾಸಕರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪ್ರತೀ ಶಾಸಕರ ಜತೆಯೂ ಮಾತನಾಡಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಶಾಸಕರಿಗೆ ಆಗಬೇಕಾಗಿರುವ ಕೆಲಸಗಳು, ಸಚಿವರುಗಳ ಮಟ್ಟದಲ್ಲಿ ಆಗಬೇಕಾಗಿರುವ ಕೆಲಸಗಳು ಎಲ್ಲದರ ಬಗ್ಗೆಯೂ ಸಮಾಲೋಚನೆ ನಡೆಸುವರು.

ಕೆಲ ಜಿಲ್ಲಾ ಉಸ್ತುವಾರಿ ಸಚಿವರುಗಳು ಸೇರಿದಂತೆ ಹಲವು ಸಚಿವರುಗಳು ಶಾಸಕರುಗಳಿಗೆ ಸ್ಪಂದಿಸುತ್ತಿಲ್ಲ ಎಂಬ ದೂರುಗಳಿಗೂ ಮುಖ್ಯಮಂತ್ರಿಗಳು ಪರಿಹಾರ ದೊರಕಿಸಕೊಡಲಿದ್ದು, ಶಾಸಕರುಗಳಿಗೆ ಸ್ಪಂದಿಸುವಂತೆ ಸಚಿವರುಗಳಿಗೂ ಕಿವಿಮಾತು ಹೇಳುವರು.

ಕ್ಷೇತ್ರದ ಅಭಿವೃದ್ಧಿಗೆ ಅನುದಾನ ಸಿಗದ ಬಗ್ಗೆ ಹಾಗೂ ಸಚಿವರುಗಳ ಕಾರ್ಯವೈಖರಿಯ ಬಗ್ಗೆ ಅಸಮಾಧಾನಗೊಂಡಿದ್ದ ಶಾಸಕರ ಅಹವಾಲು ಆಲಿಸಿದ್ದ ಕಾಂಗ್ರೆಸ್ ಹೈಕಮಾಂಡ್ನ ಸೂಚನೆಯ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದಿನಿಂದ 4 ದಿನಗಳ ಕಾಲ ಶಾಸಕರ ಜತೆ ಸಭೆ ನಡೆಸಿ ಅವರ ದೂರು–ದುಮ್ಮಾನಗಳನ್ನು ಆಲಿಸಿ ಶಾಸಕರುಗಳ ಅಸಮಾಧಾನ, ಮುನಿಸನ್ನು ತಣಿಸುವ ಪ್ರಯತ್ನ ನಡೆಸುವರು.

ರಾಜ್ಯ ಕಾಂಗ್ರೆಸ್ ಉಸ್ತುವಾರಿ ಸುರ್ಜೇವಾಲಾ ಅವರು ಕಳೆದ ತಿಂಗಳು ಎಲ್ಲ ಶಾಸಕರ ಜತೆ ಒನ್ ಟು ಒನ್ ಸಭೆ ನಡೆಸಿ ಅವರ ಅಹವಾಲನ್ನು ಕೇಳಿದ್ದರು. ಈ ಒನ್ ಟು ಒನ್ ಸಭೆಗಳಲ್ಲಿ ಶಾಸಕರುಗಳು ಸಚಿವರುಗಳ ಕಾರ್ಯವೈಖರಿ ವಿರುದ್ಧ ದೂರುಗಳ ಸುರಿಮಳೆ ಗೈದಿದ್ದರು. ಹಾಗೆಯೇ, ಕ್ಷೇತ್ರದ ಅಭಿವೃದ್ಧಿಗೆ ಅನುದಾನದ ಬೇಡಿಕೆಯನ್ನು ಇಟ್ಟಿದ್ದರು. ಶಾಸಕರ ಸಭೆಯ ನಂತರ ಸುರ್ಜೇವಾಲಾ ಅವರು ಸಚಿವರುಗಳ ಸಭೆ ನಡೆಸಿ ಶಾಸಕರುಗಳಿಗೆ ಸ್ಪಂದಿಸುವಂತೆ ಸೂಚನೆ ನೀಡಿದ್ದರು. ಜೊತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯರವರಿಗೂ ಶಾಸಕರ ಜೊತೆ ಸಭೆ ನಡೆಸುವಂತೆ ಹೇಳಿದ್ದರು.

ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ನ ಎಲ್ಲ ಶಾಸಕರುಗಳಿಗೆ ತಲಾ 50 ಕೋಟಿ ರೂ.ಗಳ ಅನುದಾನ ಬಿಡುಗಡೆ ಮಾಡುವುದಾಗಿ ಘೋಷಿಸಿ ಸ್ವಲ್ಪಮಟ್ಟಿಗೆ ಶಾಸಕರ ಅಸಮಾಧಾನವನ್ನು ಹೋಗಲಾಡಿಸುವ ಪ್ರಯತ್ನ ನಡೆಸಿದ್ದರು.

ಈ 50 ಕೋಟಿ ರೂ. ಅನುದಾನವನ್ನು ಯಾವೆಲ್ಲ ಕಾಮಗಾರಿಗಳಿಗೆ ಬಳಸಬೇಕು ಎಂಬ ಬಗ್ಗೆಯೂ ಮುಖ್ಯಮಂತ್ರಿಗಳು ಶಾಸಕರುಗಳಿಗೆ ಮಾರ್ಗದರ್ಶನ ಮಾಡುವರು.

### ಸಿಎಂಗೆ ಅಧಿಕಾರವಿದೆ

ಶಾಸಕರ ಸಮಸ್ಯೆಗಳನ್ನು ಆಲಿಸಿ ಅದಕ್ಕೆ ಪರಿಹಾರ ಕಂಡುಕೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಶಾಸಕರ ಜತೆ ಸಭೆ ನಡೆಸಿದ್ದಾರೆ. ಅವರಿಗೆ ಸಭೆ ನಡೆಸುವ ಅಧಿಕಾರವಿದೆ. ನನ್ನನ್ನು ಸಭೆಗೆ ಕರೆದಿಲ್ಲ ಎಂದರೆ ನಿಮಗೆ ಕಷ್ಟವೇನು ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮಾಧ್ಯಮದವರನ್ನೇ ಪ್ರಶ್ನಿಸಿದ್ದಾರೆ.
ಈ ಹಿಂದೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ ಅವರು ಶಾಸಕರ ಜತೆ ಪ್ರತ್ಯೇಕ ಸಭೆ ನಡೆಸಿದ್ದರು. ಆಗ ಶಾಸಕರಿಂದ ದೂರುಗಳು ಬಂದಿದ್ದವು. ಅವುಗಳನ್ನು ಪರಿಹರಿಸುವಂತೆ ಸುರ್ಜೇವಾಲಾ ಅವರು ಮುಖ್ಯಮಂತ್ರಿಗಳಿಗೆ ಸಲಹೆ ನೀಡಿದ್ದರು. ಅದರಂತೆ ಮುಖ್ಯಮಂತ್ರಿಗಳು ಸಭೆ ನಡೆಸುತ್ತಿದ್ದಾರೆ ಎಂದರು.
ಬೆಂಗಳೂರಿನ ಸಮಸ್ಯೆಗಲು ಭಿನ್ನವಾಗಿವೆ. ಹಾಗಾಗಿ ಬೆಂಗಳೂರು ಶಾಸಕರ ಸಭೆಗೆ ಬೇರೆ ದಿನ ನಿಗದಿ ಮಾಡಲಾಗುತ್ತದೆ ಎಂದರು.

### ಕಷ್ಟ–ಸುಖ ಕೇಳುವುದು ಹೊಸದೇನಿಲ್ಲ

ಮುಖ್ಯಮಂತ್ರಿಗಳು ಶಾಸಕರ ಜತೆ ಸಭೆ ನಡೆಸಿ ಅವರ ಕಷ್ಟ–ಸುಖಗಳನ್ನು ಕೇಳುವುದು ಹೊಸದೇನಲ್ಲ. ಈ ಹಿಂದೆಯೂ ಇಂತಹ ಸಭೆಗಳು ನಡೆದಿವೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.
ನಾನು ಈ ಹಿಂದೆ ಕೆಪಿಸಿಸಿ ಅಧ್ಯಕ್ಷನಾಗಿದ್ದಾಗ ಕೆಪಿಸಿಸಿ ಕಚೇರಿಯಲ್ಲೇ ಮುಖ್ಯಮಂತ್ರಿಗಳ ಶಾಸಕರ ಸಭೆ ನಡೆಸಿ ಸಮಸ್ಯೆಗಳನ್ನು ಆಲಿಸಿದ್ದೆವು. ಈಗ ರಾಜ್ಯಸರ್ಕಾರಕ್ಕೆ ಎರಡೂವರೆ ವರ್ಷಗಳು ತುಂಬಿವೆ. ಕ್ಷೇತ್ರವಾರು ಏನೆಲ್ಲ ಅಭಿವೃದ್ಧಿ ಮಾಡಲು ಸಾಧ್ಯವಾಗುತ್ತದೆ ಎನ್ನುವುದನ್ನು ಚರ್ಚೆ ಮಾಡಲಾಗುತ್ತದೆ. ಸಭೆಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಸಹ ಇರುತ್ತಾರೆ ಎಂದರು.
ಸಭೆ ನಡೆಸುವ ಕುರಿತು ನಮ್ಮ ಎಐಸಿಸಿ ಅಧ್ಯಕ್ಷರು ಸೂಚನೆ ಕೊಟ್ಟಿದ್ದರೆ ಅದರಲ್ಲಿ ತಪ್ಪೇನು ಇಲ್ಲ, ಚುನಾವಣಾ ಸಂದರ್ಭದಲ್ಲಿ ಪಕ್ಷ ಜನಗಳಿಗೆ ನೀಡಿದ್ದ ಭರವಸೆಗಳನ್ನು ಯಾವ ರೀತಿ ಅನುಷ್ಠಾನಗೊಳಿಸಲಾಗಿದೆ. ಯಾವ ಭರವಸೆಗಳು ಬಾಕಿ ಇವೆ. ಯಾವ ರೀತಿ ಭರವಸೆಗಳನ್ನು ಜಾರಿ ಮಾಡಬೇಕು ಎಂಬ ಬಗ್ಗೆ ಶಾಸಕರ ಜತೆ ಚರ್ಚೆ ಮಾಡಿದರೆ ತಪ್ಪೇನಿದೆ ಎಂದು ಅವರು ಪ್ರಶ್ನಿಸಿದರು.

## ಗಣೇಶ ಪ್ರತಿಷ್ಠಾಪನೆ ಜು.31ರಂದು ಹಂದರಗಂಭ ಪೂಜೆ




ಹರಿಹರ: ಹಿಂದೂ ಜಾಗರಣ ವೇದಿಕೆ ಹಾಗೂ ಹಿಂದೂ ಮಹಾ ಗಣಪತಿ ಉತ್ಸವ ಸಮಿತಿ ಯಿಂದ 6ನೇ ವರ್ಷದ ಗಣೇಶೋತ್ಸವ ಅಂಗವಾಗಿ ಜು,31ರಂದು ಹಂದರಗಂಭ ಪೂಜೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಹಿಂದೂ ಮಹಾ ಗಣಪತಿ ಉತ್ಸವ ಸಮಿತಿಯ ಅಧ್ಯಕ್ಷ ಸುರೇಶ್ ಪೈಲ್ವಾನ್ ಚಂದಾಪುರ್ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಹಿಂದೂ ಮಹಾಗಣಪತಿ ಉತ್ಸವ ಸಮಿತಿಯಿಂದ ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರತಿವರ್ಷದಂತೆ ಈ ವರ್ಷವೂ ಸಹ ನಗರದ ಪೇಟೆ ಆಂಜನೇಯ ದೇವಸ್ಥಾನದ ಆವರಣದಲ್ಲಿ 6ನೇ ವರ್ಷದ ಗಣೇಶ ಮಹೋತ್ಸವವನ್ನು ಅದ್ದೂರಿಯಾಗಿ ಪ್ರತಿಷ್ಠಾಪನೆ ಮಾಡಲಾಗುತ್ತಿದ್ದು.

ಜುಲೈ 31ರ ಗುರುವಾರ ಬೆಳಿಗ್ಗೆ 11.38ಕ್ಕೆ ಸಲ್ಲುವ ಚಿತ್ತ ನಕ್ಷತ್ರ ಸಪ್ತಮಿ ತಿಥಿಯಂದು ಭಾರತ ಮಾತಾ, ಗೋಮಾತಾ ಪೂಜೆಯ ನಂತರ ಹಂದರಗಂಭಕ್ಕೆ ಪೂಜೆ ಸಲ್ಲಿಸಿದ ನಂತರ ಗಣೇಶ ಉತ್ಸವಕ್ಕೆ ಅಧಿಕೃತ ಚಾಲನೆ ನೀಡಲಾಗುವುದು ಎಂದರು.

ಪ್ರಚಾರ ಸಮಿತಿ ಅಧ್ಯಕ್ಷ ಶೇಖರಗೌಡ್ರು ಮಾತನಾಡಿ, ಕಳೆದ 05 ವರ್ಷಗಳಿಂದ ಹಿಂದೂ ಮಹಾಗಣಪತಿ ಉತ್ಸವವನ್ನು ಹರಿಹರದಲ್ಲಿ ನಗರದ ಹಬ್ಬವಾಗಿ ಅದ್ದೂರಿಯಾಗಿ ಆಚರಣೆ ಮಾಡುತ್ತಾ ಬರಲಾಗುತ್ತಿದ್ದು. ಈ ಬಾರಿಯ 6ನೇ ವರ್ಷದ ಗಣೇಶ ಉತ್ಸವವನ್ನು ಅತ್ಯಂತ ವಿಜೃಂಭಣೆ ಯಿಂದ ಆಚರಣೆ ಮಾಡಲಾಗುತ್ತಿದೆ ಎಂದರು.

ಜು,31 ರಂದು ನಡೆಯಲಿರುವ ಹಂದರಗಂಭ ಪೂಜಾ ಕಾರ್ಯಕ್ರಮಕ್ಕೆ ತಾಲೂಕಿನ ವಿವಿಧ ಮಠಾಧೀಶರು, ವಿವಿಧ ಪಕ್ಷಗಳ ಮುಖಂಡರು, ಸರ್ವ ಸಮಾಜದ ಮುಖಂಡರು, ನಗರದ ಗಣ್ಯರನ್ನು ಯಾವುದೇ ಪಕ್ಷ ಭೇದವಿಲ್ಲದೆ ಆಹ್ವಾನಿಸಲಾಗುತ್ತಿದ್ದು, ಸರ್ವ ಹಿಂದೂ ಸಮಾಜದವರು ಬಾಂಧವರು ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕೆಂದು ಕರೆ ನೀಡಿದರು.

ಗಣೇಶ ಪ್ರತಿಷ್ಠಾಪನೆ: ಆಗಸ್ಟ್ 27ರ ಬುಧವಾರ ಬೆಳಿಗ್ಗೆ 11.53ಕ್ಕೆ ಹಿಂದೂ ಮಹಾ ಗಣಪತಿಯ ಪ್ರತಿಷ್ಠಾಪನೆ ನಡೆಯಲಿದ್ದು, ಸಪ್ಟೆಂಬರ್.4ರ ಗುರುವಾರ ಬೆಳಿಗ್ಗೆ 8ರಿಂದ ನಗರದ ಶಕ್ತಿ ದೇವತೆಗಳ ಸಮ್ಮುಖದಲ್ಲಿ ಶ್ರೀ ನವಗ್ರಹ ಹೋಮ, ಶ್ರೀ ಮಹಾಗಣಪತಿ ಹೋಮ, ಮಹಾ ಮೃತ್ಯುಂಜಯ ಹೋಮ, ಮನ್ಯು ಸೂಕ್ತ ಹೋಮ, ದೇವಿ ಸೂಕ್ತ ಹೋಮ ನಡೆಯಲಿದೆ ಅಂದು ಆಗಮಿಸುವ ಭಕ್ತಾದಿಗಳಿಗೆ ಮಧ್ಯಾಹ್ನ ಪ್ರಸಾದ ವ್ಯವಸ್ಥೆ ಇರುತ್ತದೆ ಎಂದು ವಿವರಿಸಿದರು.

ಅದ್ದೂರಿ ಶೋಭಾಯಾತ್ರೆ: ರಾಜ್ಯದ ಕೆಲ ಜಿಲ್ಲೆಗಳಲ್ಲಿ ಹಿಂದೂ ಮಹಾಗಣಪತಿಯ ಶೋಭಾಯಾತ್ರೆ ಅತ್ಯಂತ ಅದ್ದೂರಿಯಾಗಿ ನಡೆಯುತ್ತಿದ್ದು, ಆ ಸಾಲಿನಲ್ಲಿ ಹರಿಹರದ ಹಿಂದೂ ಮಹಾ ಗಣಪತಿ ವಿಸರ್ಜನಾ ಶೋಭಾಯಾತ್ರೆ ಪ್ರಸಿದ್ಧಿ ಪಡೆದಿದ್ದು. ಸೆ.14ರ ಭಾನುವಾರ ಬೆಳಿಗ್ಗೆ 10ಕ್ಕೆ ನಗರದ ಶ್ರೀ ಪೇಟೆ ಆಂಜನೇಯ ಸ್ವಾಮಿ ದೇವಸ್ಥಾನದ ಆವರಣದಲ್ಲಿ ತಾಲ್ಲೂಕಿನ ವಿವಿಧ ಶ್ರೀಗಳು, ವಿವಿಧ ಪಕ್ಷಗಳ ಮುಖಂಡರು, ವಿವಿಧ ಸಮಾಜಗಳ ಮುಖಂಡರು ಹಾಗೂ ನಗರದ ಹಲವಾರು ಸಂಘ ಸಂಸ್ಥೆಗಳ ಸಮ್ಮುಖದಲ್ಲಿ ಅದ್ದೂರಿ ಶೋಭಾಯಾತ್ರೆಗೆ ಚಾಲನೆ ನೀಡಲಾಗುವುದು. ನಂತರ ನಗರದ ರಾಜ ಬೀದಿಗಳಲ್ಲಿ ಶೋಭಾಯಾತ್ರೆ ನಡೆಯಲಿದೆ ಎಂದು ತಿಳಿಸಿದರು.

ಈ ವೇಳೆ ಅಲಂಕಾರ ಸಮಿತಿ ಅಧ್ಯಕ್ಷ ರಾಜು ರೋಖಡೆ, ಪ್ರಸಾದ ಸಮಿತಿ ಅಧ್ಯಕ್ಷ ಪ್ರವೀಣ್ ಪವಾರ್, ಹಿಂದೂ ಮಹಾಗಣಪತಿ ಟ್ರಸ್ಟ್ ಅಧ್ಯಕ್ಷ ಬಸವನಗೌಡ್ರು, ಪ್ರಧಾನ ಕಾರ್ಯದರ್ಶಿ ದಿನೇಶ್ ಹೆಚ್, ಉಪಾಧ್ಯಕ್ಷ ಸ್ವಾತಿ ಹನುಮತಪ್ಪ, ರಾಘವೇಂದ್ರ ಉಪಾಧ್ಯಾಯ, ಚಂದ್ರಕಾಂತ ಗೌಡ, ರಟ್ಟಿಹಳ್ಳಿ ಮಂಜುನಾಥ, ಸಂತೋಷ ಗುಡಿಮನಿ, ರವಿಶಂಕರ್ ಗದ್ದಿಮಠ, ಭರತ್ ಶೆಟ್ಟಿ, ಕಾರ್ತಿಕ ಟಿಕಾರೆ, ಎಮ್. ಶಿವಕುಮಾರ್ ಬಿ.ಜಿ., ರಾಜು ಯು, ಶಿವು ಇದ್ದರು.

## ಮಂಗಳ ಗೌರಿ ವ್ರತ ಆಚರಣೆ

ಹೊನ್ನಾಳಿ : ಪಟ್ಟಣ ಸೇರಿದಂತೆ ತಾಲೂಕಿನ ಗ್ರಾಮಾಂತರ ಪ್ರದೇಶಗಳಲ್ಲಿ ಮಂಗಳವಾರ ಶ್ರೀ ಮಂಗಳ ಗೌರಿ ವ್ರತವನ್ನು ಅಚರಣೆ ಮಾಡಿದರು.

ನಾಗರ ಅಮಾವಾಸ್ಯೆ ಮುಗಿದ ಕೂಡಲೇ ಶ್ರಾವಣ ಮಾಸ ಬರುತ್ತದೆ ಶ್ರಾವಣ ಮಾಸ ಎಂದರೆ ಹಬ್ಬಗಳ ಸಾಲು ಶ್ರಾವಣ ಮಾಸದ ಮೊದಲ ಮಂಗಳವಾರದ ಪುಣ್ಯ ದಿನದಿಂದ ನಾಲ್ಕು ಮಂಗಳವಾರ ಮಂಗಳಗೌರಿ ವ್ರತನ್ನು ಮಾಡುತ್ತಾರೆ ಮುಂದೆ ನಾಗರಪಂಚಮಿ , ಗೌರಿ ಪೂಜೆ ,ವರಮಹಾಲಕ್ಷ್ಮೀ ವ್ರತ ಹೀಗೆ ಸಾಗುತ್ತಾ ಹೋಗುತ್ತದೆ .

ಅದರಲ್ಲೂ ಹೆಣ್ಣು ಮಕ್ಕಳಿಗೆ ವಿಶೇಷ ಮಾಸವೆಂದೆ ಕರೆಯುವ ಶ್ರಾವಣ ಮಾಸ ಈ ಮಾಸದಲ್ಲಿ ಆಚರಿಸುವ ಶ್ರೀ ಮಂಗಳ ಗೌರಿ ವ್ರತ ಅತ್ಯಂತ ಪ್ರಮುಖ ಸ್ಥಾನವನ್ನು ಪಡೆದಿದೆ ಶ್ರಾವಣ ಮಾಸದಲ್ಲಿ ಬರುವ ಮಂಗಳವಾರಗಳಲ್ಲಿ ಈ ಮಂಗಳಗೌರಿ ವ್ರತವನ್ನು ಪ್ರತಿ ವಾರದಂದು ಆಚರಿಸುತ್ತಾರೆ.

ಶ್ರಾವಣ ಮಾಸದ ಮೊದಲು ಮಂಗಳ ವಾರದಿಂದ ನಾಲ್ಕು ಮಂಗಳವಾರ ಮಂಗಳ ಗೌರಿ ವ್ರತವನ್ನು ಆಚರಿಸುತ್ತಾರೆ. ಹೊಸದಾಗಿ ಮದುವೆ ಆದ ಹೆಣ್ಣು ಮಕ್ಕಳು ಅವರ ತವರು ಮನೆಯಲ್ಲಿ ಈ ವ್ರತವನ್ನು ಆಚರಿಸುತ್ತಾರೆ. 5 ವರ್ಷ ಸತತವಾಗಿ ಈ ವ್ರತವನ್ನು ಆಚರಿಸಿ ಕೊನೆಯಲ್ಲಿ ಉದ್ಯಾಪನೆ ಮಾಡುತ್ತಾರೆ ಎಂದು ಹೇಳುತ್ತಾರೆ ಪಟ್ಟಣದ ಗೃಹಿಣಿ ಕವಿತಾ ಹೋಳೆಮಠ್.

ಶ್ರಾವಣ ಬಂತೆಂದರೆ ಎಲ್ಲಿಲ್ಲದ ಸಂಭ್ರಮ, ಸಡಗರ. ಅದರಲ್ಲೂ ಈ ಮಾಸ ಮಕ್ಕಳಿಗೆ ಮತ್ತು ಮಹಿಳೆಯರಿಗೆ ಅಚ್ಚುಹೆಚ್ಚು. ಹಣ್ಣು, ಹೂ, ತರಕಾರಿ ವ್ಯಾಪಾರಿಗಳಿಗೆ ಒಂದು ರೀತಿಯಲ್ಲಿ ಸಂತೋಷ. ಏಕೆಂದರೆ ಅಷಾಡ ಮಾಸದಲ್ಲಿ ಮಂದಗತಿಯಲ್ಲಿದ್ದ ವ್ಯಾಪಾರ, ವ್ಯವಹಾರಗಳು ಶ್ರಾವಣ ಮಾಸದಲ್ಲಿ ಚಿಗುರುತ್ತವೆ.



## ರೈತಸ್ನೇಹಿಯಾಗಿರುವ ಹಾವುಗಳನ್ನು ಸಂರಕ್ಷಿಸಿ: ಶ್ರೀ ಶಿವನಾಗಪಾರ್ಥ ಅವಧೂತರು

ಶಿವಮೊಗ್ಗ: ಆಹಾರ ಸರಪಳಿಯಲ್ಲಿ ಹಾವುಗಳ ಪಾತ್ರ ಪ್ರಮುಖವಾಗಿದೆ. ಹಾವುಗಳ ಸಂಖ್ಯೆ ಕಡಿಮೆ ಆದಷ್ಟೂ ಇಲಿ, ಹೆಗ್ಗಣಗಳ ಸಂಖ್ಯೆ ಹೆಚ್ಚಾಗಿ ರೈತರಿಗೆ ಬೆಳೆ ನಷ್ಟ ಉಂಟಾಗುತ್ತದೆ. ಹಾವುಗಳು ರೈತಸ್ನೇಹಿಯಾಗಿದ್ದು ಅವುಗಳನ್ನು ಸಂರಕ್ಷಿಸಬೇಕೆಂದು ಶಿರಾಳಕೊಪ್ಪದ ಶ್ರೀ ನಾಗಕಾಳಿಕಾ ದುರ್ಗಾ ಚಾಮುಂಡೇಶ್ವರಿ ಕ್ಷೇತ್ರದ ಶ್ರೀ ಶಿವನಾಗ ಪಾರ್ಥ ಅವಧೂತರು ಕರೆ ನೀಡಿದರು.

ಶಿರಾಳಕೊಪ್ಪ ಬಳಿಯ ಶಿವಳ್ಳಿ (ಶಿವಪುರ) ಶ್ರೀ ವಾರದಾಂಜನೇಯ ಸ್ವಾಮಿ ದೇವಸ್ಥಾನದಲ್ಲಿ ನಾಗರ ಪಂಚಮಿ ಪ್ರಯುಕ್ತ 29–07–2025ರ ಮಂಗಳವಾರ ಬೆಳಿಗ್ಗೆ ಹುತ್ತಕ್ಕೆ ಹಾಲೆರದ ನಂತರ ಅವರು ಆಶೀರ್ವಚನ ನೀಡಿದರು.

ಕೇವಲ ಕಲ್ಲಿನ ನಾಗರಕ್ಕೆ ಹಾಲೆರೆದು ಪೂಜಿಸಿದರಷ್ಟೇ ಸಾಲದು, ನಿಜ ಹಾವುಗಳನ್ನು ಕಂಡರೆ ಸಾಕು ಅದನ್ನು ಕೊಲ್ಲು ಎಂಬ ಮನೋಭಾವ ದೂರವಾಗಬೇಕು. ಪರಿಸರದಲ್ಲಿ ವಿಷಕಾರಿ ಹಾವುಗಳ ಸಂಖ್ಯೆ ಕಡಿಮೆ ಇದೆ. ಆದರೆ ಎಲ್ಲಾ ಹಾವುಗಳು ವಿಷಕಾರಿ ಎಂಬ ಭಾವನೆ ಜನರಲ್ಲಿ ಬಲವಾಗಿ ಬೇರೂರಿದೆ. ಇಂತಹ ಭಾವನೆ ದೂರವಾಗಬೇಕೆಂದು ಆಶಿಸಿದರು.

ಆಹಾರ ಸರಪಳಿಯ ಸಮತೋಲಕ್ಕಾಗಿ ಸರ್ಪಗಳ ಸಂರಕ್ಷಣೆ ಅತ್ಯಗತ್ಯ. ಹಾವುಗಳ ಬಗ್ಗೆ ಭಯ ದೂರ ಮಾಡಿ ಅವುಗಳನ್ನು ಸಂರಕ್ಷಿಸಲು 'ಹಾವು–ನಾವು' ಎಂಬ ಅಭಿಯಾನ ಹಮ್ಮಿಕೊಳ್ಳಲಾಗುವುದು. ಶಾಲಾ ಹಂತದಲ್ಲಿಯೇ ಮಕ್ಕಳಿಗೆ ಈ ಬಗ್ಗೆ ಅರಿವು ಮೂಡಿಸುವುದು ಅಗತ್ಯವಾಗಿದೆ ಎಂದು ಪ್ರತಿಪಾದಿಸಿದರು.



## ಪಹಲ್ಗಾಮ್ ಉಗ್ರರ ಹತ್ಯೆ ದೃಢ



ನವದೆಹಲಿ : ಕಳೆದ ಏಪ್ರಿಲ್ 22 ರಂದು ನಡೆದ ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಭಾಗಿಯಾದ ಮೂವರು ಭಯೋತ್ಪಾದಕರನ್ನು ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ಆಪರೇಷನ್ ಮಹಾದೇವ್ ಕಾರ್ಯಾಚರಣೆಯಲ್ಲಿ ಭದ್ರತಾ ಪಡೆಗಳು ಹೊಡೆದುರುಳಿಸಿವೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದಿಲ್ಲಿ ಹೇಳಿದ್ದಾರೆ

ಭದ್ರತಾ ಪಡೆಗಳ ಕಾರ್ಯಾಚರಣೆಯಲ್ಲಿ ಸುಲೇಮಾನ್, ಅಫ್ಘಾನ್ ಮತ್ತು ಗಿಬ್ರಾನ್ ಎಂದು ಗುರುತಿಸಲಾದ ಮೂವರು ಭಯೋತ್ಪಾದಕನ್ನು ಹತ್ಯೆ ಮಾಡಲಾಗಿದೆ. ಸುಲೇಮಾನ್, ಲಷ್ಕರ್–ಇ–ತೊಯ್ಬಾ ಸಂಘಟನೆಯ ಉನ್ನತ ಕಮಾಂಡರ್ ಆಗಿದ್ದರು ಜೊತೆಗೆ ಅಫ್ಘಾನ್ ಮತ್ತು ಗಿಬ್ರಾನ್ ಕೂಡ ಪ್ರಮುಖ ಭಯೋತ್ಪಾದಕರಾಗಿದ್ದರು ಎಂದಿದ್ದಾರೆ.

ಲೋಕಸಭೆಯಲ್ಲಿ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಕುರಿತು ನಿನ್ನೆಯಿಂದ ಆರಂಭವಾಗಿರುವ ಚರ್ಚೆಯ ಎರಡನೇ ದಿನವಾದ ಇಂದು ಮಾತನಾಡಿದ ಅಮಿತ್ ಶಾ ಅವರು ಪ್ರದಾನಿ ನರೇಂದ್ರ ಮೋದಿ ಅವರು ಭಯೋತ್ಪಾದಕರನ್ನು ಕಳುಹಿಸಿದವರಿಗೆ ಆಪರೇಷನ್ ಸಿಂಧೂರ್ ಮೂಲಕ ತಕ್ಕ ಪಾಠ ಕಲಿಸಿದ್ದಾರೆ. ಈಗ ಭದ್ರತಾ ಪಡೆಗಳು 3 ಉಗ್ರರನ್ನು ಹತ್ಯೆ ಮಾಡಿದ್ದಾರೆ, ಇದು ಅಮಾಯಕರ ಸಾವಿಗೆ ಸಿಕ್ಕ ಗೆಲುವು ಎಂದು ತಿಳಿಸಿದ್ದಾರೆ.

ಅಮಾಯಕ ನಾಗರಿಕರನ್ನು ಅವರ ಕುಟುಂಬಗಳ ಮುಂದೆಯೇ ಧರ್ಮ ಕೇಳಿ ಹತ್ಯೆ ಮಾಡಿದ ಘಟನೆ ಖಂಡನಾರ್ಹ. ಪ್ರೀತಿಪಾತ್ರರನ್ನು ತಮ್ಮೆದುರೇ ಕಳೆದುಕೊಂಡು ನೋವಿನಲ್ಲಿದ್ದ ಕುಟುಂಬಗಳಿಗೆ ಭದ್ರತಾ ಪಡೆಗಳು ನ್ಯಾಯ ಒದಗಿಸಿವೆ ಎಂದು ತಿಳಿಸಿದ್ದಾರೆ

ಭಾರತೀಯ ಸೇನೆ, ಸಿಆರ್‌ಪಿಎಫ್ ಮತ್ತು ಜಮ್ಮು ಕಾಶ್ಮೀರದ ಪೊಲೀಸರು ಜಂಟಿಯಾಗಿ ನಡೆಸಿದ ಕಾರ್ಯಾಚರಣೆಯಲ್ಲಿ ಪಹಲ್ಗಾಮ್ ದಾಳಿಕೋರರ ಪೈಕಿ 3 ಮಂದಿಯನ್ನು ಹತ್ಯೆ ಮಾಡಲಾಗಿದ್ದು ಈ ಮೂಲಕ ಭಾರತದ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎನ್ನುವ ಸಂದೇಶ ರವಾನಿಸಿದ್ದೇವೆ ಎಂದು ಗುಡುಗಿದ್ದಾರೆ.

ಬೈಸರನ್ ಕಣಿವೆಯಲ್ಲಿ ನಾಗರಿಕರನ್ನು ಕೊಂದವರಲ್ಲಿ ಮೂವರು ಭಯೋತ್ಪಾದಕರಿದ್ದರು. ಆಪರೇಷನ್ ಮಹಾದೇವ್‌ನಲ್ಲಿ ಭಾಗವಹಿಸಿದ ಭದ್ರತಾ ಸಿಬ್ಬಂದಿಯನ್ನು ಅಭಿನಂಧಿಸುವುದಾಗಿ ಹೇಳಿದ್ದಾರೆ.

ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾದವರಿಗೆ ಆಶ್ರಯ ನೀಡಿದ ಮಂದಿಯನ್ನು ಎನ್ ಐಎ ಈಗಾಲೇ ಬಂಧಿಸಿದೆ, ನಿನ್ನೆ ಮೂರು ಭಯೋತ್ಪಾದಕರನ್ನು ಹತ್ಯೆ ಮಾಡಿದೆ, ಉಗ್ರರ ಮೃತ ದೇಹ ಶ್ರೀನಗರಕ್ಕೆ ತಂದಾಗಲೇ ಅವರು ಪಹಲ್ಗಾಮ್‌ನಲ್ಲಿ ಭಯೋತ್ಪಾದಕ ದಾಳಿ ನಡೆಸಿದ ಮೂವರು ವ್ಯಕ್ತಿಗಳು ಎಂದು ಗುರುತಿಸಲಾಯಿತು ಎಂದು ಸ್ಪಷ್ಟಪಡಿಸಿದರು.

ಪಹಲ್ಗಾಮ್ ದಾಳಿಯ ನಂತರ ಸಂತ್ರಸ್ತ ಕುಟುಂಬಗಳನ್ನು ಭೇಟಿಯಾಗಿದ್ದೆ. ಮದುವೆಯಾದ ಕೇವಲ 6 ದಿನಗಳ ನಂತರ ವಿಧವೆಯಾದ ಮಹಿಳೆಯೊಬ್ಬರು ನೋವು ತೋಡಿಕೊಂಡ ದೃಶ್ಯವನ್ನು ಎಂದಿಗೂ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ

ಭಯೋತ್ಪಾದಕರಿಗೆ ಆಶ್ರಯ ನೀಡಿದವರನ್ನು ಎನ್‌ಐಎ ಈ ಹಿಂದೆ ಬಂಧಿಸಿದೆ. ನಿನ್ನೆ ಹತ್ಯೆಯಾದ ಉಗ್ರರ ಅವರ ಶವಗಳನ್ನು ಶ್ರೀನಗರಕ್ಕೆ ತಂದಾಗ ಪಹಲ್ಗಾಮ್ ದಾಳಿಕೋರರು ಎನ್ನುವುದು ದೃಢಪಟ್ಟಿದೆ. ಪಹಲ್ಗಾಮ್ ದಾಳಿ ಸ್ಥಳದಿಂದ ವಶಪಡಿಸಿಕೊಂಡ ಗುಂಡು ,ಸೇರಿದಂತೆ ಇನ್ನಿತರೆ ಶಸ್ತಾಸ್ತ್ರಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದೆ ಎಂದಿದ್ದಾರೆ.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಇತ್ತೀಚೆಗೆ ನಿಮ್ಮಲ್ಲಿ ಕೆಲವರು ಓವರ್‌ಟೈಮ್ ಮಾಡುತ್ತಿರುತ್ತಾರೆ ಹಾಗೂ ನಿಮ್ಮ ಚೈತನ್ಯ ಉಡುಗುತ್ತಿರುತ್ತದೆ- ಇಂದು ನೀವು ಒತ್ತಡ ಹಾಗೂ ಸಂದಿಗ್ಧತೆಯನ್ನು ಬಯಸುವುದಿಲ್ಲ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಬಾಕಿಯಿರುವ ಮನೆಯ ಕೆಲಸ ಮುಗಿಸಲು ನಿಮ್ಮ ಸಂಗಾತಿಯ ಜೊತೆ ಏರ್ಪಾಡುಗಳನ್ನು ಮಾಡಿ.

### ವೃಷಭ ರಾಶಿ

ವಿಶೇಷವಾಗಿ ಹೊರಗಿಟ್ಟ ಆಹಾರ ತಿನ್ನುವಾಗ ವಿಶೇಷ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು. ಆದರೆ ಅನಗತ್ಯ ಒತ್ತಡ ಕೇವಲ ನಿಮಗೆ ಮಾನಸಿಕ ಉದ್ವೇಗ ಉಂಟುಮಾಡುತ್ತದೆ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ನೀವು ಕೆಲಸದ ಜಾಗದಲ್ಲಿ ಅತಿಯಾಗಿ ಶ್ರಮಪಡುವುದರಿಂದ ಕೌಟುಂಬಿಕ ಅಗತ್ಯಗಳು ಮತ್ತು ಅವಶ್ಯಕತೆಗಳು ನಿರ್ಲಕ್ಷಿಸಲ್ಪಡುತ್ತವೆ ಪ್ರಯಾಣದಲ್ಲಿ ಪ್ರಣಯ ಸಂಪರ್ಕದ ಸಾಧ್ಯತೆಯಿದೆ. ಉದ್ಯಮಶೀಲ ಜನರ ಸಹಭಾಗಿತ್ವದಲ್ಲಿ ಉದ್ಯಮಗಳನ್ನು ಪ್ರಾರಂಭಿಸಿ.

### ಮಿಥುನ ರಾಶಿ

ನಿಮ್ಮ ವಿಶ್ವಾಸ ಮತ್ತು ಚೈತನ್ಯ ಇಂದು ಅಧಿಕವಾಗಿರುತ್ತದೆ. ನಿಮ್ಮ ಸಹೋದರ-ಸಹೋದರಿಯರಲ್ಲಿ ಒಬ್ಬರು ಇಂದು ನಿಮ್ಮಿಂದ ಹಣವನ್ನು ಎರವಲು ಪಡೆಯಬಹುದು, ನೀವು ಅವರಿಗೆ ಹಣವನ್ನು ಸಾಲವಾಗಿ ಕೊಡುತ್ತೀರಿ ಆದರೆ ಇದರಿಂದ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು. ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರೇಮ ವೈಫಲ್ಯದ ನೋವಿಗೆ ಇವತ್ತು ನಿದ್ರಿಸಲು ಸಾಧ್ಯವಾಗುವುದಿಲ್ಲ.

### ಕರ್ಕ ರಾಶಿ

ಆರೋಗ್ಯವು ಇತರರೊಂದಿಗೆ ಸಂತೋಷವನ್ನು ಹಂಚಿಕೊಳ್ಳುವ ಮೂಲಕ ಅರಳುತ್ತದೆ. ಬಹಳ ಪ್ರಯೋಜನಕಾರಿ ದಿನವಲ್ಲ- ಆದ್ದರಿಂದ ನಿಮ್ಮ ಹಣದ ಪರಿಸ್ಥಿತಿಯನ್ನು ಪರಿಶಿಲಿಸಿ ಮತ್ತು ನಿಮ್ಮ ವೆಚ್ಚಗಳ ಮೇಲೆ ಮಿತಿ ಹೇರಿ. ನಿಮ್ಮ ಮನೆಯ ವಾತಾವರಣವನ್ನು ಬದಲಾಯಿಸುವ ಮೊದಲು ಅದಕ್ಕೆ ಎಲ್ಲರ ಅನುಮೋದನೆಯಿದೆಯೆಂದು ಖಾತ್ರಿಪಡಿಸಿಕೊಳ್ಳಿ.

### ಸಿಂಹ ರಾಶಿ

ಆರೋಗ್ಯ ದೃಷ್ಟಿಯಿಂದ ಉತ್ತಮವಾದ ದಿನ. ನಿಮ್ಮ ಹರ್ಷಚಿತ್ತದ ಮನಸ್ಸು ರಾಜ್ಯದ ನೀವು ಬಯಸಿದ ಟಾನಿಕ್ ನೀಡುತ್ತದೆ ಮತ್ತು ನಿಮಗೆ ಆತ್ಮವಿಶ್ವಾಸ ತರುತ್ತದೆ. ನಿಮ್ಮ ತಾಯಿಯ ದುಂದುಗಾರಿಕೆಯನ್ನು ನೋಡಿ ನೀವು ಚಿಂತಿತರಾಗಬಹುದು ಮತ್ತು ಆದ್ದರಿಂದ ನೀವು ಅವರ ಕೋಪದ ಬೇಟೆಯಾಗಬಹುದು. ನಿಮ್ಮ ಮನೆಯ ಕರ್ತವ್ಯಗಳನ್ನು ನೀವು ನಿರ್ಲಕ್ಷಿಸಿದ್ದಲ್ಲಿ ನಿಮ್ಮ ಜೊತೆಗಿರುವ ಯಾರಾದರೂ ಸಿಟ್ಟಾಗಬಹುದು. ಪ್ರಣಯದ ಸಂಬಂಧ ಅತ್ಯಾಕರ್ಷಕವಾಗಿದ್ದರೂ ಅದು ಬಹು ಕಾಲ ಬಾಳುವುದಿಲ್ಲ. ಜನರು ನಿಮ್ಮ ಕೆಲಸದಲ್ಲಿನ ಪ್ರಯತ್ನಗಳಿಗೆ ನಿಮ್ಮನ್ನು ಗುರುತಿಸುತ್ತಾರೆ.

### ಕನ್ಯಾ ರಾಶಿ

ನಿಮ್ಮ ದೈಹಿಕ ಆರೋಗ್ಯವನ್ನು ಸುಧಾರಿಸಲು ಸಮತೋಲಿತ ಆಹಾರ ತೆಗೆದುಕೊಳ್ಳಿ ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು.

### ತುಲಾ ರಾಶಿ

ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಮಕ್ಕಳು ನಿಮಗೆ ಮನೆಕೆಲಸಗಳನ್ನು ಮಾಡಲು ಸಹಾಯ ಮಾಡುತ್ತಾರೆ. ಪ್ರೀತಿಯ ಶಕ್ತಿ ನಿಮಗೆ ಪ್ರೀತಿಸಲು ಒಂದು ಕಾರಣ ನೀಡುತ್ತದೆ. ಇಂದು ಕೆಲಸದಲ್ಲಿ ಎಲ್ಲವೂ ನಿಮ್ಮ ಪರವಾಗಿರುವಂತೆ ತೋರುತ್ತದೆ.

### ವೃಶ್ಚಿಕ ರಾಶಿ

ನಿಮ್ಮ ವ್ಯಕ್ತಿತ್ವವನ್ನು ಸುಧಾರಿಸಲು ಗಂಭೀರ ಪ್ರಯತ್ನಗಳನ್ನು ಮಾಡಿ. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಬಾಕಿಯಿರುವ ಮನೆಕೆಲಸಗಳು ನಿಮ್ಮ ಸ್ವಲ್ಪ ಸಮಯ ತೆಗೆದುಕೊಳ್ಳುತ್ತವೆ. ನಿಮ್ಮ ಪ್ರೀತಿಯನ್ನು ಅಮೂಲ್ಯ ವಸ್ತುಗಳಂತೆ ಹೊಸತನದಿಂದಿಡಿ.

### ಧನು ರಾಶಿ

ಇಂದು ನೀವು ಹಲವಾರು ಒತ್ತಡಗಳು ಮತ್ತು ಭಿನ್ನಾಭಿಪ್ರಾಯಗಳನ್ನು ಎದುರಿಸಬೇಕಾಗಬಹುದು ಹಾಗೂ ಇದು ನಿಮಗೆ ಕಿರಿಕಿರಿ ಹಾಗೂ ಆತಂಕದ ಭಾವನೆಗಳನ್ನು ಉಂಟುಮಾಡಬಹುದು. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸಂಗಾತಿ ಮತ್ತು ಮಕ್ಕಳು ಹೆಚ್ಚುವರಿ ಪ್ರೀತಿ ಮತ್ತು ಕಾಳಜಿ ತೋರಿಸುತ್ತಾರೆ.

### ಮಕರ ರಾಶಿ

ಮಾನಸಿಕ ಸ್ಪಷ್ಟತೆಯನ್ನು ನಿರ್ವಹಿಸಲು ಗೊಂದಲ ಮತ್ತು ಹತಾಶೆಯನ್ನು ತಪ್ಪಿಸಿ ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ನಿಮ್ಮ ಹೆತ್ತವರ ಆರೋಗ್ಯ ಚಿಂತೆ ಮತ್ತು ಆತಂಕಕ್ಕೆ ಕಾರಣವಾಗುತ್ತದೆ. ಯಾರೂ ನಿಮ್ಮ ಪ್ರೀತಿಯನ್ನು ಬೇರ್ಪಡಿಸಲಾಗದು. ಸ್ವಾಭಿಮಾನ ನಿರ್ಧಾರಕ್ಕೆ ಅಡ್ಡಪಡಿಸಲು ಬಿಡಬೇಡಿ ನಿಮ್ಮ ಕೈಕೆಳಗಿನವರು ಏನು ಹೇಳುತ್ತಾರೆಂದು ಕೇಳಿ.

### ಕುಂಭ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ.

ಯಾರಾದರೂ ನಿಮ್ಮ ನೆರೆಹೊರೆಯವರು ಇಂದು ನಿಮ್ಮ ಹತ್ತಿರ ಹಣ ಸಾಲ ಕೇಳಲು ಬರಬಹುದು, ಅವರಿಗೆ ಸಾಲ ಕೊಡುವುದಕ್ಕಿಂತ ಮುಂಚೆ ಅವರ ನಂಬಿಕೆಯನ್ನು ಅಗತ್ಯವಾಗಿ ಪರೀಕ್ಷಿಸಿ, ಇಲ್ಲದಿದ್ದರೆ ಹಣದ ನಷ್ಟವಾಗುವ ಸಾಧ್ಯತೆ ಇದೆ.

### ಮೀನ ರಾಶಿ

ನಿಮ್ಮ ಪ್ರಚಂಡ ಪ್ರಯತ್ನ ಹಾಗೂ ಕುಟುಂಬದ ಸದಸ್ಯರ ಸಕಾಲಿಕ ಬೆಂಬಲ ಬಯಸಿದ ಫಲಿತಾಂಶಗಳು ತರುತ್ತದೆ. ಆದರೆ ಪ್ರಸ್ತುತ ಚೇತನವನ್ನು ಕಾಯ್ದುಕೊಳ್ಳಲು ಶ್ರಮಿಸುತ್ತಿರಿ. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು.

## ಚೆಸ್ ಪಂದ್ಯಾವಳಿ ವಿಜೇತ ವಿದ್ಯಾರ್ಥಿಗಳಿಗೆ ಅಭಿನಂದನೆ



ನಗರದ ಹೊಯ್ಸಳ ಸ್ಪೋರ್ಟ್ಸ್ ಅಕಾಡೆಮಿಯಲ್ಲಿ ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ಬಹುಮಾನ ಗೆದ್ದಿರುವ ರಿಷಬ್ ಗೋಪಾಲ್ ಹಾಗು ಸಂಚಿತ್ ಅವರನ್ನು ಪತ್ರಕರ್ತ ಮಂಜು ಬನವಾಸೆ ಅಭಿನಂದಿಸಿದರು. ವೇಣುಗೋಪಾಲ್, ಸತೀಶ್, ಸುರೇಶ್, ಭರತ್ ಮುಂತಾದವರಿದ್ದರು.

**ಹಾಸನ:** ನಗರದಲ್ಲಿ ಈಚೆಗೆ ಆಯೋಜಿಸಲಾಗಿದ್ದ ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ಬಹುಮಾನ ವಿಜೇತರಾದ ಹೊಯ್ಸಳ ಸ್ಪೋರ್ಟ್ಸ್ ಅಕಾಡೆಮಿಯ ವಿದ್ಯಾರ್ಥಿಗಳನ್ನು ಸೋಮವಾರ ಅಭಿನಂದಿಸಲಾಯಿತು.

ಅಕಾಡೆಮಿ ಕಚೇರಿಯಲ್ಲಿ ಪತ್ರಕರ್ತ ಮಂಜು ಬನವಾಸೆ, ಬಹುಮಾನ ವಿಜೇತ ವಿದ್ಯಾರ್ಥಿಗಳಾದ ರಿಷಬ್ ಗೋಪಾಲ್ ಹಾಗೂ ಸಂಚಿತ್ ಅವರನ್ನು ಸರಣಿಕೆ ನೀಡಿ, ಮೆಡಲ್ ಹಾಕಿ ಅಭಿನಂದಿಸಿದರು. ಅಕಾಡೆಮಿಯ ಪಾಲುದಾರ ವೇಣುಗೋಪಾಲ್ ಮಾತನಾಡಿ, ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿ ನಮ ಇಬ್ಬರು ವಿದ್ಯಾರ್ಥಿಗಳು ಮಾಡಿರುವ ಸಾಧನೆ ಪ್ರಶಂಸಾರ್ಹವಾಗಿದೆ. ರಾಜ್ಯದ ವಿವಿಧೆಡೆಯಿಂದ ಬಂದಿದ್ದ ಪ್ರತಿಭಾವಂತ ಆಟಗಾರರನ್ನು ಮಣಿಸಿ ಬಹುಮಾನ ಪಡೆದಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಮಕ್ಕಳು ರಾಷ್ಟ್ರ ಮಟ್ಟದಲ್ಲಿ ಸಾಧನೆ ಮಾಡಿ ಜಿಲ್ಲೆಗೆ ಕೀರ್ತಿ ತರುವಂತಾಗಬೇಕು ಎಂದರು.

ಚೆಸ್ ತರಬೇತುದಾರ ಭರತ್, ಹೊಯ್ಸಳ ಸ್ಪೋರ್ಟ್ಸ್ ಅಕಾಡೆಮಿ ಪಾಲುದಾರರಾದ ಸತೀಶ್, ಸುರೇಶ್, ಪತ್ರಕರ್ತ ಇಬ್ಬೀಡು ಕೃಷ್ಣಮೂರ್ತಿ ಹಾಗೂ ಮಕ್ಕಳ ಪಾಲಕರು ಇದ್ದರು.

ಬಹುಮಾನ: ನಗರದಲ್ಲಿ ಆಯೋಜನೆಯಾಗಿದ್ದ ರಾಜ್ಯ ಮಟ್ಟದ ಚೆಸ್ ಪಂದ್ಯಾವಳಿಯಲ್ಲಿನ 7 ವರ್ಷ ವಯೋಮಿತಿಯ ವಿಭಾಗದಲ್ಲಿ ಬೆಸ್ಟ್ ಹಾಸನ್ ವಿಭಾಗದಲ್ಲಿ ಹೊಯ್ಸಳ ಸ್ಪೋರ್ಟ್ಸ್ ಅಕಾಡೆಮಿಯ ರಿಷಬ್ ಗೋಪಾಲ್ ಮೊದಲನೇ ಸ್ಥಾನ ಹಾಗೂ ರಾಜ್ಯ ಮಟ್ಟದ ವಿಭಾಗದಲ್ಲಿ ಸಂಚಿತ್ 5ನೇ ಸ್ಥಾನ ಪಡೆದಿದ್ದಾರೆ.

## ರೋಗಿಗಳಿಗೆ ಅಗತ್ಯ ಚಿಕಿತ್ಸೆ ಒದಗಿಸಲು ಸೂಚನೆ



**ಹಾಸನ :** ಸಾರ್ವಜನಿಕ ಆಸ್ಪತ್ರೆಗೆ ಬರುವ ರೋಗಿಗಳಿಗೆ ಅಗತ್ಯ ಚಿಕಿತ್ಸೆ ಒದಗಿಸುವುದರ ಜೊತೆಗೆ ಔಷಧಿಗಳ ವಿತರಣೆಗೆ ಕ್ರಮವಹಿಸಿ, ಔಷಧಿಗಳಿಗೆ ಹೊರಗೆ ತೆಗೆದುಕೊಳ್ಳಿ ಎಂದುಚೀಟಿ ಬರೆದುಕೊಡದಂತೆನಿಗಾವಹಿಸಿಎಂದುಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರುರಕ್ತ ಪರೀಕ್ಷೆ ಮಾಡಿದ ಸಂದರ್ಭದಲ್ಲಿ ವಿಳಂಬವಾಗದಂತೆಆದಷ್ಟೂ ಶೀಘ್ರವಾಗಿ ವರದಿಯನ್ನು ರೋಗಿಗಳಿಗೆ ಒದಗಿಸಿ ಅಗತ್ಯಚಿಕಿತ್ಸೆ ಪಡೆಯಲು ಅನುವು ಮಾಡಿಕೊಡುವಂತೆ ತಿಳಿಸಿದರು.

ಆಸ್ಪತ್ರೆಗಳಲ್ಲಿ ಕಡ್ಡಾಯವಾಗಿಏಫ್ರಾನ್‌ಧರಿಸುವಂತೆ ಹಾಗೂ ಶಿಸ್ತಿನಿಂದ ಇರುವಂತೆನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಸರ್ಕಾರಿಆಸ್ಪತ್ರೆಯಲ್ಲಿ ಹೆಚ್ಚಿನ ಸೌಲಭ್ಯಇಲ್ಲದಿದ್ದಲ್ಲಿಎಂಪೆನೆಲ್‌ಆಗಿರುವ ಖಾಸಗಿ ಆಸ್ಪತ್ರೆಗೆತಕ್ಷಣರೋಗಿಯನ್ನು ಕಳುಹಿಸುವ ಮೂಲಕ ಉಚಿತಚಿಕಿತ್ಸೆ ಕಲ್ಪಿಸಿ, ಪ್ರಾಣ ಉಳಿಸುವ ಕೆಲಸ ಮಾಡಬೇಕುಎಂದರು.

ಪಿ.ಎಂ.ಜೆ.ಜೆ.ವೈ ಹಾಗೂ ಪಿ.ಎಂ.ಎಸ್.ಬಿ.ವೈ ಗೆ ಪ್ರತಿಯೊಬ್ಬರನ್ನು ನೋಂದಣಿ ಮಾಡಿಸುವಂತೆ ತಿಳಿಸಿದರಲ್ಲದೆ, ಆಂಬುಲೆನ್ಸ್ ಸುಸ್ಥಿತಿಯಲ್ಲಿದ್ದು, ಕರ್ತವ್ಯ ನಿರ್ವಹಿಸುತ್ತಿವೆಯೇಎಂದು ಪರಿಶೀಲಿಸಿ ವರದಿ ನೀಡುವಂತೆ ಸೂಚಿಸಿದರು.

ಸರ್ಕಾರಿಆಸ್ಪತ್ರೆಗೆ ಬರುವ ರೋಗಿಗಳನ್ನುಎಮ್. ಆರ್ ಸ್ಕ್ಯಾನ್ ಮತ್ತು ಸಿಟಿ ಸ್ಕ್ಯಾನ್ ಗೆ ಖಾಸಗಿ ಆಸ್ಪತ್ರೆಗಳಿಗೆ ಕಳುಹಿಸದಂತೆ ಎಚ್ಚರವಹಿಸಲು ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಊಟದ ಸಂದರ್ಭದಲ್ಲಿ ಹೊರರೋಗಿಗಳ ಕೌಂಟರ್‌ನಲ್ಲಿಒಬ್ಬರು ಸಿಬ್ಬಂದಿಯನ್ನು ಸಾರ್ವಜನಿಕರಿಗೆ ಲಭ್ಯವಿರುವಂತೆ ನೋಡಿಕೊಳ್ಳಿ ಎಂದು ನಿರ್ದೇಶನ ನೀಡಿದರು.

ಸಾರ್ವಜನಿಕರಿಗೆ ಅನುಕೂಲವಾಗುವಂತೆ ಬ್ಯಾಂಕ್‌ಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಕಡ್ಡಾಯವಾಗಿಕನ್ನಡದಲ್ಲಿ ಮಾತನಾಡುವ ಮೂಲಕ ಸ್ಪಂದಿಸಿ ಕರ್ತವ್ಯ ನಿರ್ವಹಿಸುವಂತೆಕ್ರಮ ಕೈಗೊಳ್ಳುವಂತೆ ಲೀಡ್ ಬ್ಯಾಂಕ್ ವ್ಯವಸ್ಥಾಪಕರಿಗೆತಿಳಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿತಮ್ಮಯ್ಯ, ಉಪ ವಿಭಾಗಾಧಿಕಾರಿ ಶೃತಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

ಗದಗ ಬೆಟಗೇರಿ ಅವಳಿ ನಗರದ ಸಮರ್ಪಕ ನೀರಿನ ಪೂರೈಕೆಗೆ ಆದ್ಯತೆ ಇರಲಿ : ಸಚಿವ ಎಚ್ ಕೆ ಪಾಟೀಲ

## ಪ್ರತಿ ಮೂರು ದಿನಕ್ಕೊಮ್ಮೆ ನೀರು ಪೂರೈಕೆಗೆ ಸೂಚನೆ



**ಗದಗ:** ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ಸಮರ್ಪಕ ನೀರು ಪೂರೈಕೆಗೆ ಆದ್ಯತೆ ವಹಿಸಬೇಕು. ಅಲ್ಲದೇ ಪ್ರತಿ ಮೂರು ದಿನಕ್ಕೊಮ್ಮೆ ನೀರು ಪೂರೈಕೆ ಆಗಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್ ಕೆ ಪಾಟೀಲ ಅವರು ಸೂಚನೆ ನೀಡಿದರು.

ಗದಗ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಸೋಮವಾರದಂದು ಗದಗ ಬೆಟಗೇರಿ ಅವಳಿ ನಗರಕ್ಕೆ ನೀರು ಸರಬರಾಜು ಕುರಿತಂತೆ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಸೂಕ್ತ ನಿರ್ದೇಶನ ನೀಡಿದರು.

ಅಗತ್ಯ ಮೂಲಭೂತ ಸೌಲಭ್ಯಗಳಲ್ಲಿ ಒಂದಾದ ನೀರು ಸರಬರಾಜು ಮಾಡಲು ಪ್ರಥಮಾದ್ಯತೆ ನೀಡಬೇಕು. ವಿನಾಕಾರಣ ನೀರಿನ ಅಪವ್ಯಯವನ್ನು ತಡೆದು ಅಗತ್ಯವಿರುವಲ್ಲಿ ನೀರು ಪೂರೈಕೆ ಮಾಡಲು ಅಧಿಕಾರಿ ವರ್ಗ ಕ್ರಮ ಕೈಗೊಳ್ಳಬೇಕು ಎಂದರು.

ಪ್ರತಿ ದಿನ ರಾತ್ರಿ ನದಿಯಿಂದ ಜಾಕ್ವೆಲ್ ಮೂಲಕ ನೀರನ್ನು ಟ್ಯಾಂಕುನಲ್ಲಿ ಸಂಗ್ರಹಿಸಿ, ಮುಂಜಾನೆ ವಾರ್ಡ್ ವಾರು ನೀರು ಪೂರೈಕೆಗೆ ವಾಲ್ ಮನ್ ಗಳು ಮುಂದಾಗಬೇಕು.

ನಗರಸಭೆಯಿಂದ ಸದ್ಯ ಕಾರ್ಯನಿರ್ವಹಿಸುತ್ತಿರುವ ವಾಲ್ಮಾನ್ ಗಳು ಸೂಪರ್ವೈಸರ್ಗಳನ್ನು ಬದಲಾವಣೆ ಮಾಡಬೇಕು. ಅವರಿಗೆ ಪ್ರತ್ಯೇಕ ಬೀದಿ, ವಾರ್ಡ್ ಗಳ ಮರುಹಂಚಿಕೆ ಮಾಡಿ ಸಮರ್ಪಕ ನೀರು ಪೂರೈಕೆಗೆ ಇರುವ ಕ್ರಮ ಕೈಗೊಳ್ಳಬೇಕು, ಈ ಬಗ್ಗೆ ನಗರಸಭೆ ಪೌರಾಯುಕ್ತರು ಮುಂದಾಗಬೇಕು ಎಂದು ಸಚಿವರು ಸೂಚನೆ ನೀಡಿದರು.

ನಾವೆಲ್ಲರೂ ನೀರು ಪೂರೈಕೆ ಮಾಡುವ ವಾಲ್ಮೆನ್ ಮೇಲೆ ವಿಶ್ವಾಸವಿಟ್ಟು ಗಮನಿಸೋಣ, ಮುಂದಿನ 100 ದಿವಸದೊಳಗೆ ಸಮರ್ಪಕ ನೀರಿನ ವ್ಯವಸ್ಥೆ ಆಗುವಂತೆ ಅವರು ಕಾರ್ಯನಿರ್ವಹಿಸುವ ವಿಶ್ವಾಸವಿದೆಯೆಂದು ಹೇಳಿದರು. ನೀರು ಪೂರೈಕೆ ಕುರಿತಂತೆ ನವಂಬರ್ 1 ರಂದು ಮತ್ತೆ ನಾವೆಲ್ಲರೂ ಸೇರೋಣ, ಆಗ ನೀರಿನ ಸಮಸ್ಯೆ ಪೂರೈಕೆ ಸಂಪೂರ್ಣ ನಿವಾರಣೆಯಾಗಿರಬೇಕು ಎಂದರು.

ಅವಳಿ ನಗರಕ್ಕೆ ನೀರು ಪೂರೈಕೆಗಾಗಿಯೇ ಪ್ರತ್ಯೇಕ ಒಬ್ಬ ಇಂಜಿನಿಯರ್ ನೇಮಕ ಮಾಡಿ ನೀರು ಪೂರೈಕೆ ಸರಳೀಕರಣಗೊಳಿಸುವಂತೆ, ಅಲ್ಲದೆ ಪೈಪ್, ವಾಲ್ ನಿಂದ ಪೋಲಾಗುವ ನೀರನ್ನು ತಡೆಯಲು ಶೀಘ್ರ ದುರಸ್ತಿ ಕೈಗೊಳ್ಳಲು ಸಚಿವ ಹೆಚ್ ಕೆ ಪಾಟೀಲ ಸೂಚಿಸಿದರು.

ಅವಳಿ ನಗರಕ್ಕೆ ನೀರು ಪೂರೈಕೆ ಕುರಿತಂತೆ ನಗರಸಭೆ ಪೌರಾಯುಕ್ತರು ಕ್ರಿಯಾಶೀಲವಾಗಿ ಕಾರ್ಯನಿರ್ವಹಿಸಬೇಕು. ಸಮರ್ಪಕ ನೀರು ಪೂರೈಕೆ ಆಗುತ್ತಿರುವ ಬಗ್ಗೆ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು ಮೇಲುಸ್ತುವಾರಿ ಕಾರ್ಯ ನಿರ್ವಹಿಸಬೇಕೆಂದು ತಿಳಿಸಿದರು.

## ರಾಷ್ಟ್ರ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ನಿಧಿ ಬೇತೂರ್ ಚಿನ್ನ ಹಾಗೂ ಕಂಚು ಹಾಗೂ ಸಮರ್ಥ್ ಬೇತೂರ್ ಗೆ ಬೆಳ್ಳಿ



**ದಾವಣಗೆರೆ :** ದಿನಾಂಕ 27-7-25ರಂದು ದಾವಣಗೆರೆಯಲ್ಲಿ ನಡೆದ 1ನೇ ರಾಷ್ಟ್ರಮಟ್ಟದ ಆಹ್ವಾನಿತ ಕರಾಟೆ ಚಾಂಪಿಯನ್ ಶಿಪ್ ಸ್ಪರ್ಧೆಯ 12 ವರ್ಷದ ಸಬ್ ಜೂನಿಯರ್ ವಿಭಾಗದಲ್ಲಿ ನಗರದ ನಿಧಿ ಬೇತೂರ್ ಕರಾಟೆ ಸ್ಪರ್ಧೆಯ ಕುಮಿಟೆ ಹಾಗೂ ಕಟಾ ವಿಭಾಗದಲ್ಲಿ ಚಿನ್ನ ಹಾಗೂ ಕಂಚಿನ ಪದಕ ಹಾಗೂ ಸಮರ್ಥ್ ಬೇತೂರು ಕರಾಟೆ ಸ್ಪರ್ಧೆಯ ಕುಮಿಟೆ ವಿಭಾಗದಲ್ಲಿ ಬೆಳ್ಳಿ ಪದಕ ಪಡೆದಿದ್ದಾರೆ.

ಕೆ.ಪಿ.ಜೋಸ್ ಅವರಿಂದ ತರಬೇತಿ ಪಡೆದಿರುವ ನಗರದ ನಿಜಲಿಂಗಪ್ಪ ಬಡಾವಣೆಯ ಬಾಪೂಜಿ ಶಾಲೆಯ 7ನೇ ತರಗತಿ ವಿದ್ಯಾರ್ಥಿನಿ ನಿಧಿ ಹಾಗೂ 2ನೇ ತರಗತಿ ವಿದ್ಯಾರ್ಥಿ ಸಮರ್ಥ್, ಅಭಿಷೇಕ್ ಬೇತೂರು ಹಾಗೂ ಶ್ವೇತಾ ದಂಪತಿಗಳ ಮಕ್ಕಳು.

## ಜೆಜೆಎಂ ಕಾಮಗಾರಿ ಪರಿಶೀಲನೆ



**ಹಾಸನ :** ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳಾದ ಬಿ.ಆರ್ ಪೂರ್ಣಿಮಾ ಅವರು ಬೇಲೂರು ತಾಲ್ಲೂಕು ಮಾದಿಹಳ್ಳಿ ಮತ್ತು ಹಳೇಬೀಡು ಹೋಬಳಿ ವ್ಯಾಪ್ತಿಗೆ ಸಂಬಂಧಿಸಿದ ಅಡಗೂರುಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಡಗೂರು ಗ್ರಾಮ, ಗಂಗೂರುಗ್ರಾಮ ಪಂಚಾಯಿತಿ ವ್ಯಾಪ್ತಿಯ ಗಂಗೂರು ಗ್ರಾಮ, ಘಟದಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮತಿಘಟ್ಟಗ್ರಾಮದ ಲಿಂಗನಕೊಪ್ಪಲು ಜ ನವಸತಿ,ರಾಜನಶಿರಿಯೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಪ್ಪಗಂಡನಹಳ್ಳಿ ಗ್ರಾಮ ಮತ್ತುಕಲ್ಲು ಶೆಟ್ಟಿಹಳ್ಳಿ ಗ್ರಾಮದಗೌರಿಕೊಪ್ಪಲು ಜನವಸತಿಗಳಿಗೆ ಭೇಟಿ ನೀಡಿ ಹೆಜೆಎಂ ಕಾಮಗಾರಿಗಳು ಹಾಗೂ ಗಂಗೂರುಗ್ರಾಮ ಪಂಚಾಯಿತಿ ವ್ಯಾಪ್ತಿಯಗಂಗೂರುಗ್ರಾಮ ಮತ್ತು ಚಟಚಟನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚಟಚಟನಹಳ್ಳಿ ಗ್ರಾಮದ ಬಹುಗ್ರಾಮಕುಡಿಯುವ ನೀರಿನಯೋಜನೆಯಓವರ್ ಹೆಡ್ ಟ್ಯಾಂಕ್‌ಗಳ ಕಾಮಗಾರಿಗಳನ್ನು ಪರಿಶೀಲಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡಿದರು.

ಈ ವೇಳೆ ಕಾರ್ಯಪಾಲಕ ಅಭಿಯಂತರರು, ತಾಲ್ಲೂಕು ಪಂಚಾಯಿತಿಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕಕಾರ್ಯಪಾಲಕ ಅಭಿಯಂತರರು, ಸಹಾಯಕಇಂಜಿನಿಯರ್ ಹಾಗೂ ಸಂಬಂಧಿಸಿದ ಗ್ರಾಮ ಪಂಚಾಯಿತಿಗಳ ಪಿಡಿಒಗಳು ಮತ್ತು ಸಿಬ್ಬಂದಿ ಹಾಜರಿದ್ದರು.

## ಅಡಿಕೆ ಕೊಳೆ ರೋಗದ ಹತೋಟಿಗೆ ಕ್ರಮ

**ಚಿಕ್ಕಮಗಳೂರು:** ಅತಿ ಹೆಚ್ಚು ಮಳೆ ಬೀಳುವ ಪ್ರದೇಶಗಳಲ್ಲಿ ಅಡಿಕೆ ಬೆಳೆಯಲ್ಲಿ ವಿವಿಧ ರೋಗ ಲಕ್ಷಣಗಳು ಕಂಡುಬರುತ್ತಿದ್ದು, ಅದರಲ್ಲಿ ಅಡಿಕೆ ಕೊಳೆ ರೋಗವು ಪ್ರಮುಖವಾಗಿದೆ. ಈ ರೋಗವು ಫೈಟಾಫ್ತೊರಾ ಮಿಡಿ ಅನ್ನುವ ಶಿಲೀಂಧ್ರದಿಂದ ಉಂಟಾಗುತ್ತದೆ. ವಾತಾವರಣದಲ್ಲಿ. ಶೇ.95ರಷ್ಟು ಆರ್ದ್ರತೆ ಮತ್ತು 15-20 ಸೆ. ಉಷ್ಣಾಂಶ ಇದ್ದಲ್ಲಿ ಈ ರೋಗದ ಬಾಧೆ ಹೆಚ್ಚು. ಎಳೆಯ ಕಾಯಿಗಳ ತೊಟ್ಟಿನ ಭಾಗದಲ್ಲಿ ನೀರಿನಿಂದ ತೊಯ್ದ ಬೂದು ಬಣ್ಣದ ಮಚ್ಚೆಗಳು ಕಂಡು ಬರುತ್ತವೆ. ಕ್ರಮೇಣ ಕಾಯಿಗಳ ಮೇಲೆ ಬೂದು ಬಣ್ಣದ ಶಿಲೀಂಧ್ರ ಬೆಳೆಯುತ್ತದೆ, ರೋಗ ಪೀಡಿತ ಕಾಯಿಗಳು ಕೊಳೆತು ಗೊನೆಗಳಿಂದ ಉದುರುತ್ತವೆ.

ಹಿಂದಿನ ವರ್ಷ ತೋಟದಲ್ಲಿ ಬಿದ್ದಿರುವ ರೋಗ ತಗುಲಿದ ಕಾಯಿ, ಹಿಂಗಾರಗಳು ಮತ್ತು ಮರದ ಇತರ ಭಾಗಗಳನ್ನು ನಾಶಪಡಿಸುವುದು ಅಗತ್ಯ. ತೋಟದಲ್ಲಿ ನೀರು ನಿಲ್ಲದಂತೆ ಬಸಿಗಾಲುವೆ ಮಾಡಿ ಹೆಚ್ಚಾದ ನೀರು ತೋಟದಿಂದ ಹೊರ ಹೋಗಲು ಅನುಕೂಲ ಮಾಡಬೇಕು. ನಂತರ ತೋಟದಲ್ಲಿ, ಗಾಳಿಯಾಡುವಂತೆ ಮಾಡಲು ಅಂತರ ಬೆಳೆಗಳ (ಲವಂಗ, ದಾಲ್ಚಿನ್ನಿ, ಕೋಕೋ, ಕಾಳುಮೆಣಸು) ಹಾಗೂ ತೋಟದ ಸುತ್ತ ಇರುವ ಗಿಡಗಳ ಹೆಚ್ಚುವರಿ ರೆಂಬೆಗಳನ್ನು ಕತ್ತರಿಸುವುದು. ಮೇ ತಿಂಗಳ ಮೂರನೇ ವಾರದಲ್ಲಿ ಕಡ್ಡಾಯವಾಗಿ ತಟಸ್ಥಗೊಳಿಸಿದ ಶೇ.1ರ ಬೋರ್ಡೋ ದ್ರಾವಣವನ್ನು ಅಡಿಕೆ ಗೊನೆಗಳಿಗೆ ಸಿಂಪಡಿಸಬೇಕು. ನಂತರ ಮಳೆ ನೋಡಿಕೊಂಡು 30-40 ದಿನಗಳ ಅಂತರದಲ್ಲಿ ಎರಡನೇ ಹಾಗೂ ಮೂರನೇ (ಆಗತ್ಯವಿದ್ದರೆ) ಸಿಂಪಡಣೆ ಮಾಡಬೇಕು. ತುಂತುರು ಮಳೆ ಇದ್ದಾಗ ಬೋರ್ಡೋ ದ್ರಾವಣವನ್ನು ಹಾಗೂ (ಮೂರನೇ ಸಿಂಪಡಣೆಯ ಸಮಯದಲ್ಲಿ) ಶುಷ್ಕ ವಾತಾವರಣವಿದ್ದಾಗ ಬೋರ್ಡೋ ದ್ರಾವಣಕ್ಕೆ ಬದಲಿಯಾಗಿ ತಾಮ್ರದ ಆಕ್ಸಿಕ್ಲೋರೈಡ್ (0.3ಶೇ.) ಅಥವಾ ಮೆಟಾಲಾಕ್ಸಿಲ್ ಎಂ.ಜೆಡ್ (0.20 ಶೇ.) ಔಷಧಿಗಳನ್ನು ರಾಳದೊಂದಿಗೆ ಸಿಂಪಡಿಸಬೇಕು. ತೋಟದ ಮಣ್ಣು ಹುಳಿಯಾಗಿದ್ದರೆ ಕೃಷಿ ಸುಣ್ಣವನ್ನು 200 ಕಿ.ಗ್ರಾಂ.ನಂತೆ ಪ್ರತಿ ಎಕರೆ ಪ್ರದೇಶಕ್ಕೆ ಮಣ್ಣಿನಲ್ಲಿ ಸೇರಿಸಬೇಕು.

ಪ್ರತಿ ಮರಕ್ಕೆ 10-15 ಕಿ.ಗ್ರಾಂ. ಸಾವಯವ ಗೊಬ್ಬರ ಹಾಗೂ ಮಣ್ಣು ಪರೀಕ್ಷೆ ಆಧಾರದ ಮೇಲೆ ರಸಗೊಬ್ಬರಗಳನ್ನು ಎರಡು ಹಂತದಲ್ಲಿ (ಮೇ, ಜೂನ್ ಮತ್ತು ಸೆಪ್ಟೆಂಬರ್, ಅಕ್ಟೋಬರ್ ತಿಂಗಳುಗಳಲ್ಲಿ) ಸಾಮಾನ್ಯ ಶಿಫಾರಸ್ಸಿನ ಅನ್ವಯ ಪ್ರತಿ ಅಡಿಕೆ ಮರಕ್ಕೆ ಎನ್‌ಪಿಕೆಯನ್ನು 100:40:140 ಗ್ರಾಂ. ನಂತೆ ಒದಗಿಸಬೇಕು ಎಂದು ತೋಟಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 'ತಾಯಿಯ ಹೆಸರಲ್ಲಿ ಗಿಡ ನೆಡಿ'

**ಚಿಕ್ಕಮಗಳೂರು:** ತಾಯಿಯ ಹೆಸರಿನಲ್ಲಿ ಗಿಡಗಳನ್ನು ನೆಡುವ ಮೂಲಕ ಎಲ್ಲಾ ವಿದ್ಯಾರ್ಥಿಗಳು ಪರಿಸರ ಸಂರಕ್ಷಣೆಯಲ್ಲಿ ತೊಡಗಬೇಕು ಎಂದು ನಿಲಯ ಪಾಲಕ ಜಿ.ಟಿ.ಶಿವಕುಮಾರ್ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಕೇಂದ್ರ ಸರ್ಕಾರದ ಯುವ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯ ಮೈ ಭಾರತ್ (ಮೇರಾ ಯುವ ಭಾರತ್) ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟಗಳ ಜಿಲ್ಲಾ ಘಟಕದ ಸಂಯುಕ್ತ ಆಶ್ರಯದಲ್ಲಿ ಕಡೂರಿನ ಡಾ.ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಒಂದು ಗಿಡ ತಾಯಿಯ ಹೆಸರಿನಲ್ಲಿ (ಏಕ್ ಪೇಡ್ ಮಾ ಕೇ ನಾಮ್) ಎಂಬ ಕಾರ್ಯಕ್ರಮವನ್ನು ಗಿಡ ನೆಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕರ್ನಾಟಕ ಯುವ ಸಂಘ ಸಂಸ್ಥೆಗಳ ಒಕ್ಕೂಟದ ಜಿಲ್ಲಾ ಘಟಕದ ಕಾರ್ಯದರ್ಶಿ ಎಸ್.ಗಗನ್ ಹಾಗೂ ನಿಲಯದ ಸಿಬ್ಬಂದಿ ಅನುಷಮ್ಮ, ವಿನೋದಮ್ಮ, ಬೇಬಿ ಹಾಗೂ ಮೇರಾ ಯುವ ಭಾರತ್‌ನ ಸ್ವಯಂ ಸೇವಕರಾದ ಮಲ್ಲಿಕಾರ್ಜುನ. ಪ್ರದೀಪ್ ಮತ್ತಿತರರು ಭಾಗವಹಿಸಿದ್ದರು.

## ನಿಧನ ಸುದ್ದಿಗಳು

### ಬೆಳವನೂರು ಶ್ರೀಮತಿ ಗಂಗಮ್ಮ ನಿಧನ

**ದಾವಣಗೆರೆ:** ಬೆಳವನೂರು ತಾಲ್ಲೂಕು, ಗ್ರಾಮದ ವಾಸಿ ದಿ. ಬಿ.ಕೆ. ನಾಗೇಂದ್ರಪ್ಪ ಅವರ ಧರ್ಮಪತ್ನಿ ಶ್ರೀಮತಿ ಗಂಗಮ್ಮ (87) ಅವರು ದಿನಾಂಕ 28.07.2025ರ ಸೋಮವಾರ ರಾತ್ರಿ 9.30ಕ್ಕೆ ನಿಧನರಾದರು. ಓರ್ವ ಪುತ್ರ, ಮೂವರು ಪುತ್ರಿಯರು, ಸೊಸೆ, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ 29.07.2025 ರ ಮಂಗಳವಾರ ಮಧ್ಯಾಹ್ನ 1 ಗಂಟೆಗೆ ಮೃತರ ಸ್ವಗ್ರಾಮ ಬೆಳವನೂರಿನ ಮೃತರ ಜಮೀನಿನಲ್ಲಿ ನೆರವೇರಿಸಲಾಗಿದೆ.

### ಮಾಳಿಗೇರ ಸಣ್ಣ ಬಸಪ್ಪ

**ದಾವಣಗೆರೆ:** ತಾಲೂಕಿನ ಎಲೆಬೇಟೂರು ಗ್ರಾಮದ ನಿವಾಸಿ ಮಾಳಿಗೇರ ಸಣ್ಣ ಬಸಪ್ಪ (53) ಭಾನುವಾರ ನಿಧನರಾದರು. ಅವರಿಗೆ ಪತ್ನಿ, ಒಬ್ಬ ಪುತ್ರ, ಒಬ್ಬ ಪುತ್ರಿ ಇದ್ದಾರೆ. ಗ್ರಾಮದ ರುದ್ರಭೂಮಿಯಲ್ಲಿ ನೆರವೇರಿದೆ.

### ಬಿಜೆಪಿ ಹಿರಿಯ ಮುಖಂಡ ಟಿ.ಎಂ. ಚಂದ್ರಶೇಖರಪ್ಪ ನಿಧನ

**ದಾವಣಗೆರೆ :** ಜಿಲ್ಲಾ ಬಿಜೆಪಿಯ ಅತ್ಯಂತ ಹಿರಿಯ ಕಾರ್ಯಕರ್ತರೂ, ನಿವೃತ್ತ ಸರ್ಕಾರಿ ಹಿರಿಯ ಅಭಿಯಂತರರೂ ಆದ ಟಿ.ಎಂ. ಚಂದ್ರಶೇಖರಪ್ಪ ಅವರು ಇಂದು ರಾತ್ರಿ ನಿಧನರಾದರು.

ಅವರು ಕಳೆದ ಕೆಲವು ವರ್ಷಗಳಿಂದ ವಯೋ ಸಹಜ ಅನಾರೋಗ್ಯದಿಂದ ಬಳಲುತ್ತಿದ್ದರು. ನೀರಾವರಿ ವಿಭಾಗದಲ್ಲಿ ತಮ್ಮ ಸೇವಾ ಅವಧಿಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸೇವೆ ಸಲ್ಲಿಸಿ ಅಂತಿಮವಾಗಿ ಮಲೆಬೆನ್ನೂರು ಕೇಂದ್ರದಲ್ಲಿ ನಿವೃತ್ತಿ ಹೊಂದಿದ್ದರು. ದಕ್ಷ ಪ್ರಾಮಾಣಿಕ ಅಧಿಕಾರಿ ಎಂದು ತಮ್ಮ ಕರ್ತವ್ಯದ ಅವಧಿಯಲ್ಲಿ ಹೆಸರು ಮಾಡಿದ್ದರು. ತಮ್ಮ ಸರ್ಕಾರಿ ಸೇವೆಯಿಂದ ನಿವೃತ್ತಿಯ *ನಂತರದ ದಿನಗಳಲ್ಲಿ ಬಿಜೆಪಿಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದ ಅವರು, ದಾವಣಗೆರೆ ಮಂಡಲದ ಬಿಜೆಪಿ ಅಧ್ಯಕ್ಷರ ಆಯ್ಕೆಗೆ ಚುನಾವಣಾಧಿಕಾರಿಯಾಗಿ ಜವಾಬ್ದಾರಿ ನಿರ್ವಹಿಸಿದ್ದರು. ಜಿಲ್ಲಾ ಉಪಾಧ್ಯಕ್ಷರಾಗಿ ಪಕ್ಷದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು. ಬಿಜೆಪಿಯ ಜಿಲ್ಲಾ ಕಾರ್ಯಾಲಯ ಕಟ್ಟಡದ ಜವಾಬ್ದಾರಿ ತೆಗೆದುಕೊಂಡು ವಿ.ಜಿ. ಸಾಕ್ರೆ ಅವರ ಜೊತೆಗೂಡಿ ಕಾರ್ಯಾಲಯ ನಿರ್ಮಾಣ ಮಾಡುವುದರಲ್ಲಿ ತೊಡಗಿಸಿಕೊಂಡಿದ್ದರು.

ಡಾ. ಸ್ವಾಮಿ ಶೋಕ : ಟಿ.ಎಂ. ಚಂದ್ರಶೇಖರಪ್ಪ ಅವರ ನಿಧನಕ್ಕೆ ವಿಧಾನ ಪರಿಷತ್ತಿನ ಮಾಜಿ ಮುಖ್ಯ ಸಚೇತಕ ಡಾ. ಎ.ಹೆಚ್. ಶಿವಯೋಗಿಸ್ವಾಮಿ ಅವರು ಶೋಕ ವ್ಯಕ್ತಪಡಿಸಿದ್ದಾರೆ.

## ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ವಿವಿಧ ಯೋಜನೆಗಳಡಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯು 2025–26ನೇ ಸಾಲಿನ ಜಿಲ್ಲಾ ವಲಯ ಯೋಜನೆಯಡಿ ಬಂಡವಾಳ ಹೂಡಿಕೆ, ವೃತ್ತಿಪರ/ವೃತ್ತಿ ನಿರತ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಸರಬರಾಜು ಮತ್ತು ಬಡ್ಡಿ ಸಹಾಯಧನ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಗ್ರಾಮೀಣ ಪ್ರದೇಶದ ಆಸಕ್ತ ಅಭ್ಯರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ. ಆಸಕ್ತರು https://shimoga.nic.in ರಲ್ಲಿ ದಿ.17/08/2025 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ –1, 2ಎ, 2ಬಿ, 3ಎ, 3ಬಿ, ಪ್ರ.ಜಾ/ಪ್ರ.ವರ್ಗದ ಸಾಮಾನ್ಯ ಕೋರ್ಸಿನ ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿ ಆಹ್ವಾನಿಸಿದೆ.
ಆಸಕ್ತ ವಿದ್ಯಾರ್ಥಿಗಳು https://shp.karnataka.gov.in/bcwd ವೆಬ್‌ಸೈಟ್ ಮೂಲಕ ದಿ: 14/08/2025 ರೊಳಗಾಗಿ ಅರ್ಜಿ ಸಲ್ಲಿಸುವಂತೆ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆತಾಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರಿ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.inನ್ನು ಸಂಪರ್ಕಿಸಿ, ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಇ–ಮೇಲ್ bcwdhelpline@gmail.com ಮುಖಾಂತರ ಅಥವಾ ಜಿಲ್ಲಾ/ತಾಲೂಕು ಅಧಿಕಾರಿಗಳನ್ನು ಅಥವಾ ಸಹಾಯವಾಣಿ ಸಂ. 8050770004/ 8050770005 ಗಳನ್ನು ಸಂಪರ್ಕಿಸುವುದು.

## ಮಾಜಿ ಸೈನಿಕರ ಮಕ್ಕಳಿಗೆ ವಿವಿಧ ಶಿಷ್ಯವೇತನ ಮತ್ತು ನಗದು ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಶಿವಮೊಗ್ಗ:** ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯು 2024–25 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಗರಿಷ್ಠ ಅಂಕ ಪಡೆದ ಕರ್ನಾಟಕ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ,
2025–26 ನೇ ಸಾಲಿನ ಒಂದನೇ ತರಗತಿಯಿಂದ ಅಂತಿಮ ವರ್ಷದ ಪದವಿ/ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ಕರ್ನಾಟಕ ಮೂಲ ನಿವಾಸಿ ಮಕ್ಕಳಿಗೆ ಹಾಗೂ ಕರ್ನಾಟಕದಲ್ಲಿ ನೆಲೆಸಿರುವ ಹೊರರಾಜ್ಯದ ಪಿಂಚಣಿದಾರ ಮಾಜಿ ಸೈನಿಕರ ಮಕ್ಕಳಿಗೆ ಶಿಷ್ಯವೇತನಕ್ಕಾಗಿ ಅರ್ಜಿ ಆಹ್ವಾನಿಸಿದೆ.
ಜಿಲ್ಲಾ ಕಚೇರಿಯಲ್ಲಿ ಶುಲ್ಕ ರಹಿತವಾಗಿ ಅರ್ಜಿಯನ್ನು ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ನವೆಂಬರ್ 30, 2025 ರೊಳಗಾಗಿ ಸಲ್ಲಿಸುವಂತೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಹೆಚ್ಚಿನ ಮಾಹಿತಿಗಾಗಿ ದೂ.ಸಂ:08182220925 ಗೆ ಸಂಪರ್ಕಿಸುವುದು .

## ಪ್ರಶಸ್ತಿಗೆ ಅರ್ಜಿ ಆಹ್ವಾನ

**ಚಿಕ್ಕಮಗಳೂರು:** ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಲಾಯ ನವದೆಹಲಿ ವತಿಯಿಂದ ಪ್ರತಿ ವ?ದ ಡಿಸೆಂಬರ್ 3 ರಂದು ಆಚರಿಸಲಾಗುವ ರಾ?ಮಟ್ಟದ 'ವಿಶ್ವ ವಿಕಲಚೇತನರ ದಿನಾಚರಣೆ' ಸಮಾರಂಭದಲ್ಲಿ ವಿಕಲಚೇತನರ ಕ್ಷೇತ್ರಕ್ಕೆ ಗಣನೀಯವಾಗಿ ಸೇವೆ ಸಲ್ಲಿಸಿದ ವ್ಯಕ್ತಿಗಳ ಮತ್ತು ಸಂಸ್ಥೆಗಳಿಗೆ 'ರಾ? ಪ್ರಶಸ್ತಿ–2025 ಗೆ ಅರ್ಜಿ ಆಹ್ವಾನಿಸಲಾಗಿದೆ.

ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಮಂತ್ರಲಾಯ ನವದೆಹಲಿ ಜಾಲತಾಣ www.depwd.gov.in ಮತ್ತು ರಾಷ್ಟ್ರೀಯ ಪುರಸ್ಕಾರ ಪೋರ್ಟಲ್ www.awards.gov.in ಗಳಲ್ಲಿ ಜುಲೈ 31 ರ ಒಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08262–228171ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

## ವೈದ್ಯಾಧಿಕಾರಿಗಳ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಭಾರತೀಯ ರೆಡ್ ಕ್ರಾಸ್ ರಕ್ತನಿಧಿ ಕೇಂದ್ರದಲ್ಲಿ ಕಾರ್ಯನಿರ್ವಹಿಸಲು ವೈದ್ಯಾಧಿಕಾರಿಗಳ ಹುದ್ದೆ ಖಾಲಿಯಿದ್ದು, ಎಂ.ಬಿ.ಬಿ.ಎಸ್ ಪೂರ್ಣಗೊಂಡಿರುವ ಅಥವಾ ನಿವೃತ್ತ ವೈದ್ಯಾಧಿಕಾರಿಗಳಿಗೆ ಹಾಗೂ ರಕ್ತನಿಧಿ ಕೇಂದ್ರದಲ್ಲಿ ಸೇವೆ ಸಲ್ಲಿಸಿರುವವರಿಗೆ ಅಧ್ಯತೆ ನೀಡಲಾಗುವುದು. ನಿವೃತ್ತ ವೈದ್ಯಾಧಿಕಾರಿಗಳ ವಯಸ್ಸು 60 ರಿಂದ 70 ವರ್ಷಗಳಾಗಿರಬೇಕು ಹಾಗೂ ಚಿಕ್ಕಬಳ್ಳಾಪುರ ನಗರದ ನಿವಾಸಿಗಳಾಗಿರಬೇಕು

## ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಕಾನೂನು ಅರಿವು ಕಾರ್ಯಾಗಾರ

**ಶಿವಮೊಗ್ಗ :** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮುಕ್ತಿ ಸಂಸ್ಥೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜು.30 ರಂದು ಬೆಳಿಗ್ಗೆ 9.30 ಕ್ಕೆ ನಗರದ ಡಿಎಆರ್ ಸಭಾ ಭವನದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ

ಜಿಲ್ಲಾ ಮಟ್ಟದ ಜಾಗೃತಿ ಮತ್ತು ಕಾನೂನು ಅರಿವು ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಂಜುನಾಥ್ ನಾಯಕ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು.

ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಜಿ ಪಂ ಸಿಇಓ ಹೇಮಂತ್ ಎನ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಜಿ.ಕೆ ಮಿಥುನ್ ಕುಮಾರ್, ಡಿಹೆಚ್‌ಓ ಡಾ.ನಟರಾಜ್ ಕೆ ಎಸ್, ಡಿಡಿಪಿಐ ಮಂಜುನಾಥ್ ಎಸ್ ಆರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಮಂಜುನಾಥ್ ಆರ್, ಪಾಲ್ಗೊಳ್ಳುವರು. ಮುಕ್ತಿ ಸಂಸ್ಥೆಯ ಸುಧಾ ಜಿ ಉಪನ್ಯಾಸ ನೀಡುವರು.

## ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ 9360 ಪ್ರಕರಣ ಇತ್ಯರ್ಥ, ವಿಚ್ಛೇದನ ಕೋರಿ ಸಲ್ಲಿಸಿದ್ದ 23 ಜೋಡಿ ವೈವಾಹಿಕ ಜೀವನ ಸುಖಾಂತ್ಯ



**ದಾವಣಗೆರೆ:** ದಾವಣಗೆರೆ ಜಿಲ್ಲೆಯಾದ್ಯಂತ ಎಲ್ಲಾ ನ್ಯಾಯಾಲಯಗಳಲ್ಲಿ ಜುಲೈ 12 ರಂದು ರಾಷ್ಟ್ರೀಯ ಲೋಕ್ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿತ್ತು. ವಿವಿಧ ಪ್ರಕರಣಗಳ 18024 ಕೈಗೆತ್ತಿಕೊಂಡಿದ್ದು, ಅದರಲ್ಲಿ ಒಟ್ಟು 9,360 ಜಾರಿಯಲ್ಲಿರುವ ಪ್ರಕರಣಗಳು ಮುಕ್ತಾಯಗೊಂಡು, ರೂ.14,33,66,571 ಹಣದ ಪ್ರಕರಣ ಹಾಗೂ ವ್ಯಾಜ್ಯ ಪೂರ್ವ 2,62,712 ಪ್ರಕರಣಗಳು ಮುಕ್ತಾಯಗೊಂಡು ರೂ.72,62,10,788 ಹಣದ ಪರಿಹಾರವಾಗಿ ರಾಜಿ ಸಂಧಾನದ ಮೂಲಕ ಇತ್ಯರ್ಥಗೊಳಿಸಲಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಮ. ಕರೆಣ್ಣವರ ತಿಳಿಸಿದ್ದಾರೆ.

ಜಿಲ್ಲೆಯ ನ್ಯಾಯಾಲಯಗಳಲ್ಲಿ 77 ಅಪರಾಧಿಕ, 195 ಚೆಕ್ ಅಮಾನ್ಯ, 43 ಬ್ಯಾಂಕ್ ವಸೂಲಾತಿ, 14 ಇತರೆ ಹಣ ವಸೂಲಾತಿ, 74 ಅಪಘಾತ ಪರಿಹಾರ, 144 ವಿದ್ಯುತ್ ಕಳ್ಳತನ, 02 ಅಕ್ರಮ ಮರಳು ಗಣಿಗಾರಿಕೆ, 51 ಪಾಲು ವಿಭಾಗಕ್ಕಾಗಿ ದಾಖಲಿಸಿದ ದಾವೆ, 26 ಭೂ ಸ್ವಾಧೀನ ಪರಿಹಾರ ಜಾರಿ ಅರ್ಜಿ, 132 ಇತರೆ ರಾಜಿ ಅರ್ಜಿ ಹಾಗೂ ಹಲವು ಕಾರಣಕ್ಕಾಗಿ ದಾಖಲಿಸಿದ 88 ದಾವೆಗಳು ಮತ್ತು ಜೀವನಾಂಶ ಕೋರಿ ದಾಖಲಿಸಿದ್ದ 50 ಪ್ರಕರಣಗಳು ಸೇರಿ ಒಟ್ಟು 9360 ಪ್ರಕರಣಗಳನ್ನು ಇತ್ಯರ್ಥಗೊಳಿಸಲಾಗಿದೆ.

23 ಜೋಡಿ ವೈವಾಹಿಕ ಜೀವನ ಸುಖಾಂತ್ಯ:

ಜಿಲ್ಲೆಯಲ್ಲಿ ಒಟ್ಟು 225 ಜೋಡಿ ವಿವಿಧ ಕಾರಣಗಳಿಂದ ವಿಚ್ಛೇದನ ಮತ್ತು ಜೀವನಾಂಶಕ್ಕಾಗಿ ಪ್ರಕರಣ ದಾಖಲಿಸಿ ನ್ಯಾಯಾಲಯ ಮೆಟ್ಟಿಲೇರಿದ್ದು, ಅದರಲ್ಲಿ 20 ಪ್ರಕರಣ ದಾವಣಗೆರೆ ಜಿಲ್ಲಾ ಕೌಟುಂಬಿಕ ನ್ಯಾಯಾಲಯ ಹಾಗೂ ಹರಿಹರ, ಚನ್ನಗಿರಿ ಹಾಗೂ ಹೊನ್ನಾಳಿ ತಾಲ್ಲೂಕು ನ್ಯಾಯಾಲಯದಲ್ಲಿ ತಲಾ ಒಂದರಂತೆ ಒಟ್ಟು 23 ಜೋಡಿಗಳು ತಮ್ಮ ವೈಮನಸ್ಸುಗಳನ್ನು ಮರೆತು ಒಂದಾಗಿ ಸಹಬಾಳ್ವೆ ನಡೆಸಲು ಒಪ್ಪಿಕೊಂಡಿದ್ದು ಸುಖಾಂತ್ಯ ಕಂಡಿವೆ. ರಾಷ್ಟ್ರೀಯ ಲೋಕ್ ಅದಾಲತ್ ನಿಂದ ಸಾಕಷ್ಟು ಜನರಿಗೆ ಅನುಕೂಲವಾಗಿದೆ ಎಂದು ಅವರು ತಿಳಿಸಿದ್ದಾರೆ.

## ಲೋಕ ಅದಾಲತ್‌ನಿಂದ ಕಕ್ಷಿದಾರರ ಬಾಂಧವ್ಯ ಉಳಿವು: ನ್ಯಾ.ರಾಜೇಶ್ವರಿ ಎನ್.ಹೆಗಡೆ



**ಚಿಕ್ಕಮಗಳೂರು:** ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನದಿಂದ ಪ್ರಕರಣಗಳು ಶೀಘ್ರ ಇತ್ಯರ್ಥಗೊಳ್ಳುವುದರ ಜೊತೆಗೆ ಕಕ್ಷಿದಾರರಲ್ಲಿ ಬಾಂಧವ್ಯವೂ ಉಳಿಯಲಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರೂ, ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರೂ ಆದ ರಾಜೇಶ್ವರಿ ಎನ್.ಹೆಗಡೆ ಹೇಳಿದರು.

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ವಕೀಲರ ಸಂಘ ಮತ್ತು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಯೋಗದಲ್ಲಿ ನಗರದ ಜಿಲ್ಲಾ ನ್ಯಾಯಾಲಯ ಸಭಾಂಗಣದಲ್ಲಿ ಇಂದು ನಡೆದ ಲೋಕ ಅದಾಲತನ್ನು ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ನ್ಯಾಯಾಲಯಗಳಲ್ಲಿ ಸಾವಿರಾರು ಪ್ರಕರಣಗಳು ಬಾಕಿ ಉಳಿದಿದ್ದು, ಅವೆಲ್ಲಾ ಇತ್ಯರ್ಥಗೊಳ್ಳಬೇಕೆಂದರೆ ಸಾಕಷ್ಟು ಕಾಲಾವಕಾಶ ಹಿಡಿಯಲಿದೆ. ಹಾಗಾಗಿ ಲೋಕ ಅದಾಲತ್‌ನಲ್ಲಿ ಅವುಗಳನ್ನು ಬಗೆಹರಿಸಿಕೊಳ್ಳುವುದು ಸೂಕ್ತ. ಇದರಿಂದ ಕಕ್ಷಿದಾರರು ಪಾವತಿಸಬೇಕಾದ ನ್ಯಾಯಾಲಯದ ಶುಲ್ಕ ಹಾಗೂ ಸಮಯ ಉಳಿತಾಯವಾಗಲಿದೆ.

ವಿವಾದವನ್ನು ಬಗೆಹರಿಸಿಕೊಳ್ಳುವ ಸರಳ ವಿಧಾನ ಮುಂದೆ ಇರುವಾಗ ಸಂಘರ್ಷವನ್ನು ಯಾಕಾಗಿ ಬೆಳೆಸಿಕೊಳ್ಳಬೇಕು? ಪ್ರತಿಯೊಬ್ಬರಲ್ಲೂ ಪ್ರಕರಣಗಳು ಶೀಘ್ರ ಇತ್ಯರ್ಥವಾಗದಿರುವ ಬಗ್ಗೆ ಅಸಮಾಧಾನವಿದ್ದೇ ಇರುತ್ತದೆ. ನಿಮ್ಮೆದುರು ಇರುವ ಕಕ್ಷಿದಾರರು ನಿಮ್ಮ ಶತ್ರುವಲ್ಲ, ಬದಲಾಗಿ ನಿಮ್ಮೊಳಗಿರುವ ಸಿಟ್ಟು, ಅಹಂಕಾರ ಹಾಗೂ ಸಂಘರ್ಷದ ಮನಸ್ಥಿತಿ ಇದೆಯಲ್ಲ ಅವೇ ನಿಮ್ಮ ಶತ್ರು. ಆಸ್ತಿ,

ಹಣ ಸಂಪಾದನೆ ಮಾಡುವುದು ನಮ್ಮ ಸುಖ, ಸಂತೋಷಕ್ಕಾಗಿ. ನಮ್ಮ ಸುಖಕ್ಕೆ ಸಿಗದ ಆಸ್ತಿ, ಹಣ ವಯಸ್ಸು ಇರುವಾಗ ಸಿಗದಿದ್ದಲ್ಲಿ ಪ್ರಯೋಜನವಾದರೂ ಏನು ಎಂದು ಪ್ರಶ್ನಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆದ ವಿ.ಹನುಮಂತಪ್ಪ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಂಧಾನಕಾರರು, ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶೆ ಭಾನುಮತಿ, ನ್ಯಾಯಾಧೀಶರುಗಳಾದ ಪ್ರಕಾಶ್, ಮಂಜುನಾಥ, ಕುಲಕರ್ಣಿ, ಗುರುಪ್ರಸಾದ್, ರಾಘವೇಂದ್ರ, ಸುಜಾತ, ದ್ಯಾವಪ್ಪ, ಲತಾ, ಅನುರಾಧ, ಶರತ್ ಕುಮಾರ್, ನಂದಿನಿ, ವಕೀಲರು ಹಾಗೂ ಕಕ್ಷಿದಾರರು ಭಾಗವಹಿಸಿದ್ದರು,

## ಮಹಿಳೆ ಅಡುಗೆ ಮನೆಗೆ ಸೀಮಿತಳಲ್ಲ: ನೇತ್ರಾ ವೆಂಕಟೇಶ್



**ಟೌನ್ ಮಹಿಳಾ ಸಮಾಜದ ನೂತನ ಆಡಳಿತ ಮಂಡಳಿಯ ಅಧಿಕಾರ ಸ್ವೀಕಾರ ಮತ್ತು ಕೃತಜ್ಞತಾ ಸಮಾರಂಭವನ್ನು ಹಿರಿಯ ಸದಸ್ಯರುಗಳಾದ ಗಾಯತ್ರಿ ಗೋವಿಂದಸ್ವಾಮಿ ಹಾಗೂ ಸುಲೋಚನಾ ಶೇಖರ್ ಉದ್ಘಾಟಿಸಿದರು.**

**ಚಿಕ್ಕಮಗಳೂರು:** ಮಹಿಳೆ ಕೇವಲ ಅಡುಗೆ ಮನೆಗೆ ಸೀಮಿತಳಾಗದೆ ಯುದ್ಧವಿಮಾನಗಳನ್ನು ಹಾರಿಸುವ ತನಕ ಬದಲಾಗಿದ್ದಾಳೆ; ಬೆಳೆದಿದ್ದಾಳೆ ಎಂದು ಟೌನ್ ಮಹಿಳಾ ಸಮಾಜದ ಅಧ್ಯಕ್ಷೆ ನೇತ್ರಾ ವೆಂಕಟೇಶ್ ಹೇಳಿದರು.

ಶುಕ್ರವಾರ ಟೌನ್ ಮಹಿಳಾ ಸಮಾಜದ ನೂತನ ಆಡಳಿತ ಮಂಡಳಿಯ ಅಧಿಕಾರ ಸ್ವೀಕಾರ ಮತ್ತು ಕೃತಜ್ಞತಾ ಸಮಾರಂಭದಲ್ಲಿ ಮಾತನಾಡಿದ ಅವರು, ಹಿಂದೆ ಮಹಿಳೆ ಕುಟುಂಬಕ್ಕೆ ಮೀಸಲಾಗಿದ್ದು, ಭಾವುಕತೆಯ ಜೀವನ ಅವಳದಾಗಿತ್ತು. ಆದರೆ ಇಂದು ಹಾಗಿಲ್ಲ. ವ್ಯಾಪಾರ–ವಹಿವಾಟು ವಿಚಾರದಲ್ಲೇ ಆಗಲಿ, ಸಾಮಾಜಿಕವಾಗಿ ಅಥವಾ ರಾಜಕೀಯ ವಿಚಾರದಲ್ಲೇ ಆಗಲಿ ಬೆಳೆಯುತ್ತಿದ್ದಾಳೆ. ಇದು ಅತ್ಯಂತ ಸಂತಸದ ಸಂಗತಿ ಎಂದರು.

ಭವಿಷ್ಯದಲ್ಲಿ ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವುದಕ್ಕೆ ಪೂರಕವಾಗಿ ವೈವಿಧ್ಯಮಯ ತರಬೇತಿ ಕಾರ್ಯಕ್ರಮಗಳನ್ನು ನುರಿತ ತಜ್ಞರಿಂದ ಹಮ್ಮಿಕೊಳ್ಳಲಾಗುವುದು. ಆ ಮೂಲಕ ಮಹಿಳೆ ಇನ್ನಷ್ಟು ಅಭಿವೃದ್ಧಿ ಸಾಧಿಸಬೇಕು ಎನ್ನುವುದು ಈ ಉದ್ದೇಶದ ಹಿಂದಿರುವ ಚಿಂತನೆ ಎಂದು ತಿಳಿಸಿದರು.

ಸಾಮಾಜಿಕ ಸಂಸ್ಥೆಗಳನ್ನು ಹುಟ್ಟು ಹಾಕುವುದು ಬಹಳ ಸುಲಭ; ಆದರೆ ಅದನ್ನು ಮುನ್ನಡೆಸಿಕೊಂಡು ಹೋಗುವುದು ಬಹಳ ಪ್ರಯಾಸದ ಕೆಲಸ. ಟೌನ್ ಮಹಿಳಾ ಸಮಾಜ ಮುಂದಿನ ವರ್ಷ 100ನೇ ವರ್ಷಕ್ಕೆ ಪಾದಾರ್ಪಣೆ ಮಾಡಲಿದೆ. ಸಂಸ್ಥೆಯ ಸಂಸ್ಥಾಪಕರು, ಹಿಂದಿನ ಅಧ್ಯಕ್ಷರು, ನಿರ್ದೇಶಕರುಗಳು, ಸದಸ್ಯರುಗಳು ತಮ್ಮ ತನು, ಮನ, ಧನದೊಂದಿಗೆ ಪರಿಶ್ರಮ ವಹಿಸಿ ಕಾರ್ಯ ನಿರ್ವಹಿಸಿದ ಪರಿಣಾಮವಾಗಿ ಈ ಸಮಾಜ 100 ಸಂವತ್ಸರಗಳನ್ನು ತಲುಪಿದೆ ಎಂದು ಹೇಳಿದರು.

ಚುನಾವಣೆ ಸಂದರ್ಭದಲ್ಲಿ ಸಮಾಜದ ಸದಸ್ಯರು ಮತ ಚಲಾಯಿಸುವುದಕ್ಕೆ ಮಾತ್ರ ಸೀಮಿತವಾಗದೆ ಅಭಿವೃದ್ಧಿ ಸಲುವಾಗಿ ಕೈಗೊಳ್ಳುವ ಎಲ್ಲಾ ಕಾರ್ಯಕ್ರಮಗಳಿಗೆ ಆಡಳಿತ ಮಂಡಳಿ ಜೊತೆ ಕೈಜೋಡಿಸಬೇಕು. ಚುನಾವಣೆ ಸಂದರ್ಭದಲ್ಲಿ ತಮ್ಮ ತಂಡದ ಎಲ್ಲಾ 17 ಸದಸ್ಯರನ್ನು ಆಯ್ಕೆ ಮಾಡಿರುವುದಕ್ಕೆ ಕೃತಜ್ಞತೆ ವ್ಯಕ್ತಪಡಿಸಿದರು.

ಸ್ವಾಗತಿಸಿದ ಸಮಾಜದ ಪ್ರಧಾನ ಕಾರ್ಯದರ್ಶಿ ಶುಭದಾ ಗೌಡ ಮಾತನಾಡಿ, ಟೌನ್ ಮಹಿಳಾ ಸಮಾಜದ ಆಡಳಿತ ಮಂಡಳಿ ಏನೇ ತೀರ್ಮಾನ ಕೈಗೊಂಡರೂ ಅದು ಅಭಿವೃದ್ಧಿಯ ಪರವಾಗಿರುತ್ತದೆ. ಸದಸ್ಯರುಗಳು ಆಡಳಿತ ಮಂಡಳಿಯ ಜೊತೆಗೆ ಬಿಡುವಿನ ವೇಳೆಯಲ್ಲಿ ತೊಡಗಿಸಿಕೊಂಡು ಸೂಕ್ತ ಸಲಹೆ–ಸಹಕಾರ ನೀಡಬೇಕೆಂದು ಕೋರಿದರಲ್ಲದೆ, ಕಾರ್ಯ ನಿರ್ವಹಣೆಯಲ್ಲಿ ಲೋಪ ಕಂಡರೂ ಅವುಗಳ ಬಗ್ಗೆ ತಿಳಿ ಹೇಳಬೇಕು ಎಂದರು.

ಇದೇ ವೇಳೆ ಕಾಲೇಜಿಗೆ ಹಸಿರು ದೇಣಿಗೆ ನೀಡಿದ ದಾನಿಗಳನ್ನು ಗೌರವಿಸಲಾಯಿತು. ಸಮಾಜದಿಂದ ಆಯೋಜಿಸಿದ್ದ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿಜೇತರಾದವರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಹಿರಿಯ ಸದಸ್ಯರುಗಳಾದ ಗಾಯತ್ರಿ ಗೋವಿಂದಸ್ವಾಮಿ ಹಾಗೂ ಸುಲೋಚನಾ ಶೇಖರ್ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಖಜಾಂಚಿ ಗೀತಾ ಸಿಂಗ್ ಹಾಗೂ ಇತರ ನಿರ್ದೇಶಕರುಗಳು ಉಪಸ್ಥಿತರಿದ್ದರು. ಭವಾನಿ ಕಾರ್ಯಕ್ರಮ ನಿರೂಪಿಸಿದರು. ರೀನಾ ಸುಚೇಂದ್ರ ವಂದಿಸಿದರು.

## ಶೈಕ್ಷಣಿಕ ಅಭಿವೃದ್ಧಿಗೆ ಪ್ಲೇಸ್ಮೆಂಟ್ ಸೆಲ್‌ನ ನವೀನ ಪ್ರಯತ್ನ ಮಾಸ್ಟರಿಂಗ್ ಸ್ಕಿಲ್



**ದಾವಣಗೆರೆ :** ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ನಾತಕೋತ್ತರ

ವಿಭಾಗ ಹಾಗೂ ಪ್ಲೇಸ್ಮೆಂಟ್ ಸೆಲ್ ಸಂಯುಕ್ತ ಆಶ್ರಯದಲ್ಲಿ "ಮಾಸ್ಟರಿಂಗ್ ಸ್ಕಿಲ್" ಎಂಬ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮವನ್ನು ವಿಜೃಂಭಣೆಯಿಂದ ಆಯೋಜಿಸಲಾಗಿತ್ತು. ವಿದ್ಯಾರ್ಥಿಗಳಲ್ಲಿನ ಉದ್ಯೋಗೋಪಯುಕ್ತ ಕೌಶಲ್ಯಗಳನ್ನು ಬೆಳಸುವುದೇ ಈ ಕಾರ್ಯಕ್ರಮದ ಪ್ರಧಾನ ಉದ್ದೇಶವಾಗಿತ್ತು.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕೌಶಲ್ಯ ತರಬೇತುದಾರ ಶ್ರೀ ಸಲೀಂ ಮಲಿಕ್ ಅವರು ವಿದ್ಯಾರ್ಥಿಗಳೊಂದಿಗೆ ನೇರ ಸಂವಾದ ನಡೆಸಿ, ನಾನಾ ಉದ್ಯೋಗ ಕ್ಷೇತ್ರಗಳಲ್ಲಿ ಅಪೇಕ್ಷಿಸುವ ಪ್ರಮುಖ ಕೌಶಲ್ಯಗಳ ಕುರಿತು ವಿಶ್ಲೇಷಣೆ ನೀಡಿದರು. ಸಮರ್ಥತೆ, ಸಂವಹನ ಕೌಶಲ್ಯ, ಸಮಯ ನಿರ್ವಹಣೆ, ತಂಡದಲ್ಲಿ ಕೆಲಸ ಮಾಡುವ ಸಾಮರ್ಥ್ಯ, ಲೀಡರ್‌ಶಿಪ್, ತಾಂತ್ರಿಕ ಜ್ಞಾನ ಹಾಗೂ ಸೃಜನಶೀಲತೆ ಮುಂತಾದ ಹಲವು ಅಂಶಗಳನ್ನು ಅವರು ವಿವರಣೆ ಮಾಡಿದರು. ಕೇವಲ ಅಂಕಗಳಲ್ಲದೆ, ಜೀವನದ ಸಮಸ್ಯೆಗಳನ್ನು ಬುದ್ಧಿವಂತಿಕೆಯಿಂದ ಎದುರಿಸುವ ಮೌಲ್ಯಾಧಾರಿತ ಕೌಶಲ್ಯಗಳ ಅಗತ್ಯವಿದೆ ಎಂಬುದರ ಮೇಲೆ ಅವರು ಒತ್ತಾಯಿಸಿದರು.ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಡಾ. ವೆಂಕಟೇಶ್ ಬಾಬು, ಪ್ಲೇಸ್ಮೆಂಟ್ ಸೆಲ್‌ನ ಸಂಚಾಲಕರಾಗಿದ್ದು, ಅವರು ವಿದ್ಯಾರ್ಥಿಗಳು ತಮ್ಮ ಪ್ರತಿಭೆಯನ್ನು ಗುರುತಿಸಿ ಅದನ್ನು ಅಗತ್ಯ ಕೌಶಲ್ಯಗಳ ಮೂಲಕ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. "ಇಂದು ಆಳವಾದ ಜ್ಞಾನಕ್ಕಿಂತ ಸರಿಯಾದ ಕೌಶಲ್ಯಗಳು ಮಾರುಕಟ್ಟೆಯಲ್ಲಿ ಹೆಚ್ಚು ಮೌಲ್ಯ ಹೊಂದಿವೆ. ಈ ರೀತಿಯ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ದಿಕ್ಕು ತೋರಿಸುತ್ತವೆ," ಎಂದು ಅವರು ಹೇಳಿದರು.ಕಾರ್ಯಕ್ರಮದಲ್ಲಿ ಕಾಲೇಜಿನ ಉಪನ್ಯಾಸಕರು, ಪ್ಲೇಸ್ಮೆಂಟ್ ಸಮಿತಿಯ ಸದಸ್ಯರು ಹಾಗೂ ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿದ್ದರು. ವಿವರಣೆಣಟಿಜಜಜಿಟಿಜಜತ್ಮಕ ಪ್ರಸ್ತುತಿಗಳು, ಚರ್ಚೆಗಳು, ಮತ್ತು ಉದಾಹರಣೆಗಳ ಮೂಲಕ ಈ ಕಾರ್ಯಾಗಾರ ವಿದ್ಯಾರ್ಥಿಗಳಿಗೆ ನೂತನ ದೃಷ್ಟಿಕೋಣವೊಂದನ್ನು ನೀಡಿತು.

ಈ ಕಾರ್ಯಕ್ರಮದ ಮೂಲಕ ವಿದ್ಯಾರ್ಥಿಗಳು ತಮ್ಮ ಆತ್ಮವಿಶ್ವಾಸವನ್ನು ಗಟ್ಟಿಮಾಡಿಕೊಳ್ಳುವ ಜೊತೆಗೆ ಉದ್ಯೋಗದ ಮಾರುಕಟ್ಟೆಯಲ್ಲಿ ತಮ್ಮನ್ನು ತಾವು ಹೇಗೆ ತಯಾರಿಸಿಕೊಳ್ಳಬೇಕು ಎಂಬುದರ ಕುರಿತು ಸ್ಪಷ್ಟ ದಿಕ್ಕು ಪಡೆದುಕೊಂಡರು. "ಮಾಸ್ಟರಿಂಗ್ ಸ್ಕಿಲ್" ನಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಕೌಶಲ್ಯಾಧಾರಿತ ಶಿಕ್ಷಣದ ಪ್ರಜ್ಞೆ ಬೆಳೆಸಲು ಪ್ರಮುಖ ಪಾತ್ರ ವಹಿಸುತ್ತಿವೆ ಎಂದು ಪ್ರಾಂಶುಪಾಲದ ಪ್ರೊ. ಬಿ ಸಿ ತಸಿಲ್ದಾರ್ ಅವರು ಹೇಳಿದರು

## ಕಲಿಕೆಗೆ ಹೆಚ್ಚು ಒತ್ತು ನೀಡಲು ಸೂಚನೆ

**ಹಾಸನ:** ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ.ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆಯಲು ಮಕ್ಕಳನ್ನು ಸಜ್ಜು ಗೊಳಿಸುವ ನಿಟ್ಟಿನಲ್ಲಿ ಡಿಸೆಂಬರ್ ಅಂತ್ಯದೊಳಗೆ ಪಠ್ಯ ಕ್ರಮಗಳನ್ನು ಪೂರ್ಣಗೊಳಿಸಿ ಕಲಿಕೆ ಕಡೆಗೆ ಹೆಚ್ಚು ಒತ್ತು ನೀಡಬೇಕು ಎಂದು ಜಿಲ್ಲಾಧಿಕಾರಿ ಲತಾ ಕುಮಾರಿ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ಫ್ರೈಡೇ ಫ್ರೆಂಡ್ ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಕರು ಹಾಗೂ ಮಕ್ಕಳೊಂದಿಗೆ ವಿಡಿಯೋ ಸಂವಾದದ ಮೂಲಕ ಮಾತನಾಡಿದ ಅವರು ಮಕ್ಕಳ ಉತ್ತಮ ಭವಿಷ್ಯಕ್ಕೆ ಈ ಕಾರ್ಯಕ್ರಮ ಅಡಿಗಲ್ಲು ಎಂದು ತಿಳಿಸಿದರು.ಬಾಲ್ಯ ವಿವಾಹ ತಡೆಗಟ್ಟುವ ನಿಟ್ಟಿನಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆ ಆಂದೋಲನ ನಡೆಸುವಂತೆ ನಿರ್ದೇಶನ ನೀಡಿದರಲ್ಲದೆ, ಪ್ರತಿ ಶಾಲೆಯಲ್ಲಿ ಪೋಸ್ಟ್ ರ್ ಗಳನ್ನು ಅಳವಡಿಸಿ ಜೊತೆಗೆ ಮಕ್ಕಳಿಂದ ಕಿರು ನಾಟಕಗಳನ್ನು ಮಾಡಿಸುವುದು, ಚಿತ್ರಕಲಾ ಸ್ಪರ್ಧೆ ಏರ್ಪಡಿಸುವಂತೆ ಸೂಚಿಸಿದರು.

ಲೈಂಗಿಕ ಅಪರಾದದ ಬಗ್ಗೆ ಎಚ್ಚರವಹಿಸಿ ಮಕ್ಕಳಿಗೆ ತಿಳುವಳಿಕೆ ನೀಡಬೇಕು ಎಂದ ಅವರು ಹೆಣ್ಣು ಮಕ್ಕಳು ತಮ್ಮನ್ನು ತಾವು ರಕ್ಷಿಸಿಕೊಳ್ಳಲು ಅರಿವು ಮೂಡಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪಠ್ಯದ ಜೊತೆಗೆ ವಿವಿಧ ವಿಷಯಗಳ ಬಗ್ಗೆ ಮಕ್ಕಳಿಗೆ ತಿಳುವಳಿಕೆ ನೀಡಬೇಕು ಎಂದ ಅವರು ಮಕ್ಕಳ ಹಕ್ಕುಗಳ ಸಂರಕ್ಷಣೆಗೆ ಹೆಚ್ಚಿನ ಒತ್ತು ನೀಡಬೇಕು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಾಕ್ಷಾಯಿಣಿ ಅವರು ಮಾತನಾಡಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚಳವಾಗುತ್ತಿದೆ ಇದನ್ನು ಗಂಭೀರವಾಗಿ ಪರಿಗಣಿಸಿ ತಡೆಗಟ್ಟಲು ಜಾಗೃತಿ ಮೂಡಿಸಬೇಕು ಎಂದು ತಿಳಿಸಿದರು.

ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಚಂದ್ರಶೇಖರ್ ಹಾಗೂ ಮತ್ತಿತರರು ಸಭೆಯಲ್ಲಿ ಹಾಜರಿದ್ದರು.

## ಸ್ವಾತಂತ್ರ್ಯೋತ್ಸವ ಆಚರಣೆ ಪೂರ್ವಭಾವಿ ಸಭೆ

**ಚಿತ್ರದುರ್ಗ:** ಜಿಲ್ಲಾ ಮಟ್ಟದಲ್ಲಿ ಭಾರತ ಸ್ವಾತಂತ್ರ್ಯೋತ್ಸವ–2025ನ್ನು ಆಚರಿಸುವ ಹಾಗೂ ಕಾರ್ಯಕ್ರಮಗಳ ರೂಪರೇಷೆಗಳನ್ನು ಚರ್ಚಿಸುವ ಸಲುವಾಗಿ ಆಗಸ್ಟ್ 1 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು, ನಗರದ ಶಾಲಾ ಕಾಲೇಜುಗಳ ಪ್ರಾಂಶುಪಾಲರು, ಭಾರತ ಸೇವಾದಳ, ಸ್ಕೌಟ್ಸ್ ಮತ್ತು ಗೈಡ್ಸ್, ಎನ್.ಸಿ.ಸಿ ಹಾಗೂ ಎನ್.ಎಸ್.ಎಸ್ ಘಟಕಗಳ ಮುಖ್ಯಸ್ಥರು, ಮಾಧ್ಯಮ ಸೇರಿದಂತೆ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿ ಅಗತ್ಯ ಸಲಹೆ ಸೂಚನೆಗಳನ್ನು ನೀಡುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

## ಮೀನು ಕೃಷಿಕರಿಂದ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ವಿಜಯನಗರ (ಹೊಸಪೇಟೆ):** 2025–26 ಸಾಲಿನ ಮೀನುಗಾರಿಕೆ ಇಲಾಖೆ ವತಿಯಿಂದ ಜಿಲ್ಲಾ ಪಂಚಾಯಿತಿಯ ಯೋಜನೆಗಳಡಿ ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ ಎಂದು ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಒಳನಾಡು ಮೀನುಗಾರಿಕೆ ಅಭಿವೃದ್ಧಿಗೆ ಸಹಾಯ ಯೋಜನೆಯಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಮೀನು ಕೃಷಿಕರಿಗೆ 10 ಸಾವಿರ ರೂ. ವೆಚ್ಚದಲ್ಲಿ ಉಚಿತ ಮೀನುಗಾರಿಕೆ ಸಲಕರಣೆ ಕಿಟ್‌ಗಳನ್ನು ವಿತರಿಸಲಾಗುವುದು. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ ಮತ್ಸವಾಹಿನಿ ಯೋಜನೆಯಡಿ ಐಸ್ ಬಾಕ್ಸ್ನೊಂದಿಗೆ ಮೊಪೆಡ್ ಖರೀದಿಸಲು ಸಹಾಯಧನ ನೀಡಲಾಗುತ್ತದೆ.

ಆಗಸ್ಟ್ 16 ರಂದು ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು ನಿಗಧಿಪಡಿಸಲಾಗಿದೆ. ಅರ್ಹ ಅರ್ಜಿದಾರರು ಅಗತ್ಯ ದಾಖಲೆಗಳೊಂದಿಗೆ ವೆಬ್‌ಸೈಟ್ https://vijayanagara.nic.in ಭೇಟಿ ನೀಡಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವುದು. ಅಥವಾ ಆಯಾ ತಾಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಯ ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಮೀನುಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕರನ್ನು ಅಥವಾ ಜಿಲ್ಲೆಯ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರ ಕಚೇರಿಗೆ ಭೇಟಿ ನೀಡಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ಧೆಗೆ ಅರ್ಜಿ ಆಹ್ವಾನ

**ಬಳ್ಳಾರಿ:** ಕೃಷಿ ಇಲಾಖೆ ವತಿಯಿಂದ 2025–26ನೇ ಸಾಲಿನ ಕೃಷಿ ಪ್ರಶಸ್ತಿ ಕಾರ್ಯಕ್ರಮದಡಿ ಬೆಳೆ ಸ್ಪರ್ಧೆಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಕೃಷಿ ಇಲಾಖೆಯ ಕೆ–ಕಿಸಾನ್ ಪೋರ್ಟಲ್ ನಲ್ಲಿ ಸಿಟಿಜನ್ ಲಾಗಿನ್ ಅಥವಾ ಆರ್‌ಎಸ್‌ಕೆ ಲಾಗಿನ್ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾ ಕೇಂದ್ರ ಅಥವಾ ಸ್ವತಃ ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಕೆ–ಕಿಸಾನ್ ಪೋರ್ಟಲ್‌ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್‌ಐಡಿ ಬಳಸಿಕೊಂಡು ಅರ್ಜಿ ಸಲ್ಲಿಸಬಹುದಾಗಿದೆ.

ಕೃಷಿ ಪ್ರಶಸ್ತಿಗೆ ಅರ್ಜಿ ಸಲ್ಲಿಸಲು ಮುಂಗಾರು ಹಂಗಾಮಿಗೆ ಆಗಸ್ಟ್ 30 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ಸಮೀಪದ ರೈತ ಸಂಪರ್ಕ ಕೇಂದ್ರ, ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಹಾಗೂ ಜಂಟಿ ಕೃಷಿ ನಿರ್ದೇಶಕರ ಕಚೇರಿಗೆ ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಸ್ವೀಕಾರ

**ಶಿವಮೊಗ್ಗ:** ಕರ್ನಾಟಕ ಲೋಕಾಯುಕ್ತದ ಪೊಲೀಸ್ ಉಪಾಧೀಕ್ಷಕರು ಜುಲೈ 31 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 12.30 ರವರೆಗೆ ತೀರ್ಥಹಳ್ಳಿಯ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಸಾರ್ವಜನಿಕರಿಂದ ಕುಂದು ಕೊರತೆ ಅರ್ಜಿಗಳನ್ನು ಸ್ವೀಕರಿಸುವರು. ಸಾರ್ವಜನಿಕರು ಈ ಸಭೆಗೆ ಹಾಜರಾಗಿ ಸರ್ಕಾರಿ ಯೋಜನೆಗಳನ್ನು ಫಲಾನುಭವಿಗಳಿಗೆ ದೊರಕಿಸುವಲ್ಲಿ ಸರ್ಕಾರಿ ಅಧಿಕಾರಿಗಳ ಬೇಜವಾಬ್ದಾರಿತನ, ಸರ್ಕಾರಿ ಕರ್ತವ್ಯ ನಿರ್ವಹಿಸಲು ನಿರ್ಲಕ್ಷ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸ ನಿರ್ವಹಿಸಲು ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಲಿಖಿತವಾಗಿ ಅಹವಾಲು ಸಲ್ಲಿಸಬಹುದೆಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

# ಬಾಲ್ಯ ವಿವಾಹ ತಡೆಗೆ ಸೂಚನೆ




**ಹಾಸನ :** ಬಾಲ್ಯ ವಿವಾಹ,ಬಾಲ ಗರ್ಭಿಣಿಯರು ಹಾಗೂ ಬಾಲ ಕಾರ್ಮಿಕ ಪದ್ಧತಿಯನ್ನುತಡೆಗಟ್ಟುವ ನಿಟ್ಟಿನಲ್ಲಿ ತಹಸೀಲ್ದಾರ್‌ಗಳು ಎಚ್ಚರವಹಿಸುವಂತೆಜಿಲ್ಲಾಧಿಕಾರಿ ಲತಾಕುಮಾರಿಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾಧಿಕಾರಿಕಚೇರಿ ಸಭಾಂಗಣದಲ್ಲಿಇಂದು ನಡೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದಅವರುವಲಸೆ ಕಾರ್ಮಿಕರ ಪಟ್ಟಿತಯಾರಿಸುವಂತೆ ಸೂಚಿಸಿದರಲ್ಲದೆ, ಮಾನವ ಹಕ್ಕು, ಮಕ್ಕಳ ಹಕ್ಕು, ಮಹಿಳೆಯರ ಹಕ್ಕುಗಳು ಉಲ್ಲಂಘನೆಯಾಗದಂತೆನಿಗಾವಹಿಸಿ ಹಕ್ಕುಗಳ ಸಂರಕ್ಷಣೆಗೆಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ವಲಸೆ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಹತ್ತಿರದಸರ್ಕಾರಿಶಾಲೆಗಳಿಗೆ ಸೇರಿಸಿ, ಉಚಿತ ಪುಸ್ತಕಗಳ ವಿತರಣೆ, ಬಿಸಿಯೂಟದ ವ್ಯವಸ್ಥೆಗೆಕ್ರಮವಹಿಸಬೇಕು ಎಂದರಲ್ಲದೆ ಹತ್ತಕ್ಕಿಂತ ಹೆಚ್ಚು ಮಕ್ಕಳಿದ್ದಲ್ಲಿ ತಾತ್ಕಲಿಕ ವಾಗಿಅಂಗನವಾಡಿತೆರೆಯುವಂತೆಸೂಚಿಸಿದರು.

ವಲಸೆಕಾರ್ಮಿಕರಿಗೆ ಇ–ಶ್ರಮ್‌ಕಾರ್ಡ್ ವಿತರಿಸಿಎಂದಜಿಲ್ಲಾಧಿಕಾರಿಯವರುಆಧಾರ್‌ಕಾರ್ಡ್‌ಇರುವವರು ಹಾಗೂ ಇಲ್ಲದವರನ್ನು ಪಟ್ಟಿ ಮಾಡಿಎಪಿಕ್‌ಕಾರ್ಡ್ ಹೊಂದಿದ್ದರೆಆಧಾರ್‌ಕಾರ್ಡ್ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಪ್ರತಿತಾಲ್ಲೂಕಿನಲ್ಲೂ ವಲಸೆ ಕಾರ್ಮಿಕರ ಪಟ್ಟಿಇರಬೇಕುಎಂದುತಹಸೀಲ್ದಾರ್‌ಗಳಿಗೆ ತಿಳಿಸಿದರು

# ಕೇರಳದ ಪವರ್ ಲಿಫ್ಟಿಂಗ್ ಸ್ಪರ್ಧೆಯ ತೀರ್ಪುಗಾರರಾಗಿ ಎಂ ಮಹೇಶ್ವರಯ್ಯ ಆಯ್ಕೆ

**ದಾವಣಗೆರೆ:** ಕೇರಳ ರಾಜ್ಯದ ವಿ ಕೆ ಕೃಷ್ಣ ಮೇನನ್ ಇಂಡೋರ್ ಸ್ಟೇಡಿಯಂ ಕೊಹಿಕೋಡೆ (ಇಂಡ್ಝುಇಂಜಜ) ಯಲ್ಲಿ 2025 ಆಗಸ್ಟ್ 2 ರಿಂದ 7 ರ ವರೆಗೆ 6 ದಿನಗಳಕಾಲ ನೆಡೆಯಲಿರುವ ರಾಷ್ಟ್ರಮಟ್ಟದ ಹಿರಿಯರ ಪುರುಷರ ಹಾಗು ಮಹಿಳಿಯರ ಇಕ್ವಿಪ್ಡೆಡ್ ಮತ್ತು ಕ್ಲಾಸಿಕ್ ಪವರ್ ಲಿಫ್ಟಿಂಗ್ ಚಾಂಪಿಯನ್ ಸ್ಪರ್ಧೆಗೆ ತೀರ್ಪುಗರರಾಗಿ ದಾವಣಗೆರೆಯ ಹೆಸರದಾಂತ ಅಂತರ ರಾಷ್ಟ್ರೀಯ ಕ್ರೀಡಾಪಟುವಾದ ಗಂಗನರಸಿ ಗ್ರಾಮದ ದಾವಣಗೆರೆಯ ಶಂಕರ್ ವಿಹಾರ್ ಬಡಾವಣೆ "ಬಿ " ಬ್ಲಾಕ್ ವಾಸಿ ಎಂ. ಮಹೇಶ್ವರಯ್ಯ, ಪವರ್ಲಿಫ್ಟಿಂಗನಲ್ಲಿ ಜೀವಮಾನದ ಪ್ರಶಸ್ತಿ ವಿಜೇತರು, ಸ್ಟ್ರಾಂಗ್ ಮ್ಯಾನ್ ಆಫ್ ಏಷ್ಯಾ ಪ್ರಶಸ್ತಿ ವಿಜೇತರು ಹಾಗು ರಾಷ್ಟ್ರೀಯ ಕೆಟಗರಿ –1 ತೀರ್ಪುಗಾರರು, ಇವರುಗಳು ಆಯ್ಕೆ ಯಾಗಿದ್ದಾರೆ, ಇವರಿಗೆ ಬಿರೇಶ್ವರವ್ಯಾಯಾಮಶಾಲೆಯ, ಗ್ರೂಪ್ ಆಫ್ ಐರನ್ ಗೇಮ್ಸ್ ನ, ನಗರಸಭೆ ವ್ಯಾಯಾಮಶಾಲೆಯ, ಎಲ್ಲಾ ಹಿರಿಯ, ಕಿರಿಯ ಕ್ರೀಡಾಪಟುಗಳು, ಗಂಗನರಸಿ ಗ್ರಾಮಸ್ಥರು, ಅಧಿಕಾರವರ್ಗದವರು, ಎಲ್ಲಾ ಕ್ರೀಡಾಭಿಮಾನಿಗಳು, ಅಭಿಮಾನಿಗಳು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

### ರಸಗೊಬ್ಬರ ಪೂರೈಕೆಗೆ ರಾಜ್ಯದಿಂದ ಕೇಂದ್ರಕ್ಕೆ ಆರು ಬಾರಿ ಮನವಿ

# ರಾಜ್ಯದಲ್ಲಿ ರಸಗೊಬ್ಬರ ಕೊರತೆ ನೀಗಿಸಲು ಅಗತ್ಯ ಕ್ರಮ

**ಬೆಂಗಳೂರು:** ಕೇಂದ್ರ ಸರ್ಕಾರದಿಂದ ಕಳೆದ ಮೂರು ವರ್ಷಗಳಲ್ಲಿ ಆರಂಭಿಕ ಶುಲ್ಕನ್ನು ಪರಿಗಣಿಸದೇ ಯೂರಿಯಾ ಸೇರಿದಂತೆ ಎಲ್ಲಾ ರಸಗೊಬ್ಬರಗಳನ್ನು ಬೇಡಿಕೆಗೆ ಅನುಗುಣವಾಗಿ ಹಂಚಿಕೆ ಮತ್ತು ಸರಬರಾಜು ಮಾಡಲಾಗಿರುತ್ತದೆ. ಇದರಿಂದಾಗಿ ರಾಜ್ಯದಲ್ಲಿ ಯಾವುದೇ ರೀತಿಯ ರಸಗೊಬ್ಬರದ ಕೊರತೆ ಕಂಡು ಬಂದಿರುವುದಿಲ್ಲ ಎಂದು ಕೃಷಿ ಇಲಾಖೆ ಪ್ರಕಟಣೆ ತಿಳಿಸಿದೆ.

ರಸಗೊಬ್ಬರ ಕೊರತೆಗೆ ಮೂಲ ಕಾರಣ:

ಪ್ರಸಕ್ತ ಸಾಲಿನಲ್ಲಿ ಮಾತ್ರ ಆರಂಭಿಕ ಶುಲ್ಕ ಪರಿಗಣಿಸಿ, ಕೇಂದ್ರ ಸರ್ಕಾರದಿಂದ ರಸಗೊಬ್ಬರ ಹಂಚಿಕೆ ಮತ್ತು ಸರಬರಾಜು ಪ್ರಕ್ರಿಯೆ ಜರುಗಿಸಲಾಗುತ್ತಿದೆ. ಇದರಿಂದಾಗಿ ರಾಜ್ಯದಲ್ಲಿ ಯೂರಿಯಾ ರಸಗೊಬ್ಬರದ ಪ್ರಾರಂಬಿಕ ದಾಸ್ತಾನನ್ನು ಪರಿಗಣಿಸಿ, ಯೂರಿಯಾ ರಸಗೊಬ್ಬರದ ಕಡಿಮೆ ಹಂಚಿಕೆ ಮಾಡಿರುವುದು ಕೊರತೆಗೆ ಮೂಲ ಕಾರಣವಾಗಿದೆ.

ರಾಜ್ಯದ ಬೆಳೆ ಪದ್ಧತಿಯನ್ನು ಆಧರಿಸಿ ಮುಂಗಾರು ಹಂಗಾಮಿಗೆ ಮುಂಚಿತವಾಗಿ ಕೇಂದ್ರ ಸರ್ಕಾರಕ್ಕೆ 12.95 ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರ ಬೇಡಿಕೆಯನ್ನು ಸಲ್ಲಿಸಲಾಗಿತ್ತು. ಆದರೆ, ಕೇಂದ್ರ ಸರ್ಕಾರದಿಂದ 11.17 ಲಕ್ಷ ಮೆ.ಟನ್ ಹಂಚಿಕೆ ನಿಗದಿಪಡಿಸಲಾಗಿರುತ್ತದೆ.

ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 3.02ಲಕ್ಷ ಮೆ.ಟನ್ ಡಿ.ಎ.ಪಿ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 2.21 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 81,000 ಮೆ.ಟನ್ ಸರಬರಾಜು ಬಾಕಿ ಇರುತ್ತದೆ.

ರಾಜ್ಯದಲ್ಲಿ ಡಿ.ಎ.ಪಿ. ಕೊರತೆ ಕಂಡು ಬಂದಾಗ ಕೃಷಿ ಸಚಿವರ ನಿರ್ದೇಶನದಂತೆ ಪರ್ಯಾಯ ರಸಗೊಬ್ಬರಗಳ ಬಳಕೆ ಕುರಿತು ರೈತರಲ್ಲಿ ಅರಿವು ಮೂಡಿಸಿ, ಪ್ರಸ್ತುತ, ಡಿ.ಎ.ಪಿ. ರಸಗೊಬ್ಬರದ ಕೊರತೆಯನ್ನು ನೀಗಿಸಲಾಗಿದೆ.

ಏಪ್ರಿಲ್ ಮಾಹೆಯಿಂದ ಜುಲೈ ಮಾಹೆಯವರೆಗೆ 6.80ಲಕ್ಷ ಮೆ.ಟನ್ ಯೂರಿಯಾ ರಸಗೊಬ್ಬರದ ಬೇಡಿಕೆ ಇದ್ದು ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ 5.35 ಲಕ್ಷ ಮೆ.ಟನ್ ಸರಬರಾಜಾಗಿದ್ದು, ಇನ್ನೂ 1.45 ಲಕ್ಷ ಮೆ.ಟನ್ ಸರಬರಾಜು ಬಾಕಿ ಇರುತ್ತದೆ.

ಕೇಂದ್ರ ಸರ್ಕಾರದಿಂದ ಇಲ್ಲಿಯವರೆಗೆ ಸರಬರಾಜು ಮಾಡಿರುವ ರಸಗೊಬ್ಬರವನ್ನು ಸಮರ್ಪಕವಾಗಿ ಎಲ್ಲಾ ಜಿಲ್ಲೆಗಳಿಗೆ ಹಂಚಿಕೆ ಮಾಡಿ ರೈತರಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ನಿಭಾಯಿಸಲಾಗಿರುತ್ತದೆ.

ರಾಜ್ಯದಿಂದ ರಸಗೊಬ್ಬರ ಪೂರೈಕೆಗೆ ಆರು ಬಾರಿ ಮನವಿ:

ಕೇಂದ್ರ ರಸಗೊಬ್ಬರ ಇಲಾಖೆಯ ಅಧಿಕಾರಿಗಳಿಗೆ ಕೃಷಿ ಇಲಾಖೆ ವತಿಯಿಂದ ಏಪ್ರಿಲ್ ಮಾಹೆಯಿಂದ ಇಲ್ಲಿಯವರೆಗೆ ಆರು ಬಾರಿ ಪತ್ರಗಳನ್ನು ಬರೆದು ಹಂಚಿಕೆಗೆ ಅನುಗುಣವಾಗಿ ಅವಶ್ಯವಿರುವ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಲಾಗಿರುತ್ತದೆ.

ರಾಜ್ಯದ ಕೃಷಿ ಸಚಿವರು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ ಅಗತ್ಯವಿರುವ ಡಿ.ಎ.ಪಿ. ರಸಗೊಬ್ಬರದ ಪೂರೈಕೆಗೆ ಪತ್ರ ಮುಖೇನ ಮನವಿ ಸಲ್ಲಿಸಿದ್ದಾರೆ. ಅಲ್ಲದೇ, ಕೃಷಿ ಸಚಿವರೇ ಖುದ್ದಾಗಿ, ಕೇಂದ್ರ ಸರ್ಕಾರದ ಕೃಷಿ ಮತ್ತು ರೈತರ ಕಲ್ಯಾಣ ಸಚಿವರನ್ನು ಇದೇ ಜುಲೈ 7 ರಂದು ಭೇಟಿ ಮಾಡಿ ಕೇಂದ್ರ ಸರ್ಕಾರದಿಂದ ಸಕಾಲದಲ್ಲಿ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡಲು ಮನವಿ ಮಾಡಿರುತ್ತಾರೆ.

ರಾಜ್ಯದಲ್ಲಿ ಡಿ.ಎ.ಪಿ ಮತ್ತು ಯೂರಿಯಾ ರಸಗೊಬ್ಬರದ ಕಡಿಮೆ ಪೂರೈಕೆಯನ್ನು ಮನಗಂಡು,

ಮುಖ್ಯಮಂತ್ರಿಗಳು ಕೇಂದ್ರ ಸರ್ಕಾರದ ರಸಗೊಬ್ಬರ ಖಾತೆ ಸಚಿವರಿಗೆ, ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರ ಪೂರೈಕೆಗೆ ಜುಲೈ 17 ಮತ್ತು 25ರಂದು ಪತ್ರ ಮುಖೇನ ಮನವಿ ಸಲ್ಲಿಸಿರುತ್ತಾರೆ.

ಪ್ರಸ್ತುತ ಕೇಂದ್ರ ಸರ್ಕಾರದಿಂದ ಹಂಚಿಕೆಗನುಗುಣವಾಗಿ ಯೂರಿಯಾ ರಸಗೊಬ್ಬರವನ್ನು ಸರಬರಾಜು ಮಾಡದಿರುವುದರಿಂದ ರಾಜ್ಯದಲ್ಲಿ ಅಲ್ಲಲ್ಲಿ ಯೂರಿಯಾ ರಸಗೊಬ್ಬರದ ಕೊರತೆ ಕಂಡು ಬಂದಿರುತ್ತದೆ. ಈ ಸಂಬಂಧವಾಗಿ ರೈತರು ವಿವಿಧ ಜಿಲ್ಲೆಗಳಲ್ಲಿ ಯೂರಿಯಾ ರಸಗೊಬ್ಬರದ ಪೂರೈಕೆ ಬಗ್ಗೆ ಅಹವಾಲುಗಳನ್ನು ಸಲ್ಲಿಸಿರುತ್ತಾರೆ.

ಯೂರಿಯಾ ಬೇಡಿಕೆ ಪ್ರಮುಖ ಕಾರಣಗಳು:

ರಾಜ್ಯದಲ್ಲಿ ಮುಂಗಾರು ಹಂಗಾಮಿನಲ್ಲಿ ಮುಂಚಿತವಾಗಿ ಉತ್ತಮ ಮಳೆಯಾಗಿದ್ದು, ಸಾಮಾನ್ಯ ಅವಧಿಗಿಂತ ಮುಂಚೆ ಬಿತ್ತನೆ ಪ್ರಾರಂಭವಾಗಿದೆ. ಇಲ್ಲಿಯವರೆಗೆ ಬಿತ್ತನೆ ವಿಸ್ತೀರ್ಣ ಹಿಂದಿನ

ಸಾಲಿಗೆ ಹೋಲಿಸಿದಲ್ಲಿ ಹೆಚ್ಚಾಗಿರುತ್ತದೆ. ಹೆಚ್ಚು ರಸಗೊಬ್ಬರ ಅವಶ್ಯವಿರುವ ಮುಸುಕಿನ ಜೋಳದ ವಿಸ್ತೀರ್ಣವು ಅಂದಾಜು 2.00ಲಕ್ಷ ಹೆಕ್ಟೇರ್ ಗಣನೀಯವಾಗಿ ಹೆಚ್ಚಳವಾಗಿದೆ. ಧಾರವಾಡ ಮತ್ತು ಗದಗ ಜಿಲ್ಲೆಗಳಲ್ಲಿ ಅಂದಾಜು 13,000 ಹೆಕ್ಟೇರ್ ಪ್ರದೇಶದಲ್ಲಿ ಮರುಬಿತ್ತನೆ ಕೈಗೊಳ್ಳಲಾಗಿರುತ್ತದೆ. ತುಂಗಭದ್ರಾ, ಕೃಷ್ಣಾ, ಕಾವೇರಿ ಇತ್ಯಾದಿ ಪ್ರಮುಖ ಜಲಾಶಯಗಳಿಂದ ಅವಧಿಗಿಂತ ಮುಂಚಿತವಾಗಿ ಅಚ್ಚುಕಟ್ಟು ಪ್ರದೇಶಗಳಿಗೆ ನೀರನ್ನು ಬಿಟ್ಟಿರುವುದರಿಂದ ಮುಂಚಿತವಾಗಿ ನಾಟಿ ಕೈಗೊಳ್ಳಲಾಗಿರುವುದು ಯೂರಿಯಾ ಮತ್ತು ರಸಗೊಬ್ಬರ ಬೇಡಿಕೆ ಪ್ರಮುಖ ಕಾರಣವಾಗಿದೆ.

ಇಲಾಖೆಯ ಅಧಿಕಾರಿಗಳು ಪ್ರತಿ ಮಂಗಳವಾರ ಕೇಂದ್ರ ಸರ್ಕಾರದಿಂದ ಜರುಗಿಸುವ ವಿಡಿಯೋ ಸಂವಾದದಲ್ಲಿ ರಾಜ್ಯಕ್ಕೆ ಅಗತ್ಯವಿರುವ ರಸಗೊಬ್ಬರಗಳ ಪೂರೈಕೆ ಮಾಡುವಂತೆ ಮನವಿ ಸಲ್ಲಿಸಿರುತ್ತಾರೆ. ಅಲ್ಲದೇ, ಕೇಂದ್ರ ಸರ್ಕಾರದ ರಸಗೊಬ್ಬರ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು ರಾಜ್ಯದಲ್ಲಿ ಅವಶ್ಯವಿರುವ ರಸಗೊಬ್ಬರ ಪೂರೈಕೆಗೆ ಅವಶ್ಯ ಕ್ರಮ ವಹಿಸುತ್ತಿದ್ದಾರೆ.

ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಪರಿಸರ ಸ್ನೇಹಿಯಾಗಿರುವ ನ್ಯಾನೋ ರಸಗೊಬ್ಬರ ಬಳಕೆಗೆ ಇಲಾಖೆಯಿಂದ ವ್ಯಾಪಕ ಪ್ರಚಾರ ನೀಡಿ ಅರಿವು ಮೂಡಿಸಲಾಗುತ್ತಿದೆ. ಬೆಳೆ, ಮಣ್ಣು,

ಮಾನವ, ಜಾನುವಾರು ಮತ್ತು ಪರಿಸರದ ಆರೋಗ್ಯದ ದೃಷ್ಟಿಯಿಂದ ಯೂರಿಯಾ ಬಳಕೆಯನ್ನು ಕಡಿತಗೊಳಿಸಲು ರೈತರಲ್ಲಿ ಮನವಿ ಮಾಡಲಾಗಿದೆ.

ಆರಂಭಿಕ ಶುಲ್ಕ ಪರಿಗಣಿಸದೆ ಕೊರತೆಯಾಗಿರುವ 81,000 ಮೆ.ಟನ್ ಡಿ.ಎ.ಪಿ. ಮತ್ತು 1,45,000 ಮೆ.ಟನ್. ಯೂರಿಯಾ ರಸಗೊಬ್ಬರವನ್ನು ಕೇಂದ್ರ ಸರ್ಕಾರವು ಪೂರೈಸಿದಲ್ಲಿ ರೈತರ ಬವಣೆ ನೀಗಿಸಬಹುದಾಗಿದೆ.

ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಸಹ ಅಗತ್ಯ ಕ್ರಮ ಜರುಗಿಸಬೇಕಾಗಿದೆ ಎಂದು ಪ್ರಕಟಣೆ ತಿಳಿಸಿದೆ.


# ತೆಂಗು ಬೆಳೆ ಪ್ರದೇಶಾಭಿವೃದ್ದಿ ವಿಸ್ತರಣೆಗೆ ಸಹಾಯಧನ

**ದಾವಣಗೆರೆ:** ಪ್ರಸಕ್ತ ಸಾಲಿನ ತೆಂಗು ಅಭಿವೃದ್ಧಿ ಮಂಡಳಿ ಯೋಜನೆಯಡಿ ಹೊಸದಾಗಿ ತೆಂಗು ಬೆಳೆಯನ್ನು ನಾಟಿ ಮಾಡಲು ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ರೂ. 28000/– ಪ್ರತಿ ಹೆಕ್ಟೇರ್ ಗೆ ವರ್ಷಕ್ಕೆ ಒಟ್ಟಾರೆ ರೂ 56000/– ಗಳ ಸಹಾಯಧನವನ್ನು ನೀಡಲಾಗುವುದು. ತೆಂಗು ಬೆಳೆಯನ್ನು ಹೊಸ ಪ್ರದೇಶ ನಾಟಿ ಮಾಡಿದಲ್ಲಿ ಮಾತ್ರ ಸಹಾಯಧನಕ್ಕೆ ಪರಿಗಣಿಸಲಾಗುವುದು. ಬದುಗಳ ಅಂಚಿನಲಿ ನಾಟಿಗೆ ಪರಿಗಣಿಸಲಾಗುವುದಿಲ್ಲ.

ಆಸಕ್ತ ರೈತರು ಆಧಾರ್ ಕಾರ್ಡ್ ಜೆರಾಕ್ಸ್, ರಾಷ್ಟ್ರೀಕೃತ ಬ್ಯಾಂಕಿನ ಪಾಸ್ ಪುಸ್ತಕದ ಜೆರಾಕ್ಸ್, ಅಧಿಕೃತ ಸಸ್ಯಾಗಾರಗಳಿಂದ ಖರೀದಿಸಿದ ಸಸಿ ಖರೀದಿ ಬಿಲ್ಲು ಹಾಗೂ ಅರ್ಜಿಯೊಂದಿಗೆ ತಮ್ಮ ತಾಲ್ಲೂಕು ತೋಟಗಾರಿಕೆ ಇಲಾಖೆ ಕಚೇರಿಯನ್ನು ಸಂಪರ್ಕಿಸಬಹುದು ಅಥವಾ ತಮ್ಮ ಬಳಿಯ ರೈತ ಸಂಪರ್ಕ ಕೇಂದ್ರದ ಸಹಾಯಕ ತೋಟಗಾರಿಕೆ ಅಧಿಕಾರಿಯವರನ್ನು ಸಂಪರ್ಕಿಸಲು ತೋಟಗಾರಿಕೆ ಉಪನಿರ್ದೇಶಕ ರಾಘವೇಂದ್ರ ಪ್ರಸಾದ್ ತಿಳಿಸಿದ್ದಾರೆ.

# ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ನಲ್ಲಿ ಸೃಜನ್ ಪ್ರಥಮ




**ಹಾಸನ :** ಆರ್ಟಿಫಿಷಿಯಲ್ ಇಂಟೆಲಿಜೆನ್ಸ್ ಇಂಜಿನಿಯರಿಂಗ್ ವಿಭಾಗದಲ್ಲಿ ಹಾಸನದ ನವಕೀಸ್ ಇಂಜಿನಿಯರಿಂಗ್ ಕಾಲೇಜನ ವಿದ್ಯಾರ್ಥಿ ಸೃಜನ್ ಹೆಚ್.ಯು. ಪ್ರಥಮ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿತಂದಿದ್ದಾರೆ.ನಗರದ ಕಲಾಭವನದಲ್ಲಿ ನಡೆದ ಪದವಿ ಪ್ರಧಾನ ಸಮಾರಂಭದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯದ ಮಾಜಿ ಉಪ ಕುಲಪತಿಗಳಾದ ಕರಿಸಿದ್ದಪ್ಪ ಅವರು ವಿದ್ಯಾರ್ಥಿ ಸೃಜನ್ ಹೆಚ್.ಯು. ಗೆ ಪದವಿ ಪ್ರದಾನದ ಜೊತೆಗೆ ಬಹುಮಾನ ವಿತರಿಸಿ ಅಭಿನಂದಿಸಿದರು.ಇವರು ಜಾವಗಲ್ ಸರಕಾರಿ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಉಮೇಶ್ ಹೊಸಹಳ್ಳಿ ಮತ್ತು ಯಶೋಧ ಅವರ ಪುತ್ರರಾಗಿದ್ದಾರೆ.

# ಜೇನುನೊಣಗಳಿಗೆ ಹಾನಿಯಾಗುವ ಚಟುವಟಿಕೆ ಸಲ್ಲದು: ಡಾ.ಎ.ಟಿ.ಕೃಷ್ಣಮೂರ್ತಿ

**ಚಿಕ್ಕಮಗಳೂರು:** ರೈತರು ಬೆಳೆ ಬೆಳೆಯುವ ಸಂದರ್ಭದಲ್ಲಿ ಪರಿಸರ ಮತ್ತು ಗುಣಮಟ್ಟದ ಉತ್ಪಾದನೆಯನ್ನು ಗಮನದಲ್ಲಿಟ್ಟುಕೊಂಡು ಜೇನುನೊಣಗಳಿಗೆ ಹಾನಿಯಾಗುವಂತಹ ಚಟುವಟಿಕೆಗಳಾದ ಕ್ರಿಮಿನಾಶಕ ಹಾಗೂ ಕಳೆನಾಶಕ ಬಳಕೆ ಮಾಡಬಾರದು ಎಂದು ಮೂಡಿಗೆರೆ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ಎ.ಟಿ. ಕೃಷ್ಣಮೂರ್ತಿ ಸಲಹೆ ನೀಡಿದರು.

ಸ್ವಯಂ ಉದ್ಯೋಗ ಸೃಷ್ಟಿಸುವ ಸಲುವಾಗಿ ಮೂಡಿಗೆರೆಯ ಕೃಷಿ ವಿಜ್ಞಾನ ಕೇಂದ್ರದ ಐ.ಸಿ.ಎ.ಆರ್.ನಲ್ಲಿ ವೈಜ್ಞಾನಿಕ ಜೇನು ಸಾಕಾಣಿಕೆ ಕುರಿತು ನಿರುದ್ಯೋಗಿ ಯುವಕ–ಯುವತಿಯರಿಗೆ ಹಾಗೂ ರೈತರಿಗೆ ಇತ್ತೀಚೆಗೆ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜೇನುನೊಣಗಳನ್ನು ರಕ್ಷಿಸುವಂತಹ ಕ್ರಮಗಳನ್ನು ಅವಲಂಬಿಸಬೇಕು. ಯುವಕರು ಜೇನು ಸಾಕಣೆಯನ್ನು ಅನುಸರಿಸಿದಲ್ಲಿ ಉತ್ತಮ ಆದಾಯ ಗಳಿಸಬಹುದು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಸಹ ವಿಸ್ತರಣಾ ನಿರ್ದೇಶಕ ಡಾ.ಎಂ.ಶಿವಪ್ರಸಾದ ಮಾತನಾಡಿ,

ಜೇನು ಕೃಷಿಯನ್ನು ಉಪಕಸುಬಾಗಿ ಹಾಗೂ ಮುಂದುವರೆದು ಮುಖ್ಯ ಕಸುಬಾಗಿ ಮಾಡಿಕೊಂಡು ಆದಾಯ ಪಡೆಯಬಹುದು. ಅಲ್ಲದೆ ಬೆಳೆ ಉತ್ಪಾದನೆಯು ಜೇನುಹುಳುಗಳ ಪರಾಗಸ್ಪರ್ಶದ ಮೇಲೆ ಅವಲಂಬಿತವಾಗಿರುವುದರಿಂದ ಬೆಳೆಗಳ ಉತ್ಪಾದನೆಯನ್ನು ಸಹ ಹೆಚ್ಚಾಗಿ ಪಡೆಯಬಹುದು ಎಂದು ತಿಳಿಸಿದರು.

ಜಿಲ್ಲಾ ಕೃಷಿಕ ಸಮಾಜದ ನಿರ್ದೇಶಕ ಪಿ.ಕೆ.ನಾಗೇಶ್ ಮಾತನಾಡಿ, ಕಾಫಿ ಬೆಳೆಯಲ್ಲಿ ಇತ್ತೀಚೆಗೆ ಇಳುವರಿ ಕಡಿಮೆಯಾಗುತ್ತಿದ್ದು, ಇದಕ್ಕೆ ಜೇನು ನೊಣಗಳ ಸಂಖ್ಯೆ ಕಡಿಮೆಯಾಗಿರುವುದೇ ಕಾರಣ. ಈ ನಿಟ್ಟಿನಲ್ಲಿ ಜೇನುಪೆಟ್ಟಿಗೆಗಳನ್ನು ಇಟ್ಟು ಜೇನು ಸಾಕುವುದರ ಜೊತೆಗೆ ಕಾಫಿ ಮತ್ತು ಇನ್ನಿತರೆ ಬೆಳೆಗಳಲ್ಲಿ ಇಳುವರಿ ಹೆಚ್ಚಿಸಬೇಕಿದೆ.




**ಮೂಡಿಗೆರೆಯ ಕೃಷಿ ವಿಜ್ಞಾನ ಕೇಂದ್ರದ ಐ.ಸಿ.ಎ.ಆರ್.ನಲ್ಲಿ ವೈಜ್ಞಾನಿಕ ಜೇನು ಸಾಕಾಣಿಕೆ ಕುರಿತು ಇತ್ತೀಚೆಗೆ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮವನ್ನು ಮೂಡಿಗೆರೆ ಕೃಷಿ ವಿಜ್ಞಾನ ಕೇಂದ್ರದ ವಿಸ್ತರಣಾ ನಿರ್ದೇಶಕ ಡಾ.ಎಂ.ಶಿವಪ್ರಸಾದ್ ಉದ್ಘಾಟಿಸಿದರು.**

ಈ ಹಿನ್ನೆಲೆಯಲ್ಲಿ ತರಬೇತಿ ಕಾರ್ಯಕ್ರಮದ ಸದುಪಯೋಗ ಪಡೆಯಲು ಸಲಹೆ ನೀಡಿದರು.

ರೈತ ಉತ್ಪಾದಕರ ಸಂಘದ ಅಧ್ಯಕ್ಷ ಹೆಚ್.ಕೆ.ಪೂರ್ಣೇಶ್ ಮಾತನಾಡಿ,

ಇತ್ತೀಚಿನ ದಿನಗಳಲ್ಲಿ ಎಲ್ಲಾ ಬೆಳೆಗಳಲ್ಲಿ ಪರಾಗಸ್ಪರ್ಶದ ಕ್ರಿಯೆ ಕಡಿಮೆಯಾಗಿರುವುದರಿಂದ ಇಳುವರಿಯಲ್ಲಿ ಗಣನೀಯವಾಗಿ ಕಡಿಮೆಯಾಗಿದೆ ಎಂದು ಅಭಿಪ್ರಾಯಪಟ್ಟರು. ಮೂಡಿಗೆರೆಯ ತೋಟಗಾರಿಕೆ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಸಯ್ಯದ್ ಇಮ್ರಾನ್ ಮಾತನಾಡಿ, ಜೇನು ಸಾಕಾಣಿಕೆ ಸಮಯದಲ್ಲಿ ಕಂಡು ಬರುವ ಕೀಟ ಮತ್ತು ರೋಗ ಬಾಧೆಗಳು ಹಾಗೂ ಅದರ ನಿರ್ವಹಣೆ ಕುರಿತು ವಿಸ್ತೃತ ಮಾಹಿತಿ ನೀಡಿದರು

.ಕೇಂದ್ರದ ವಿಜ್ಞಾನಿ ಡಾ.ಜಿ.ಎಂ.ಪ್ರಶಾಂತ್ ಹಾಗೂ ಸಿಬ್ಬಂದಿ ಹಾಜರಿದ್ದರು. ಚಿಕ್ಕಮಗಳೂರು, ಹಾಸನ ಮತ್ತು ತುಮಕೂರು ಜಿಲ್ಲೆಗಳ ಸುಮಾರು 45 ಶಿಬಿರಾರ್ಥಿಗಳು ಭಾಗವಹಿಸಿದ್ದರು. ಸ್ವಾಗತಿಸಿದ ಡಾ.ಎಂ.ಹೆಚ್.ಸುಚಿತ್ರಕುಮಾರಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಕೃಷಿ ವಿಜ್ಞಾನ ಕೇಂದ್ರದ ಗೃಹವಿಜ್ಞಾನಿ ಡಾ.ಸ್ನೇಹಾ ಶೀಗಿಹಳ್ಳಿ ವಂದಿಸಿದರು.

### ತಾಂತ್ರಿಕ ಸಮಾವೇಶ:

**ಕೃಷಿ ವಿಜ್ಞಾನ ಕೇಂದ್ರದ ಐ.ಸಿ.ಎ.ಆರ್.ನ ಸಸ್ಯ ಸಂರಕ್ಷಣೆ ವಿಜ್ಞಾನಿ ಡಾ.ಎಂ. ಹೆಚ್.ಸುಚಿತ್ರ ಕುಮಾರಿ, ಮಾತನಾಡಿ ಜೇನು ನೊಣಗಳ ಸಾಕಣೆಯ ಅವಶ್ಯಕತೆ, ಜೇನುನೊಣಗಳ ಲಕ್ಷಣಗಳು ಅದರ ಅಭ್ಯಾಸಗಳು, ನಡವಳಿಕೆ, ಸಾಕಣೆಗೆ ಬೇಕಾದ ಪರಿಕರಗಳು, ಗೂಡಿನ ರಚನೆ, ಮಳೆಗಾಲ, ಬೇಸಿಗೆ ಹಾಗೂ ಚಳಿಗಾಲದಲ್ಲಿ ನಿರ್ವಹಣಾ ಕ್ರಮಗಳ ಕುರಿತು ವಿಸ್ತಾರವಾದ ಮಾಹಿತಿ ನೀಡಿದರು.**

**ಆಲ್ದೂರಿನ ಜೇನು ಉದ್ದಿಮೆದಾರ ರಂಜಿತ್ ಜೇನು ಸಾಕಣೆಯಲ್ಲಿ ಜೇನು ಕುಟುಂಬದ ಒಗ್ಗೂಡಿಸುವಿಕೆ ಹಾಗೂ ಪಾಲು ಮಾಡುವುದರ ಕುರಿತಾಗಿ ಮಾಹಿತಿ ನೀಡಿದರು. ಅಲ್ಲದೆ, ಕೃಷಿ ವಿಜ್ಞಾನ ಕೇಂದ್ರಕ್ಕೆ ಭೇಟಿ ನೀಡಿ ಜೇನು ಕುಟುಂಬಗಳ ನಿರ್ವಹಣೆಯ ಕುರಿತು ಪ್ರಾಯೋಗಿಕವಾಗಿ ತೋರಿಸಿದರು.**

**ಜೇನು ಉದ್ದಿಮೆದಾರ ಮೂಡಿಗೆರೆ ಆಲೇಖಾನ್‌ನ ಸುರೇಶ್ ಮಾತನಾಡಿ, ಕಾಡಿನಿಂದ ಜೇನು ಕುಟುಂಬಗಳನ್ನು ಪೆಟ್ಟಿಗೆ, ಮಡಿಕೆಗಳಿಗೆ ಆಕರ್ಷಿಸುವುದು, ವರ್ಗಾಯಿಸುವುದು ಹಾಗೂ ಸಾಕಾಣಿಕೆ ಮಾಡುವ ಕುರಿತು ಅಗತ್ಯ ಮಾಹಿತಿ ನೀಡಿದರು.**

# ದೀರ್ಘಕಾಲ Earphone ಹಾಕಿಕೊಳ್ಳುತ್ತೀರಾ? ಕಿವಿಗೆ Fungal infections ಬರಬಹುದು ಎಚ್ಚರ!

ಮನೆಯಿಂದಾಚೆ ಕಾಲಿಡುತ್ತಿದ್ದಂತೆ ಇಯರ್‌ಫೋನ್ ಕಿವಿಯೇರುತ್ತದೆ. ಬಸ್, ರೈಲು, ಮೆಟ್ರೊ ಪ್ರಯಾಣಿಕರನ್ನು ಗಮನಿಸಿದರೆ ಹತ್ತರಲ್ಲಿ ಎಂಟು ಮಂದಿ ಕಿವಿಗೆ ಇಯರ್‌ಫೋನ್ ಹಾಕಿ ಹಾಡು ಕೇಳುತ್ತಿರುತ್ತಾರೆ. ಕೆಲವರು ಸಿನಿಮಾ ವೀಕ್ಷಣೆ, ವಿಡಿಯೊ ಗೇಮ್‌ನಲ್ಲಿ ಮುಳುಗಿರುತ್ತಾರೆ. ಹದಿ ಹರೆಯದವರಲ್ಲಿ ಇಯರ್‌ಫೋನ್ ಗೀಳು ಹೆಚ್ಚಾಗಿ ಕಂಡುಬರುತ್ತಿದೆ.

ಇಯರ್‌ಫೋನ್ ಹಾಕಿಕೊಂಡು ಮ್ಯೂಸಿಕ್ ಕೇಳಲು, ವಿಡಿಯೋ ನೋಡಲು, ಫೋನ್‌ನಲ್ಲಿ ಮಾತಾಡಲು ಖುಷಿ ಆಗುತ್ತದೆ. ಆದರೆ, ಅದರಿಂದಾಗುವ ಅಡ್ಡಪರಿಣಾಮಗಳ ಬಗ್ಗೆ ಯಾರೂ ಗಮನ ಹರಿಸುವುದಿಲ್ಲ.


ನಿಮಗೆ ಅರಿವಿರುವಂತೆ, ಇಯರ್‌ಫೋನ್ ಅಥವಾ ಇಯರ್ ಬಡ್ ಏನೇ ಇದ್ದರೂ ಕಿವಿಯ ಹತ್ತಿರದಲ್ಲೇ

ಇದ್ದು ಶಬ್ದವು ಕಿವಿಯ ಒಳಗೆ ಕೇಳಿಸುವಂತೆ ಮಾಡುತ್ತದೆ. ಅತ್ಯಂತ ಹತ್ತಿರದಿಂದ ಶಬ್ದ ಕಿವಿಗೆ ಕೇಳುವುದರಿಂದ ಕಿವಿಗೆ ಗಂಭೀರ ಸಮಸ್ಯೆಗಳಾಗಬಹುದು. ಇದು ಶಾಶ್ವತ ಹಾನಿಗೂ ಕಾರಣವಾಗಬಹುದು.

ದೀರ್ಘಕಾಲಿಕ ಇಯರ್‌ಫೋನ್ ಬಳಕೆಯಿಂದ ಚರ್ಮದ ಅಲರ್ಜಿ, ಫಂಗಲ್ ಇನ್ಫೆಕ್ಷನ್ (ಶಿಲೀಂಧ್ರ ಸೋಂಕು) ಎದುರಾಗಬಹುದು.

ಇತ್ತೀಚೆಗೆ ಇಎನ್‌ಟಿ ಚಿಕಿತ್ಸಾಲಯಗಳಲ್ಲಿ ಬರುತ್ತಿರುವ ಸಾಕಷ್ಟು ಜನರು ಈ ಸಮಸ್ಯೆಗಳಿಂದ ಬಳಲುತ್ತಿರುವುದು ಕಂಡು ಬರುತ್ತಿದೆ.

ಇಯರ್‌ಫೋನ್‌ಗಳಿಂದ



ಉಂಟಾಗುವ ಕಾಂಟ್ಯಾಕ್ಟ್ ಡರ್ಮಟೈಟಿಸ್ (ಇಯರ್‌ಫೋನ್‌ಗಳ ರಬ್ಬರ್, ಪ್ಲಾಸ್ಟಿಕ್ ಮತ್ತು ಲೋಹದ ಭಾಗಗಳಿಗೆ ಅಲರ್ಜಿಯ ಪ್ರತಿಕ್ರಿಯೆ) ಪ್ರಕರಣಗಳೂ ಕೂಡ ಹೆಚ್ಚಾಗುತ್ತಿದೆ.

ಇದು ಕಿವಿಯೊಳಗೆ ಮತ್ತು ಸುತ್ತಲೂ ತುರಿಕೆ, ಕೆಂಪು ಅಥವಾ ಸಿಪ್ಪೆ ಸುಲಿಯುವಿಕೆಗೆ ಕಾರಣವಾಗುತ್ತದೆ, ಜೊತೆಗೆ ಕಿವಿಯೊಳಗೆ ಸಿಲುಕಿಕೊಳ್ಳುವ ಬೆವರು ಮತ್ತು ತೇವಾಂಶದಿಂದ ಸೋಂಕುಗಳು ಕಂಡು ಬರುತ್ತಿರುವುದು ವರದಿಯಾಗಿವೆ.

### ರೋಟರಿ ಕ್ಲಬ್ ಚಿನ್ಮುಲಾದ್ರಿಯ ಸಂಸ್ಥಾಪನ ದಿನಾಚರಣೆ

# ಚರಕಾ ಸ್ಪರ್ಶಿಸಿ ಪುಳಕಿತರಾದ ರೋಟರಿ ಕ್ಲಬ್ ಚಿನ್ಮುಲಾದ್ರಿಯ ಪದಾಧಿಕಾರಿಗಳು.

**ಚಿತ್ರದುರ್ಗ:** ಚರಕ ಸ್ಪರ್ಶಿಸಿ, ಅದರ ಚೈತನ್ಯ, ಸದ್ಗುಣಗಳು, ದುಡಿಮೆಗೆ ಅವಕಾಶ ಕಲ್ಪಿಸಿ ಕೊಡುವಂತಹ ಪುರಾತನ ಸಾಧನ, ಗಾಂಧೀಜಿಯವರ ಕೈಯಲ್ಲಿ, ಸ್ವಾತಂತ್ರ ಸಂಗ್ರಾಮದಲ್ಲಿ ಶಸ್ತ್ರಾಸ್ತ್ರದಂತೆ ಕೆಲಸ ಮಾಡಿ, ಬ್ರಿಟಿಷರನ್ನು ಹೊರ ಕಳುಹಿಸಿದ, ಅದ್ಭುತವಾದ ಸಾಧನವನ್ನ, ಯುವ ಜನಾಂಗ, ಕ್ಲಬ್ ನ ಸದಸ್ಯರುಗಳು, ಪದಾಧಿಕಾರಿಗಳು, ಸ್ಪರ್ಶಿಸಿ, ಪುಳಕಿತರಾಗುತ್ತಿರುವುದು ನಿಜಕ್ಕೂ ಆಶ್ಚರ್ಯಕರವಾಗಿದೆ ಎಂದು ಕರ್ನಾಟಕ ಜ್ಞಾನ–ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದ್ದಾರೆ.

ಅವರು ಚಿತ್ರದುರ್ಗ ನಗರದ ಮಧ್ಯಭಾಗದಲ್ಲಿರುವ ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಆವರಣದಲ್ಲಿ ರೋಟರಿ ಕ್ಲಬ್ ಚಿನ್ಮುಲಾದ್ರಿಯ ಹೊಸ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ಸ್ಥಾಪನ ದಿನಾಚರಣೆ ಕಾರ್ಯಕ್ರಮದಲ್ಲಿ, ನೂತನವಾಗಿ ಅಧ್ಯಕ್ಷರಾಗಿ ಆಯ್ಕೆಯಾಗಿರುವ ನ್ಯಾಯವಾದಿಗಳಾದ

ದಿಲ್ ಶಾದ್ ಉನ್ನಿಸಾ ಅವರಿಗೆ ನೆನಪಿನ ಕಾಣಿಕೆಯಾಗಿ ನೀಡುತ್ತಾ ಮಾತನಾಡುತ್ತಿದ್ದರು.

ರೋಟರಿ ಕ್ಲಬ್ ಚಿನ್ಮುಲಾದ್ರಿಯ ಸಮಾಜ ಸೇವೆಯಲ್ಲಿ ಮುಂಚಣಿಯಲ್ಲಿ ಮುನ್ನಡೆಯಲು, ಚರಕದ ಸಹಾಯವನ್ನು ಪಡೆದು, ಮಹಾತ್ಮ ಗಾಂಧೀಜಿಯವರ ಚಿಂತನೆಗಳನ್ನ, ರಚನಾತ್ಮಕ ಕಾರ್ಯಕ್ರಮಗಳನ್ನ ಅನುಷ್ಠಾನಗೊಳಿಸಲು, ಗ್ರಾಮೀಣ ಜನರಿಗೆ ತಮ್ಮ ಉದ್ಯೋಗಗಳನ್ನ, ಸ್ವ ಉದ್ಯೋಗಗಳನ್ನ ಉಳಿಸಿಕೊಳ್ಳಲು, ಪ್ರಚೋದಿಸಲು, ಚರಕವನ್ನು ಬಳಸಿಕೊಳ್ಳುವ ಭಾವನೆಯಿಂದ ಕಾರ್ಯಕ್ರಮದಲ್ಲೆ ಅದನ್ನ ಪಡೆದು, ಚರಕ ತಯಾರಿಕೆ ಮತ್ತು ವಿತರಣೆಯಲ್ಲಿ ಪ್ರೋತ್ಸಾಹಿಸಲು ಕ್ಲಬ್ ನ ಸದಸ್ಯರುಗಳು,




ಅಧ್ಯಕ್ಷರುಗಳು ಮುಂದಾಗಿರುವುದು ಉತ್ತಮ ಲಕ್ಷಣ ಎಂದರು.

ಮನೆಮನೆಗೂ ಚರಕ, ಶಾಲೆ ಶಾಲೆಗಳಿಗೂ ಒಂದೊಂದು ಚರಕ, ವಿತರಿಸುವ ನಿಟ್ಟಿನಲ್ಲಿ ರೋಟರಿ ಕ್ಲಬ್ ಚಿನ್ಮುಲಾದ್ರಿಯ ಅಧ್ಯಕ್ಷರುಗಳು ಅದಕ್ಕೆ ಬೇಕಾದಂತ ಉಪಕರಣಗಳನ್ನು ಕೊಂಡುಕೊಳ್ಳಲು,

ಹಣದ ಸಹಾಯವನ್ನು ನೀಡಿ, ಬಡಗಿ ಕೆಲಸ ಮಾಡುವಂತಹ ಕಾರ್ಮಿಕರಿಗೆ ಪ್ರೋತ್ಸಾಹ ನೀಡಿ, ಕಡಿಮೆ ವೆಚ್ಚದಲ್ಲಿ ಚರಕಗಳನ್ನ ತಯಾರಿಸಿ, ಪ್ರತಿಯೊಂದು ಮನೆಗೂ ಪ್ರತಿಯೊಂದು ಶಾಲೆಗೂ, ಪ್ರತಿಯೊಂದು ಮಗುವಿನ ಕೈಯಲ್ಲೂ ಸಹ ಚರಕವನ್ನು ವಿತರಣೆ ಮಾಡಿ, ಗಾಂಧೀಜಿಯವರ ಚಿಂತನೆಗಳನ್ನ ಅನುಷ್ಠಾನಗೊಳಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ಚರಕ ತಯಾರಿಕೆ ಸುಲಭವಾದ ಕ್ರಿಯೆಯಾಗಿದ್ದು, ಪ್ರತಿಯೊಬ್ಬರೂ ಸಹ ಸ್ವಲ್ಪಮಟ್ಟಿಗೆ ತಾಂತ್ರಿಕ ಜ್ಞಾನವಿರುವವರು, ಚರಕವನ್ನ ಸ್ವತಃ ತಯಾರು ಮಾಡಿಕೊಂಡು, ಅದರಿಂದ ದಾರವನ್ನು ಉತ್ಪಾದನೆ ಮಾಡುವುದನ್ನು ಕಲಿಯಬಹುದು. ಅದರ ಬಗ್ಗೆ ತರಗತಿಗಳನ್ನ ನಡೆಸಿ, ತರಬೇತಿಯನ್ನ ನೀಡುವ ಶಿಕ್ಷಕರ ಅವಶ್ಯಕತೆ ಇದೆ ಎಂದರು.

ಚಿನ್ಮುಲಾದ್ರಿಯ ಕ್ಲಬ್ ನ ನೂತನ ಅಧ್ಯಕ್ಷರಾದ ನ್ಯಾಯವಾದಿಗಳಾದ ದಿಲ್ ಶಾದ್ ಉನ್ನಿಸಾರ್ ಅವರು ಮಾತನಾಡುತ್ತಾ, ಸಂಸ್ಥಾಪನ ಕಾರ್ಯಕ್ರಮದಲ್ಲಿ ನನಗೊಂದು ಚರಕ ಉಡುಗೊರೆಯಾಗಿ ನೀಡಿದರೆ,

ಮಹಾತ್ಮ ಗಾಂಧೀಜಿಯವರ ಆಶೀರ್ವಾದ, ದೈವಿಕ ಶಕ್ತಿ ಮತ್ತು ಅನುಗ್ರಹ ಶಾಶ್ವತವಾಗಿ ಲಭಿಸುವುದು. ನಿಜಕ್ಕೂ ಚರಕವನ್ನ ಪಡೆಯುವುದು ಒಂದು ಅವಿಸ್ಮರಣೀಯ ಘಟನೆಯಾಗಿದೆ, ಅವರ ಚಿಂತನೆಗಳನ್ನ ನಮ್ಮ ಕ್ಲಬ್ ನ ಕಾರ್ಯಕ್ರಮಗಳಲ್ಲಿ ಅನುಷ್ಠಾನಗೊಳಿಸಲು ಅನುಕೂಲಕರವಾಗುವುದು, ಆದ್ದರಿಂದ ಪ್ರತಿಯೊಬ್ಬರೂ ಸಹ ಚರಕವನ್ನು ಸ್ಪರ್ಶಿಸಿ, ಅದರಲ್ಲಿರುವ ಮಹಾನ್ ಶಕ್ತಿಯನ್ನು ಅರಿತುಕೊಳ್ಳಬೇಕು. ಇದೇ ಚರಕವನ್ನು ಬಳಸಿ ನಾವು ಮುಂದೆ ಸದಸ್ಯರುಗಳಿಗೆ ಮತ್ತು ಸಾರ್ವಜನಿಕರಿಗೂ ಸಹ ಇದರ ಬಗ್ಗೆ ಜಾಗೃತಿ ಮೂಡಿಸಲು ಪ್ರಯತ್ನಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

## ಸುಗಮ ಸಂಗೀತ ಕಲಾ ತರಬೇತಿ ಕಾರ್ಯಕ್ರಮ

ಗದಗ : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಹಾಗೂ ಸಮಾಜ ಕಲ್ಯಾಣ ಇಲಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ 2025–26 ನೇ ಸಾಲಿನ ವಿಶೇಷ ಘಟಕ ಯೋಜನೆಯಡಿ ಸುಗಮ ಸಂಗೀತ ಕಲಾ ತರಬೇತಿ ಕಾರ್ಯಕ್ರಮ ಉದ್ಘಾಟನಾ ಸಮಾರಂಭವು ಜುಲೈ 30 ರಂದು ಸಾಯಂಕಾಲ 5:30 ಗಂಟೆಗೆ ನಗರದ ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ರಾಜೀವ್ ಗಾಂಧಿ ನಗರ ಇಲ್ಲಿ ಜರುಗುವುದು.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ನಂದಾ ಹಣಬರಟ್ಟಿ ಕಾರ್ಯಕ್ರಮ ಉದ್ಘಾಟಿಸುವರು.

ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ವಸಂತ ಮಡ್ಲೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು.

ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀಮತಿ ಮಂಜುಳಾ ಎನ್, ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಪಾಲಕರಾದ ಶ್ರೀಮತಿ ವಿದ್ಯಾ ಬೆಳವಣಕಿ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಪಾಪನಾಶಿ ತಾಂಡಾದ ಸುಗಮ ಸಂಗೀತ ಕಲಾವಿದರಾದ ಶ್ರೀಮತಿ ಸಾವಿತ್ರಿ ಎಂ.ಲಮಾಣಿ ತರಬೇತಿ ಗುರುಗಳಾಗಿ ಆಗಮಿಸುವರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಬಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಜನಪದ ಸಂಗೀತ ಕಲಾ ತರಬೇತಿ ಕಾರ್ಯಕ್ರಮ

ಗದಗ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ,ಗದಗ ಹಾಗೂ ಸಮಾಜ ಕಲ್ಯಾಣ ಇಲಾಖೆ, ಗದಗ ಇವರ ಸಂಯುಕ್ತ ಆಶ್ರಯದಲ್ಲಿ 2025–26 ನೇ ಸಾಲಿನ ಗಿರಿಜನ ಉಪಯೋಜನೆಯಡಿ 2025–26 ನೇ ಸಾಲಿನ ಗಿರಿಜನ ಉಪಯೋಜನೆಯಡಿ ಜನಪದ ಸಂಗೀತ ಕಲಾ ತರಬೇತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭವನ್ನು ಜುಲೈ 30 ರಂದು ಸಂಜೆ 5 ಗಂಟೆಗೆ ನಗರದ ಸರಕಾರಿ ಮೆಟ್ರಿಕ್ ನಂತರದ ( ಪ.ಪಂ. ) ಬಾಲಕರ ವಸತಿ ನಿಲಯ ಗಂಗಿಮಡಿ ಇಲ್ಲಿ ಹಮ್ಮಿಕೊಳ್ಳಲಾಗಿದೆ.

ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಶ್ರೀಮತಿ ನಂದಾ ಹಣಬರಟ್ಟಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ವಸಂತ ಮಡ್ಲೂರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಶ್ರೀಮತಿ ಮಂಜುಳಾ ಎನ್, ಗದಗ ಬಾಲಕರ ವಸತಿ ನಿಲಯ , ಸರಕಾರಿ ಮೆಟ್ರಿಕ್ ನಂತರದ ( ಪ.ಪಂ.) ನಿಲಯ ಪಾಲಕರಾದ ರಿಯಾಜ್ ಅಗರಖೇಡ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಎಚ್.ಎಸ್.ವೆಂಕಟಾಪೂರ ಜನಪದ ಕಲಾವಿದರಾದ ಗೌಡಪ್ಪ ಬೊಮ್ಮಪ್ಪನವರ ತರಬೇತಿ ಗುರುಗಳಾಗಿ ಆಗಮಿಸಲಿದ್ದಾರೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ವೀರಯ್ಯಸ್ವಾಮಿ ಬಿ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ತೀರ್ಥಹಳ್ಳಿಯಲ್ಲಿ ಸಾರ್ವಜನಿಕ ಕುಂದು ಕೊರತೆ ಅರ್ಜಿ ಸ್ವೀಕಾರ

ಶಿವಮೊಗ್ಗ : ಕರ್ನಾಟಕ ಲೋಕಾಯುಕ್ತದ ಪೊಲೀಸ್ ಉಪಾಧೀಕ್ಷಕರು ಜುಲೈ 31 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 12.30 ರವರೆಗೆ ತೀರ್ಥಹಳ್ಳಿಯ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಸಾರ್ವಜನಿಕರಿಂದ ಕುಂದು ಕೊರತೆ ಅರ್ಜಿಗಳನ್ನು ಸ್ವೀಕರಿಸುವರು.

ಸಾರ್ವಜನಿಕರು ಈ ಸಭೆಗೆ ಹಾಜರಾಗಿ ಸರ್ಕಾರಿ ಯೋಜನೆಗಳನ್ನು ಫಲಾನುಭವಿಗಳಿಗೆ ದೊರಕಿಸುವಲ್ಲಿ ಸರ್ಕಾರಿ ಅಧಿಕಾರಿಗಳ ಬೇಜವಾಬ್ದಾರಿತನ, ಸರ್ಕಾರಿ ಕರ್ತವ್ಯ ನಿರ್ವಹಿಸಲು ನಿರ್ಲಕ್ಷ ?ಯ, ಅನಗತ್ಯ ವಿಳಂಬ ಮತ್ತು ಅಧಿಕೃತ ಕೆಲಸ ನಿರ್ವಹಿಸಲು ಲಂಚಕ್ಕೆ ಬೇಡಿಕೆ ಇಟ್ಟಂತಹ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ವಿರುದ್ಧ ಲಿಖಿತವಾಗಿ ಅಹವಾಲು ಸಲ್ಲಿಸಬಹುದೆಂದು ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಕಾನೂನು ಅರಿವು ಕಾರ್ಯಾಗಾರ

ಶಿವಮೊಗ್ಗ ; ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮುಕ್ತಿ ಸಂಸ್ಥೆ ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜು.30 ರಂದು ಬೆಳಿಗ್ಗೆ 9.30 ಕ್ಕೆ ನಗರದ ಡಿಎಆರ್ ಸಭಾ ಭವನದಲ್ಲಿ ಮಾನವ ಕಳ್ಳ ಸಾಗಾಣಿಕೆ ತಡೆ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಜಾಗೃತಿ ಮತ್ತು ಕಾನೂನು ಅರಿವು ಕಾರ್ಯಾಗಾರವನ್ನು ಏರ್ಪಡಿಸಲಾಗಿದೆ.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಮಂಜುನಾಥ್ ನಾಯಕ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಜಿಲ್ಲಾಧಿಕಾರಿಗಳಾದ ಗುರುದತ್ತ ಹೆಗಡೆ ಅಧ್ಯಕ್ಷತೆ ವಹಿಸುವರು. ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಂತೋಷ್ ಎಂ ಎಸ್ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಜಿ ಪಂ ಸಿಇಓ ಹೇಮಂತ್ ಎನ್, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಜಿ.ಕೆ ಮಿಥುನ್ ಕುಮಾರ್, ಡಿಹೆಚ್ಓ ಡಾ.ನಟರಾಜ್ ಕೆ ಎಸ್, ಡಿಡಿಪಿಐ ಮಂಜುನಾಥ್ ಎಸ್ ಆರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಮಂಜುನಾಥ್ ಆರ್, ಪಾಲ್ಗೊಳ್ಳುವರು. ಮುಕ್ತಿ ಸಂಸ್ಥೆಯ ಸುಧಾ ಜಿ ಉಪನ್ಯಾಸ ನೀಡುವರು.

## ಕೃಷಿ ಪರಿಕರಗಳ ವಿಸ್ತರಣಾ ಸೇವೆ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ : ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಒಂದು ವರ್ಷದ ಕೃಷಿ ಪರಿಕರಗಳ ವಿಸ್ತರಣಾ ಸೇವೆ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಆ.14 ರಂದು ಕೊನೆಯ ದಿನಾಂಕವಾಗಿದೆ. 20 ವರ್ಷ ಮೇಲ್ಪಟ್ಟ ಎಸ್ಎಸ್ಎಲ್‌ಸಿ ಪಾಸ್ ಆದರಿಗೆ ಅವಕಾಶ ನೀಡಲಾಗಿದ್ದು, ವಿಶ್ವವಿದ್ಯಾಲಯದ ವೆಬ್‌ಸೈಟ್ www.uahs.edu.in ಮೂಲಕ ಅರ್ಜಿ ಪಡೆದು ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಶಿವಮೊಗ್ಗ ಕಚೇರಿಯಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ರೂ.200 ಹಾಗೂ ಎಸ್‌ಸಿ, ಎಸ್‌ಟಿ, ಪ್ರವರ್ಗ–1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ರೂ.100 ಅರ್ಜಿ ಶುಲ್ಕ ಇರುತ್ತದೆ.

ಕೋರ್ಸ್ ಎರಡು ಸೆಮಿಸ್ಟರ್‌ಗಳಲ್ಲಿ ನಡೆಯಲಿದ್ದು, 20 ಸಾವಿರ ರೂ. ವಿದ್ಯಾರ್ಥಿ ಶುಲ್ಕವಿರುತ್ತದೆ. ಅರ್ಜಿ ಸಲ್ಲಿಸುವರು ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ Comptroller, KSNUAHS, Iruvakki, Shivamogga–577412 payable at Shivamogga ಇವರ ಹೆಸರಿನಲ್ಲಿ ಡಿಡಿ ತೆಗೆದು ಅರ್ಜಿಯನ್ನು ಸಲ್ಲಿಸಬೇಕೆಂದು ವಿಶ್ವವಿದ್ಯಾಲಯದ ಸಂಯೋಜಕರು ತಿಳಿಸಿದ್ದಾರೆ.

## ನಾಗರ ಪಂಚಮಿ ಸಂಭ್ರಮಾಚರಣೆ

ಸೊರಬ: ಪಟ್ಟಣ ಸೇರಿ ತಾಲೂಕಿನಾದ್ಯಂತ ಶ್ರಾವಣ ಮಾಸದ ಮೊದಲ ಹಬ್ಬವಾದ ನಾಗರ ಪಂಚಮಿಯನ್ನು ಮಂಗಳವಾರ ಸಂಭ್ರಮ ಸಡಗರದಿಂದ ಆಚರಿಸಲಾಯಿತು. ಹಲವರು ಮನೆಯಲ್ಲಿಯೇ ನಾಗರ ಮೂರ್ತಿ ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿದರೆ, ಕೆಲವರು ದೇವಸ್ಥಾನದ ಆವರಣದಲ್ಲಿರುವ ಹುತ್ತ ಹಾಗೂ ನಾಗರ ಮೂರ್ತಿಗಳಿಗೆ ಹಾಲೆರೆದರು.

ಪಟ್ಟಣದ ಚಿಕ್ಕಪೇಟೆಯ ಶ್ರೀ ಸಿದ್ಧಿವಿನಾಯಕ ದೇವಸ್ಥಾನದ ಪಕ್ಕ, ಸೊಪ್ಪಿನ ಕೇರಿಯ ಶ್ರೀ ದುರ್ಗಾಂಬ ದೇವಸ್ಥಾನ ಹಿಂಭಾಗ, ಶ್ರೀ ರಂಗನಾಥ ದೇವಸ್ಥಾನ, ಮರೂರು ರಸ್ತೆ, ಹಿರೇಶಕುನದ ಸಾಗರ ರಸ್ತೆ, ಕಾನುಕೇರಿಯ ನಾಗರ ಕಟ್ಟೆ ಸೇರಿದಂತೆ ವಿವಿಧೆಡೆ ಇರುವ ಅರಳಿಮರದ ಅಡಿಯಲ್ಲಿರುವ ನಾಗರ ಮೂರ್ತಿಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

ಹಿಂದೂ–ಮುಸ್ಲಿಂ ದೇವರಾಧನೆಯ ಸ್ಥಳವಾದ ಉರಗನಹಳ್ಳಿಯ ಕಾಳಿಂಗೇಶ್ವರ ದೇವಾಲಯದಲ್ಲಿ ನಾಗರ ಪಂಚಮಿ ದಿನ ಅಂಗವಾಗಿ ಸಹಸ್ರಾರು ಭಕ್ತರು ವಿಶೇಷ ಪೂಜೆ ಸಲ್ಲಿಸಿ, ದೇವಸ್ಥಾನ ಹಿಂಭಾಗದ ನಾಗರ ಮೂರ್ತಿಗಳಿಗೆ ಹಾಲೆರೆದು ಇಷ್ಟಾರ್ಥ ಸಿದ್ಧಿಗಾಗಿ ಪ್ರಾರ್ಥಿಸಿದರು.

ಈ ಗ್ರಾಮದಲ್ಲಿ ಉರಗಗಳ ಸಂಖ್ಯೆ ಹೆಚ್ಚಿದ್ದು, ಗ್ರಾಮದ ಮನೆ, ಹೊಲ–ಗದ್ದೆ ಎನ್ನದೆ ಎಲ್ಲೆಂದರಲ್ಲಿ ಕಾಣಿಸಿಕೊಳ್ಳುವುದು ಸಾಮಾನ್ಯ. ಆದರೆ, ಇದುವರೆಗೂ ಯಾರನ್ನು ಕಚ್ಚಿಲ್ಲ ಹಾಗೂ ಯಾರೂ ಹಾವನ್ನು ಕೊಂದಿಲ್ಲ. ಇಲ್ಲಿನ ದೇವರಿಗೆ ಹರಕೆ ಹೊತ್ತ ಸುತ್ತಲಿನ ತಾಲೂಕು, ಜಿಲ್ಲೆಗಳ ಭಕ್ತರು ನಾಗರ ಪಂಚಮಿಯಂದು ಹರಕೆ ಒಪ್ಪಿಸುವುದು ರೂಢಿಯಾಗಿದೆ. ಕಾಳಿಂಗೇಶ್ವರ ದೇವಸ್ಥಾನ ಮುಂಭಾಗ ಬೇವಿನ ಮರಕ್ಕೆ ಹಾಗೂ ಶ್ರೀ ಕಾಳಿಂಗೇಶ್ವರ ದೇವರಿಗೆ ಅರ್ಚನೆ ಮಾಡಿಸಿದರು.



ನಂತರ ಇಬ್ರಾಹಿಂ ಸ್ವಾಮಿ ದರ್ಗಾಕ್ಕೆ ತೆರಳಿ ಪ್ರಾರ್ಥನೆ ಸಲ್ಲಿಸಿದರು.

ಹೊಸ ಉಡುಗೆ ತೊಟ್ಟ ಭಕ್ತರು, ದೇವರಿಗೆ ಹಾಲು, ಎಳ್ಳು ಉಂಡೆ, ಶೇಂಗಾ ಉಂಡೆ, ರವೆ ಉಂಡೆ, ಪಾಯಿಸ, ಕೇಸರಿ ಬಾತ್, ಚಿತ್ರನ್ನ ಸೇರಿದಂತೆ ಹಲವು ಭಕ್ಷ್ಯಗಳನ್ನು ನೈವೇದ್ಯ ಮಾಡಿದರು. ಸಮರ್ಪಕ ಬಸ್ ವ್ಯವಸ್ಥೆ ಇಲ್ಲದೇ ಭಕ್ತರು ಮುಖ್ಯ ಬಸ್ ನಿಲ್ದಾಣದಿಂದ ದೇವಸ್ಥಾನಕ್ಕೆ ತುಂತುರು ಮಳೆಯಲ್ಲೆ 2 ಕಿ.ಮೀ. ನಡೆದು ಸಾಗಿದರು.

## ಜಿಲ್ಲಾಡಳಿತ ಭವನದಲ್ಲಿ ರಕ್ತದಾನ ಶಿಬಿರ



ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಮ್ಸ್ ರಕ್ತ ನಿಧಿ ಕೇಂದ್ರ, ಜಿಲ್ಲಾ ಆಸ್ಪತ್ರೆ ಇವರುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ಗದಗ ಇವರ ನೇತೃತ್ವದಲ್ಲಿ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ದಲ್ಲಿ ಮಂಗಳವಾರ ಮೇಘಾ ರಕ್ತದಾನ ಶಿಬಿರವನ್ನು ಹಮ್ಮಿಕೊಳ್ಳಲಾಯಿತು.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಮಾತನಾಡಿ ರಕ್ತದಾನವು ಅಮೂಲ್ಯ ದಾನವಾಗಿದೆ. ರಕ್ತದಾನ ಮಾಡುವುದರಿಂದ ಒಂದು ಜೀವ ಉಳಿಸಬಹುದು ಹಾಗೂ ಅನೇಕ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ನೀಡಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್.ನೀಲಗುಂದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ, ಡಿಎಲ್‌ಓ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಕುಟುಂಬ ಕಲ್ಯಾಣಾದಿಕಾರಿ ಡಾ. ವೈ.ಕೆ. ಭಜಂತ್ರಿ, ಡಾ.ಎಸ್.ಸುಸ್ಮಿತಾ, ಡಾ.ಸಾಗರ ಪಟ್ಟೇದ, ಡಾ. ಸಾಕ್ಷಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಶುಂಠಿಗೆ ಪೈರಿಕುಲೇರಿಯಾ–ಎಲೆಚುಕ್ಕೆ ರೋಗ : ನಿರ್ವಹಣಾ ಕ್ರಮಗಳ ಕುರಿತು ಸಲಹೆ

ಶಿವಮೊಗ್ಗ : ಜಿಲ್ಲೆಯ ಎಲ್ಲಾ ಶುಂಠಿ ಬೆಳೆಯುವ ಪ್ರದೇಶಗಳಲ್ಲಿ ಪೈರಿಕುಲೇರಿಯಾ ಎಂಬ ಶಿಲೀಂಧ್ರದಿಂದ ಎಲೆಚುಕ್ಕೆ ರೋಗವು ಹೊಸದಾಗಿ ಉಲ್ಬಣಗೊಂಡಿದ್ದು, ಶುಂಠಿ ಬೆಳೆಗಾರರು ನಿರ್ವಹಣಾ ಕ್ರಮಗಳನ್ನು ತಕ್ಷಣದಿಂದಲೇ ತೆಗೆದುಕೊಳ್ಳಬೇಕೆಂದು ಕೆಳದಿ ಶಿವಪ್ಪನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಪ್ರಕಟಣೆಯಲ್ಲಿ ತಿಳಿಸಿದೆ.

ಈ ರೋಗವು ಗಾಳಿಯಿಂದ ಹಾಗೂ ಮಳೆ ಹನಿಗಳ ಮೂಲಕ ಒಂದು ಗಿಡದಿಂದ ಮತ್ತೊಂದು ಗಿಡಕ್ಕೆ ಮತ್ತು ಒಂದು ಹೊಲದಿಂದ ಮತ್ತೊಂದೆಡೆಗೆ ಬೇಗನೆ ಹರಡಲಿದೆ. ಅತೀ ಹೆಚ್ಚಿನ ಮಳೆ ಮತ್ತು ಅಧಿಕ ತೇವಾಂಶದ ಜೊತೆಗೆ ಕಡಿಮೆ ತಾಪಮಾನ ರೋಗ ಹರಡಲು ಪೂರಕ ವಾತಾವರಣವಾಗಿದೆ.

ಈ ರೋಗದಿಂದ ಶುಂಠಿ ಬೆಳೆಗಳಲ್ಲಿ ಮೊದಲಿಗೆ ಎಲೆಗಳ ಮೇಲೆ ಕಪ್ಪು ಅಥವಾ ಹಸಿರು ಬಣ್ಣದ ಚುಕ್ಕೆಗಳು ಕಂಡುಬರಲಿದ್ದು, ಸುತ್ತಲೂ ಕಂದು ಬಣ್ಣದಿಂದ ಕೂಡಿರುತ್ತದೆ. ಕ್ರಮೇಣವಾಗಿ ಸಸ್ಯದ ಎಲ್ಲಾ ಭಾಗಗಳಿಗೆ ಈ ಚುಕ್ಕೆಗಳು ಆವರಿಸಿ ಎಲೆಗಳು ಒಣಗಿ, ಸಸಿಗಳು ಸಾಯಲಾರಂಭಿಸುತ್ತವೆ.

ನಿರ್ವಹಣಾ ಕ್ರಮಗಳು:

ಜಿಲ್ಲೆಯಲ್ಲಿ ಶುಂಠಿ ಬೆಳೆಗಳಲ್ಲಿ ಪೈರಿಕುಲೇರಿಯಾ ಎಂಬ ಶಿಲೀಂಧ್ರದಿಂದ ಎಲೆಚುಕ್ಕೆ ರೋಗವು ಹೆಚ್ಚಾಗಿ ಉಲ್ಬಣಿಸುತ್ತಿದ್ದು, ರೋಗವನ್ನು ಹತೋಟಿಗೆ ತರಲು ಶಿಲೀಂಧ್ರ ರನಾಶಕಗಳಾದ ಹೆಕ್ಸಾಕೋನೋಜೋಲ್ 25 ಇಸಿ 1 ಮಿ.ಲೀ. ಅಥವಾ ಟೆಬುಕೋನೋಜೋಲ್ 25 ಇಸಿ 1 ಮಿ.ಲೀ. ಅಥವಾ ಟೆಬುಕೋನೋಜೋಲ್ + ಟ್ರೈಫ್ಲಾಕ್ಸಿಸ್ಟ್ರೊಬಿನ್ 0.5 ಮಿ.ಲೀ. ಅಥವಾ ಅಜಾಕ್ಸಿಸ್ಟ್ರೋಬಿನ್ + ಡೈಫೆನ್‌ಕೋನೋಜೋಲ್ 0.5 ಮಿ.ಲೀ. ಒಂದು ಲೀಟರ್ ನೀರಿಗೆ ಬೆರೆಸಿ ಜೊತೆಗೆ ಒಂದು ಮಿ.ಲೀ. ಅಂಟು ಅಥವಾ ರಾಳವನ್ನು ಸೇರಿಸಿ ಮಳೆ ಬಿಡುವಿನ ಸಮಯದಲ್ಲಿ ಸಿಂಪಡಿಸಬೇಕು. ಮತ್ತೆ ಹದಿನೈದು ದಿನಗಳ ಅಂತರದಲ್ಲಿ ಮೇಲೆ ತಿಳಿಸಿರುವ ಯಾವುದಾದರೊಂದು ಶಿಲೀಂಧ್ರ ನಾಶಕವನ್ನು 2 ರಿಂದ 3 ಬಾರಿ ಸಿಂಪಡಿಸಬೇಕು.

ಮೇಲೆ ತಿಳಿಸಿರುವ ವಾತಾವರಣವು ಕೆಂಪು ಕೊಳೆ ಹಾಗೂ ಹಸಿರು ಕೊಳೆ ರೋಗಗಳಿಗೂ ಸೂಕ್ತವಾಗಿದ್ದು, ಎಲೆ ಚುಕ್ಕೆ ರೋಗದ ಹತೋಟಿಗೆ ಉಪಯೋಗಿಸುವ ಶಿಲೀಂಧ್ರ ನಾಶಕದ ಜೊತೆಯಲ್ಲಿ ವಾಲಿಡಮೈಸಿನ್ 2 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರಸಿ ಸಿಂಪಡಿಸುವುದು ಸೂಕ್ತ ಎಂದು ತಿಳಿಸಿದ್ದಾರೆ.

ಪೈರಿಕುಲೇರಿಯಾ ಎಲೆಚುಕ್ಕೆ ರೋಗಕ್ಕೆ ಸಂಬಂಧಿಸಿದಂತೆ ಹೆಚ್ಚಿನ ಮಾಹಿತಿಗಾಗಿ ಇರುವಕ್ಕಿಯ ಕೃಷಿ ವಿಜ್ಞಾನಗಳ ಮಹಾವಿದ್ಯಾಲಯದ ಸಸ್ಯ ರೋಗಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಹೆಚ್.ಬಿ.ನರಸಿಂಹಮೂರ್ತಿ–8050173788, ಶಿವಮೊಗ್ಗ ವಲಯ ಕೃಷಿ ಮತ್ತು ತೋಟಗಾರಿಕೆ ಸಂಶೋಧನಾ ಕೇಂದ್ರದ ಸಸ್ಯ ರೋಗಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ. ಇಮ್ರಾನ್ ಖಾನ್, ಹೆಚ್. ಎಸ್.– 9379228200 ಹಾಗೂ ಇರುವಕ್ಕಿ ರೈತರ ತರಬೇತಿ ಸಂಸ್ಥೆಯ ವಿಸ್ತರಣಾ ನಿರ್ದೇಶನಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಕೃಷ್ಣ ರೆಡ್ಡಿ, ಪಿ. – 9483162891 ಇವರುಗಳನ್ನು ಸಂಪರ್ಕಿಸಬಹುದು.

## ಚಿಕ್ಕಮಗಳೂರಿನ ಶ್ವಾನಗಳಿಗೆ ಊಟ ಹಾಕುವಂತಿಲ್ಲ



ಚಿಕ್ಕಮಗಳೂರು : ಬೆಂಗಳೂರಿನಲ್ಲಿ ಬೀದಿ ನಾಯಿಗಳಿಗೆ ಬಿರಿಯಾನಿ ಭಾಗ್ಯ ಒದಗಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮುಂದಾಗಿದೆ. ಇತ್ತ ಚಿಕ್ಕಮಗಳೂರಲ್ಲಿ ಇದಕ್ಕೆ ತದ್ವಿರುದ್ಧವಾಗಿ ಬೀದಿ ನಾಯಿಗಳಿಗೆ ಊಟ ಹಾಕಿದರೆ ಕೇಸ್ ಹಾಕಲಾಗುತ್ತಿದೆ. ನಗರದಲ್ಲಿ ಕಳೆದ ಮೂರು ದಿನಗಳಲ್ಲಿ ಮಕ್ಕಳು ಸೇರಿದಂತೆ 35ಕ್ಕೂ ಹೆಚ್ಚು ಜನರ ಮೇಲೆ ಬೀದಿ ನಾಯಿಗಳು ದಾಳಿ ಮಾಡಿವೆ. ಇದರ ಬೆನ್ನಲ್ಲೇ ನಾಯಿಗಳಿಗೆ ಊಟ ಹಾಕಿದರೆ ಕೇಸ್ ಹಾಕುವುದಾಗಿ ನಗರಸಭೆ ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದೆ.

35ಕ್ಕೂ ಹೆಚ್ಚು ಜನರ ಮೇಲೆ ಅಟ್ಯಾಕ್:

ಚಿಕ್ಕಮಗಳೂರು ನಗರದಾದ್ಯಂತ ಬೀದಿ ನಾಯಿಗಳ ಸಂಖ್ಯೆ ಹೆಚ್ಚಳವಾಗಿದೆ. ಮಕ್ಕಳು ಸೇರಿದಂತೆ ಸಿಕ್ಕ ಸಿಕ್ಕವರ ಮೇಲೆ ದಾಳಿ ಮಾಡುತ್ತಿವೆ. ನಿನ್ನೆ ಒಂದೇ 20ಕ್ಕೂ ಹೆಚ್ಚು ಜನರ ಮೇಲೆ ದಾಳಿ ಮಾಡಿದ್ದು, ಕಳೆದ ಮೂರು ದಿನದಲ್ಲಿ 35ಕ್ಕೂ ಹೆಚ್ಚು ಜನರ ಮೇಲೆ ಅಟ್ಯಾಕ್ ಮಾಡಿವೆ. ಸದ್ಯ ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ.

ಇತ್ತ ಬೀದಿ ನಾಯಿಗಳ ದಾಳಿ ಹೆಚ್ಚಾದ ಬೆನ್ನಲ್ಲೇ ಚಿಕ್ಕಮಗಳೂರು ನಗರಸಭೆಯಿಂದ ನಗರದ ನಿವಾಸಿಗಳಿಗೆ ಕೇಸ್ ಹಾಕುವ ಎಚ್ಚರಿಕೆ ನೀಡಲಾಗಿದೆ. ಉಳಿದ ಆಹಾರ ನಾಯಿಗಳಿಗೆ ಹಾಕಬಾರದು. ಒಂದು ವೇಳೆ ಊಟ ಹಾಕಿದರೆ ಸುಪ್ರೀಂ ಕೋರ್ಟ್ ಆದೇಶದಂತೆ ಕ್ರಮಕೈಗೊಳ್ಳುವುದಾಗಿ ನಗರಸಭೆ ಎಚ್ಚರಿಕೆ ನೀಡಿದೆ.

ನಗರಸಭೆ ಪ್ರಕಟಣೆಯಲ್ಲಿ ಏನಿದೆ ?

ಚಿಕ್ಕಮಗಳೂರು ನಗರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ನಾಯಿ ಸಾಕಾಣಿಕೆದಾರರು ನಿಮ್ಮ ನಾಯಿಗಳನ್ನು ರಸ್ತೆಗೆ ಬಿಡದೆ ಬೆಲ್ಟ್, ಹಗ್ಗದಿಂದ ಕಟ್ಟಿ ನಿಮ್ಮ ಆವರಣದಲ್ಲೇ ಇಟ್ಟುಕೊಳ್ಳಿ. ಸಾರ್ವಜನಿಕರು ತಮ್ಮ ಮನೆಯಲ್ಲಿ ಉಳಿದ ಆಹಾರ ಪದಾರ್ಥಗಳನ್ನು ಸಾರ್ವಜನಿಕ ಸ್ಥಳಗಳಲ್ಲಿ ಬೀದಿ ನಾಯಿಗಳಿಗೆ ಆಹಾರವನ್ನು ಹಾಕುತ್ತಿರುವುದು ಕಂಡುಬಂದಿರುವುದರಿಂದ ನಗರ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಸಂಖ್ಯೆ ಹೆಚ್ಚಾಗುತ್ತಿರುವುದಲ್ಲದೇ ಇದರಿಂದ ಸಾರ್ವಜನಿಕರಿಗೆ ಉಪದ್ರವಗಳೊಂದಿಗೆ ನಾಯಿ ಕಡಿತಗಳ ಸಂಖ್ಯೆ ಹೆಚ್ಚಾಗಿದ್ದು, ಈ ಬಗ್ಗೆ ಕಛೇರಿಗೆ ಸಾರ್ವಜನಿಕರಿಂದ ಸಾಕಷ್ಟು ದೂರುಗಳು ಬರುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಆಹಾರವನ್ನು ಹಾಕುವುದು ಕಂಡುಬಂದಲ್ಲಿ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಸಂಬಂಧಿಸಿದವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಸೂಚಿಸಲಾಗಿದೆ.

ನಗರಸಭೆ ಕಮಿಷನರ್ ವಿರುದ್ಧ ಜನರು ಆಕ್ರೋಶ :

ನಗರದಾದ್ಯಂತ ಸಾವಿಕ್ಕೂ ಅಧಿಕ ಬೀದಿ ನಾಯಿಗಳು ಬೀಡು ಬಿಟ್ಟಿವೆ. ನಾಯಿ ಸೆರೆ ಹಿಡಿಯುವುದನ್ನು ಬಿಟ್ಟು ಕೇಸ್ ಹಾಕುತ್ತೇವೆ ಎಂದ ನಗರಸಭೆ ಕಮಿಷನರ್ ಬಸವರಾಜ್ ವಿರುದ್ಧ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ಆಗಸ್ಟ್ 6 ಜಿಲ್ಲಾಮಟ್ಟದ ಮ್ಯಾರಥಾನ್ ಸ್ಪರ್ಧೆ

ಚಿಕ್ಕಮಗಳೂರು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಅಥ್ಲೆಟಿಕ್ ಅಸೋಸಿಯೇಶನ್, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕದ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 6 ರಂದು ಬೆಳಿಗ್ಗೆ 7.30ಕ್ಕೆ 5 ಕಿ.ಮೀ. ಮ್ಯಾರಥಾನ್ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ.

ಬೈಪಾಸ್ ರಸ್ತೆ ಕಲ್ಯಾಣನಗರದ ನರಿಗುಡ್ಡೇನಹಳ್ಳಿ ವೃತ್ತ ಸಮೀಪದ ಜಿಲ್ಲಾ ಶತಮಾನೋತ್ಸವ ಕ್ರೀಡಾಂಗಣದಲ್ಲಿ ನಡೆಯುವ ಈ ಮ್ಯಾರಥಾನ್ ಸ್ಪರ್ಧೆಯಲ್ಲಿ 17 ರಿಂದ 25 ವರ್ಷದೊಳಗಿನ (ಜನ್ಮ ದಿನಾಂಕ 07.08.2022 ದಿಂದ 06.08.2008ರೊಳಗಿರಬೇಕು) ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಬಹುದು.

ಆಸಕ್ತರು ಆಗಸ್ಟ್ 3 ರೊಳಗೆ ಹೆಸರು ನೋಂದಾಯಿಸಿಕೊಳ್ಳಬೇಕು. ವಿಜೇತ ವಿದ್ಯಾರ್ಥಿಗಳಿಗೆ ನಗದು ಬಹುಮಾನ (ಪುರುಷರು ಮತ್ತು ಮಹಿಳೆಯರು– ಈ ಎರಡೂ ವಿಭಾಗಗಳಿಗೆ) ಪ್ರಥಮ ರೂ. 5,000, ದ್ವಿತೀಯ ರೂ.3500 ಹಾಗೂ ತೃತೀಯ ರೂ.2500 ಗಳು ಹಾಗೂ ಪ್ರಶಸ್ತಿಪತ್ರವನ್ನು ನೀಡಲಾಗುವುದು. ಪ್ರಥಮ ಬಹುಮಾನ ಪಡೆದ ವಿದ್ಯಾರ್ಥಿಗಳು ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆ ಆಗಲಿದ್ದಾರೆ. ಹೆಚ್ಚಿನ ಮಾಹಿತಿಗೆ 9449846973 ಅಥವಾ 9449846999 ಸಂಖ್ಯೆಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ತಡೆಗಟ್ಟುವ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಡಿ ಬಿದ್ದ 2 ಸಾವಿರ ಎಕರೆಯ ಬೃಹತ್ ಕೆರೆ

ಚಿಕ್ಕಮಗಳೂರು: ಕಡೂರು ತಾಲೂಕಿನ ಸಖರಾಯಪಟ್ಟಣ ಸಮೀಪದ 2800 ಎಕರೆಗೂ ಹೆಚ್ಚು ವಿಸ್ತೀರ್ಣದ ಐತಿಹಾಸಿಕ ಅಯ್ಯನಕೆರೆ ಹಾಗೂ ಮದಗದ ಕೆರೆ ತುಂಬಿ ಕೋಡಿ ಬಿದ್ದಿವೆ.

ಏಳು ಗುಡ್ಡಗಳ ಮಧ್ಯೆ ಇರುವ ಬೃಹತ್ ಕೆರೆಗಳು ತುಂಬಿ ಕೋಡಿ ಬಿದ್ದಿವುದರಿಂದ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ. ಮುಳ್ಳಯ್ಯನಗಿರಿ ಭಾಗದಲ್ಲಿ ಸುರಿದ ಭಾರೀ ಮಳೆಯಿಂದಾಗಿ ಚಂದ್ರದ್ರೋಣ ಪರ್ವತಗಳ ಸಾಲಿನಲ್ಲಿರುವ ಅಯ್ಯನಕೆರೆ ಹಾಗೂ ಮದಗದ ಕೆರೆ ತುಂಬಿ ಕೋಡಿ ಬಿದ್ದಿದೆ. ಇದರಿಂದ ಕೆರೆ ಸುತ್ತಮುತ್ತಲಿನ 34 ಹಳ್ಳಿಯ ಜನ–ಜಾನುವಾರುಗಳ ನೀರಿನ ಬವಣೆ ತಪ್ಪಿದಂತಾಗಿದೆ.

ಅಯ್ಯನಕೆರೆ 2036 ಎಕರೆ ವಿಸ್ತೀರ್ಣ ಹಾಗೂ 36 ಅಡಿ ಆಳವಿದೆ. ಮದಗದ ಕೆರೆ 60 ಅಡಿ ಆಳ ಹಾಗೂ 843 ಎಕರೆ ವಿಸ್ತೀರ್ಣ ಹೊಂದಿದೆ. ರೈತರು ಕೆರೆ ತುಂಬುತ್ತೋ ಇಲ್ವೋ ಎಂಬ ಆತಂಕದಲ್ಲಿದ್ದರು. ಆದರೆ, ಈ ಬಾರಿ ಉತ್ತಮ ಮಳೆಯಾದ ಪರಿಣಾಮ ಪ್ರತಿ ವರ್ಷ ಆಗಸ್ಟ್ ಮಧ್ಯದಲ್ಲಿ ಕೋಡಿ ಬೀಳುತ್ತಿದ್ದ ಕೆರೆ ಈ ವರ್ಷ ಜುಲೈ ಕೊನೆಯಲ್ಲೇ ಕೋಡಿ ಬಿದ್ದಿದೆ. ಕೆರೆ ಕೋಡಿ ಬಿದ್ದಿರೋದ್ರಿಂದ 2 ಕೆರೆ ಸುತ್ತಲಿನ ಸುಮಾರು 34ಕ್ಕೂ ಹೆಚ್ಚು ಹಳ್ಳಿಗಳಿಗೆ ಕುಡಿಯೋ ನೀರು ಹಾಗೂ ಬೆಳೆಗೆ ಸಮಸ್ಯೆ ಇಲ್ಲದಂತಾಗಿದೆ.

ಅಯ್ಯನಕೆರೆ ತುಂಬಿ ಕೋಡಿ ಬಿದ್ದಿ ನೀರು ವೇದಾವತಿ ನದಿ ಮೂಲಕ ವಾಣಿ ವಿಲಾಸ ಜಲಾಶಯಕ್ಕೆ ಸೇರುತ್ತದೆ. ಕೆರೆಗಳು ಕೋಡಿ ಬಿದ್ದಿದ್ದರಿಂದ ಪ್ರವಾಸಿಗರು ಆಗಮಿಸಿ ಸ್ವಲ್ಪ ಕಾಲ ಅಲ್ಲಿ ವಿಹರಿಸಿ ಹೋಗುತ್ತಿದ್ದಾರೆ.

## ಮಳೆ ಹಾನಿ ಪ್ರದೇಶಕ್ಕೆ ಶಾಸಕ ಕೆ.ಸಿ ವೀರೇಂದ್ರ ಪಪ್ಪಿ ಭೇಟಿ



ಚಿತ್ರದುರ್ಗ: ಮಳೆ ಹನಿಯಿಂದ ಮನೆ ಕಳೆದುಕೊಂಡ ಕುಟುಂಬಸ್ಥರನ್ನು ಶಾಸಕ ಕೆ.ಸಿ ವೀರೇಂದ್ರ ಪಪ್ಪಿಅವರು ಭೇಟಿ ಮಾಡಿ ವೈಯಕ್ತಿಕವಾಗಿಆರ್ಥಿಕ ನೆರವು ನೀಡಿ, ಸರ್ಕಾರದಿಂದ ಮನೆಗಳನ್ನು ಮಂಜೂರು ಮಾಡಿಸಿಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ತಾಲೂಕಿನ ಓಬಣ್ಣನಹಳ್ಳಿ ಗ್ರಾಮಕ್ಕೆ ಮಂಗಳವಾರ ಭೇಟಿ ನೀಡಿ ಮಳೆ ಹಾನಿಯಿಂದಾಗಿ ಮನೆಯನ್ನು ಕಳೆದುಕೊಂಡಂತಹ ತಿಮ್ಮಯ್ಯ, ತಿಮ್ಮಕ್ಕಎಂಬುವರ ಮನೆಯು ಕುಸಿದಿದ್ದು ಅದೃಷ್ಟ ಪ್ರಾಣಾಪಾಯದಿಂದ ಪಾರಾಗಿದ್ದಾರೆ, ಮನೆಯನ್ನ ಕಳೆದುಕೊಂಡು ಕಂಗಲಾಗಿದ್ದಕುಟುಂಬಸ್ಥರ ನೆರವಿಗೆ ಶಾಸಕ ಕೆ.ಸಿ ವೀರೇಂದ್ರ ಪಪ್ಪಿಅವರುದಾವಿಸಿ ಆರ್ಥಿಕ ಸಹಾಯ ಮಾಡಿದ್ದಾರೆ.

ಕ್ಷೇತ್ರದಅಭಿವೃದ್ಧಿಗೋಸ್ಕರ ಮುಖ್ಯಮಂತ್ರಿಗಳು ಹಾಗೂ ಸಚಿವರನ್ನು ಭೇಟಿ ಮಾಡಿ ಅನುದಾನಗಳನ್ನು ತಂದುಕ್ಷೇತ್ರದಅಭಿವೃದ್ಧಿ ಕೆಲಸಗಳನ್ನು ಮಾಡುವೆ, ಈಗಾಗಲೇ ಶಾಸಕರಅನುದಾನದಅಡಿಯಲ್ಲಿಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ, ಚರಂಡಿ, ಚೆಕ್ ಡ್ಯಾಂಗಳು, ಅಂಗನವಾಡಿ ಕೇಂದ್ರಗಳು ಇತರೆಅಭಿವೃದ್ಧಿ ಕಾರ್ಯಗಳ ಭೂಮಿ ಪೂಜೆಯನ್ನು ನೆರವೇರಿಸಲಾಗಿದೆ, ಮುಂದಿನ ದಿನಗಳಲ್ಲಿ ಉಳಿದಂತಹ ಕ್ಷೇತ್ರಗಳ ಹಳ್ಳಿಗಳಲ್ಲಿಯೂ ಸಹ ಭೂಮಿ ಪೂಜೆ ನೆರವೇರಿಸಲಾಗುವುದುಎಂದು ತಿಳಿಸಿದರು.

ಗ್ರಾಮದಲ್ಲಿ ಸಿಸಿ ರಸ್ತೆಗಳು ಬಾಕ್ಸ್‌ಚರಂಡಿಇಲ್ಲದೆಇರುವುದರಿಂದ ಸಾಕಷ್ಟು ಸಮಸ್ಯೆಗಳನ್ನ ಎದುರಿಸುತ್ತಿದ್ದೇವೆಎಂದು ಶಾಸಕರಿಗೆಗ್ರಾಮಸ್ಥರು ಮನವಿ ಮಾಡಿದರು ಮನವಿಗೆ ಸ್ಪಂದಿಸಿದ ಶಾಸಕರುಗ್ರಾಮಕ್ಕೆ ಸಿಸಿ ರಸ್ತೆ ಹಾಗೂ ಬಾಕ್ಸ್ ಚರಂಡಿಗಳನ್ನ ನಿರ್ಮಾಣ ಮಾಡಿಕೊಡುವುದಕ್ಕೆಅತಿ ಶೀಘ್ರದಲ್ಲೇ ಭೂಮಿ ಪೂಜೆಯನ್ನು ಮಾಡಲಾಗುವುದುಎಂದುಗ್ರಾಮಸ್ಥರಿಗೆಸ್ಥಳದಲ್ಲೇ ಭರವಸೆ ನೀಡಿದರು. ಗ್ರಾಮದಲ್ಲಿರುವಂತಹಈಶ್ವರದೇವಾಲಯದೇವಸ್ಥಾನದಜೀರ್ಣೋದ್ಧಾರಕ್ಕೆ 5 ಲಕ್ಷ ಹಣವನ್ನು ಸ್ಥಳದಲ್ಲೇ ದೇವಾಲಯದಕಮಿಟಿಯವರಿಗೆಚೆಕ್ ವಿತರಿಸಿದ್ದಾರೆ.

ಈ ಸಂದರ್ಭದಲ್ಲಿಚಿತ್ರದುರ್ಗಜಿಲ್ಲಾಗ್ಯಾರಟಿ ಸಮಿತಿಅಧ್ಯಕ್ಷರಾದ ಶಿವಣ್ಣ, ಓಬಣ್ಣನಹಳ್ಳಿ ಗ್ರಾಮ ಪಂಚಾಯತಿ ಸದಸ್ಯ ಓಬಳೇಶ್, ಚಿತ್ರದುರ್ಗಗ್ರಾಮಾಂತರಯುವ ಕಾಂಗ್ರೆಸ್‌ಅಧ್ಯಕ್ಷ ಲಕ್ಷ್ಮಣ್, ಗ್ರಾಮಸ್ಥರಾದ ವೆಂಕಟೇಶ್, ಹನುಮಂತಪ್ಪ, ತಿಮ್ಮಯ್ಯ, ರುದ್ರಪ್ಪ, ಚಂದ್ರಪ್ಪ, ರಮೇಶ್, ಈಶ್ವರ್, ಜಯಣ್ಣ, ಹನುಮಂತಪ್ಪ, ತಿಮ್ಮಪ್ಪ ನಾಗರಾಜ್, ಮಂಜುನಾಥ್ ಹಾಗೂ ಇತರರು ಇದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**